Volume : 9 | Issue : 170 | September : 23 : 2026 : Wednesday
ಸಂಪುಟ : 9 | ಸಂಚಿಕೆ : 170 | ಸೆಪ್ಟಂಬರ್ : 23 : 2026 : ಬುಧವಾರ

www.VIKRAMAVAHINI.com

ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ

# ವಿಕ್ರಮ ವಾಹಿನಿ

ಪುಟ 4 | ₹2 | ಕನ್ನಡ ದಿನಪತ್ರಿಕೆ

VIKRAMA VAHINI
PRGI NO: KARKAN/2018/78481



'ರಣ ವಿಕ್ರಮ' ಬಳಿಕ ನಟಿ ಅದಾ ಶರ್ಮಾ 'ರಾಮರಸ' ಚಿತ್ರದ ಮೂಲಕ ಮತ್ತೆ ಕನ್ನಡಕ್ಕೆ ಮರಳಿದ್ದಾರೆ. ಬಿಎಂ ಗಿರಿರಾಜ್ ನಿರ್ದೇಶನದ ಚಿತ್ರದಲ್ಲಿ ಕಾರ್ತಿಕ್ ಮಹೇಶ್, ಪ್ರಜ್ವಲ್ ದೇವರಾಜ್, ಶರಣ್ ಹಾಗೂ ಹೆಬ್ಬಾ ಪಟೇಲ್ ಪ್ರಮುಖ ಪಾತ್ರಗಳಲ್ಲಿ ನಟಿಸಿದ್ದಾರೆ.

ಒಂದು ಸಾಲಿನ ನಿರ್ಣಯದಿಂದ ಪ್ರಯೋಜನವಿಲ್ಲ; **ವೈಜ್ಞಾನಿಕ ಪರಿಹಾರ ಅಗತ್ಯ** ಪುಟ 3

**ಮೋದಿ-ಪೇಜಾವರ ಶ್ರೀ ಭೇಟಿ; ಲಾಂಛನ ಅನಾವರಣ** ಪುಟ 4



## ■ ಸುದ್ದಿ ಚುಟುಕು

## ಅ.7ರಂದು ಸಾರಿಗೆ ನೌಕರರ ಧರಣಿ

● ವಿಕ್ರಮ ವಾಹಿನಿ । ಬೆಂಗಳೂರು

ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ರಾಜ್ಯದ ನಾಲ್ಕು ಸಾರಿಗೆ ನಿಗಮಗಳ ನೌಕರರ ಜಂಟಿ ಕ್ರಿಯಾ ಸಮಿತಿ ಅಕ್ಟೋಬರ್ 7ರಂದು ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾನವನದಲ್ಲಿ ಧರಣಿ ಸತ್ಯಾಗ್ರಹ ನಡೆಸಲು ನಿರ್ಧರಿಸಿದೆ.

ಸಾರಿಗೆ ನೌಕರರ ವೇತನ ಪರಿಷ್ಕರಣೆ ಸೇರಿದಂತೆ ಹಲವು ಬೇಡಿಕೆಗಳ ಕುರಿತು ಸರ್ಕಾರದೊಂದಿಗೆ ಫೆಬ್ರವರಿ 18 ಮತ್ತು ಮೇ 12ರಂದು ನಡೆದ ಸಭೆಗಳಲ್ಲಿ ಭರವಸೆ ನೀಡಲಾಗಿದ್ದರೂ, ಅವುಗಳ ಅನುಷ್ಠಾನಕ್ಕೆ ಕ್ರಮ ಕೈಗೊಂಡಿಲ್ಲ ಎಂದು ಸಮಿತಿ ಆರೋಪಿಸಿದೆ.

2024ರ ಜನವರಿ 1ರಿಂದ ರಾಜ್ಯ ಸರ್ಕಾರಿ ನೌಕರರಿಗೆ ಅನ್ವಯವಾಗುವ ವೇತನ ಪರಿಷ್ಕರಣೆ ಸೌಲಭ್ಯವನ್ನು ಸಾರಿಗೆ ನೌಕರರಿಗೂ ನೀಡಬೇಕು. 2020ರ 12 ತಿಂಗಳ ವೇತನ ಬಾಕಿ ರೂ 1,792 ಕೋಟಿಯಲ್ಲಿ ಈಗಾಗಲೇ ಮಂಜೂರಾಗಿರುವ ರೂ 620 ಕೋಟಿ ಬಿಡುಗಡೆಯಾಗಿದ್ದು, ಉಳಿದ ರೂ 1,172 ಕೋಟಿಯನ್ನು ಒಂದೇ ಕಂತಿನಲ್ಲಿ ಪಾವತಿಸಬೇಕು ಎಂದು ಒತ್ತಾಯಿಸಿದೆ.

ಚಾಲಕರು, ನಿರ್ವಾಹಕರು ಹಾಗೂ ತಾಂತ್ರಿಕ ಸಿಬ್ಬಂದಿಗೆ ವಾರದ ರಜೆ ಮತ್ತು ಇತರ ರಜೆಗಳನ್ನು ಸಮರ್ಪಕವಾಗಿ ನೀಡುವುದು, ಕರ್ತವ್ಯ ಹಾಗೂ ವಿಶ್ರಾಂತಿಗೆ ಅಗತ್ಯ ಸೌಲಭ್ಯ ಕಲ್ಪಿಸುವುದು, ಬಾಕಿ ಇರುವ ಪಿಎಫ್, ಗ್ರಾಚ್ಯುಟಿ ಮತ್ತು ತುಟ್ಟಿ ಭತ್ಯೆ ಸೇರಿದಂತೆ ವಿವಿಧ ಸೌಲಭ್ಯಗಳನ್ನು ಒದಗಿಸುವಂತೆಯೂ ಆಗ್ರಹಿಸಲಾಗಿದೆ.

ಸಾರಿಗೆ ನಿಗಮಗಳಿಗೆ ಶಕ್ತಿ ಯೋಜನೆಯಡಿ ಸರ್ಕಾರ ಪಾವತಿಸಬೇಕಿರುವ ಬಾಕಿ ಮೊತ್ತವನ್ನು ತಕ್ಷಣ ಬಿಡುಗಡೆ ಮಾಡಿ ನಿಗಮಗಳಿಗೆ ಆರ್ಥಿಕ ನೆರವು ನೀಡಬೇಕು ಎಂದು ಸಮಿತಿ ಒತ್ತಾಯಿಸಿದೆ. ಬೇಡಿಕೆಗಳ ಈಡೇರಿಕೆಯಲ್ಲಿ ವಿಳಂಬವಾದರೆ ಮುಂದಿನ ಹೋರಾಟದ ಬಗ್ಗೆ ತೀರ್ಮಾನ ಕೈಗೊಳ್ಳುವುದಾಗಿ ಎಚ್ಚರಿಸಿದೆ.

## ರಸ್ತೆಗಳಲ್ಲಿ ಪಟಾಕಿ ಸಿಡಿಸಲು ಬಾಂಬೆ ಹೈಕೋರ್ಟ್ ನಿಷೇಧ

● ವಿಕ್ರಮ ವಾಹಿನಿ । ಮುಂಬೈ

ಗಣೇಶೋತ್ಸವದ ಹಿನ್ನೆಲೆಯಲ್ಲಿ ಸಾರ್ವಜನಿಕ ರಸ್ತೆಗಳಲ್ಲಿ ಪಟಾಕಿ ಸಿಡಿಸುವುದನ್ನು ಬಾಂಬೆ ಹೈಕೋರ್ಟ್ ನಿಷೇಧಿಸಿದೆ. ಹಗಲು ಅಥವಾ ರಾತ್ರಿ ಯಾವುದೇ ಸಮಯದಲ್ಲೂ ಸಾರ್ವಜನಿಕ ರಸ್ತೆಗಳಲ್ಲಿ ಪಟಾಕಿ ಸಿಡಿಸಲು ಅವಕಾಶವಿಲ್ಲ ಎಂದು ನ್ಯಾಯಮೂರ್ತಿಗಳಾದ ಗಿರೀಶ್ ಕುಲಕರ್ಣಿ ಮತ್ತು ನೀಲಾ ಗೋಖಲೆ ಅವರ ಪೀಠ ಸ್ಪಷ್ಟಪಡಿಸಿದೆ.

ಗಣೇಶೋತ್ಸವ ಮೆರವಣಿಗೆಗಳಲ್ಲಿ ಲೌಡ್‌ಸ್ಪೀಕರ್, ಡಿಜೆ ಹಾಗೂ ಲೇಸರ್ ಲೈಟ್‌ಗಳ ಬಳಕೆಯೂ ಅನಗತ್ಯ ಎಂದು ನ್ಯಾಯಾಲಯ ಅಭಿಪ್ರಾಯಪಟ್ಟಿದೆ. ಶಬ್ದ ಮತ್ತು ವಾಯುಮಾಲಿನ್ಯ ಉಂಟುಮಾಡದೆ ಹಬ್ಬಗಳನ್ನು ಆಚರಿಸುವ ಜವಾಬ್ದಾರಿ ಸಮಾಜದ ಮೇಲಿದೆ ಎಂದು ತಿಳಿಸಿದೆ. ಮುಂಬೈನಂತಹ ನಗರಗಳಲ್ಲಿ ಹೆಚ್ಚುತ್ತಿರುವ ವಾಯುಮಾಲಿನ್ಯ ಹಾಗೂ ಮೆರವಣಿಗೆಗಳ ವೇಳೆ ಉಂಟಾಗುವ ತೀವ್ರ ಶಬ್ದದ ಹಿನ್ನೆಲೆಯಲ್ಲಿ ನ್ಯಾಯಾಲಯ ಸ್ವಯಂಪ್ರೇರಿತವಾಗಿ ಪ್ರಕರಣ ದಾಖಲಿಸಿಕೊಂಡು ವಿಚಾರಣೆ ನಡೆಸುತ್ತಿದೆ. ಪಂಢರಪುರದ ವಾರಿಯಂತಹ ಮೆರವಣಿಗೆಗಳು ಅತಿಯಾದ ಶಬ್ದವಿಲ್ಲದೆ ಶಾಂತಿಯುತವಾಗಿ ನಡೆಯುವುದನ್ನು ನ್ಯಾಯಾಲಯ ಉದಾಹರಣೆಯಾಗಿ ಉಲ್ಲೇಖಿಸಿದೆ.



ಗುಜರಾತ್‌ನ ಏಕತಾ ನಗರದಲ್ಲಿ ಮಂಗಳವಾರ ನಡೆದ 72ನೇ ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಹಿರಿಯ ನಟ ಅನಂತ್ ನಾಗ್ ಅವರಿಗೆ ಪ್ರತಿಷ್ಠಿತ ದಾದಾಸಾಹೇಬ್ ಫಾಲ್ಕೆ ಪ್ರಶಸ್ತಿ ಪ್ರದಾನಿಸಿ ಗೌರವಿಸಿದರು.

## ನಡೆಯಲು ಕಷ್ಟಪಡುತ್ತಿರುವ ಶಾರುಖ್ ಖಾನ್!

● ವಿಕ್ರಮ ವಾಹಿನಿ । ಮುಂಬೈ

ಬಾಲಿವುಡ್ ನಟ ಶಾರುಖ್ ಖಾನ್ ಅವರು ಟಿ–ಸೀರೀಸ್ ಕಚೇರಿಗೆ ಭೇಟಿ ನೀಡಿ ಗಣಪತಿ ದರ್ಶನ ಪಡೆದ ವೇಳೆ ನಡೆಯಲು ಕಷ್ಟಪಡುತ್ತಿರುವಂತೆ ಕಂಡುಬಂದ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದ್ದು, ಅಭಿಮಾನಿಗಳಲ್ಲಿ ಆತಂಕ ಮೂಡಿಸಿದೆ.

ಶಾರುಖ್ ಖಾನ್ ಅವರು ತಮ್ಮ ಮ್ಯಾನೇಜರ್ ಪೂಜಾ ದದ್ಲಾನಿ ಅವರೊಂದಿಗೆ ಟಿ–ಸೀರೀಸ್ ಕಚೇರಿಗೆ ತೆರಳಿ ಅಲ್ಲಿ ಪ್ರತಿಷ್ಠಾಪಿಸಲಾಗಿದ್ದ ಗಣಪತಿಗೆ ಪೂಜೆ ಸಲ್ಲಿಸಿ ಆಶೀರ್ವಾದ ಪಡೆದಿದ್ದಾರೆ. ಕಪ್ಪು–ಬಿಳಿ ಚೆಕ್ಡ್ ಶರ್ಟ್ ಹಾಗೂ ಕಪ್ಪು ಪ್ಯಾಂಟ್ ಧರಿಸಿದ್ದ ನಟ, ಕಚೇರಿಗೆ ಪ್ರವೇಶಿಸುವ ಹಾಗೂ ಬಳಿಕ ಹೊರಬರುವ ದೃಶ್ಯಗಳು ವಿಡಿಯೋದಲ್ಲಿವೆ.

ವಿಡಿಯೋದಲ್ಲಿ ಆರಂಭದಲ್ಲಿ ಸಹಜವಾಗಿ ನಡೆಯುವಂತೆ ಕಂಡುಬಂದರೂ, ಕೆಲವು ದೃಶ್ಯಗಳಲ್ಲಿ ಶಾರುಖ್ ಖಾನ್ ನಿಧಾನವಾಗಿ ಹೆಜ್ಜೆ ಹಾಕುತ್ತಿರುವುದು ಹಾಗೂ ನಡೆಯಲು ಕೊಂಚ ಕಷ್ಟಪಡುತ್ತಿರುವಂತೆ ಕಾಣಿಸಿದೆ. ಇದನ್ನು ಗಮನಿಸಿದ ಅಭಿಮಾನಿಗಳು ಸಾಮಾಜಿಕ ಜಾಲತಾಣಗಳಲ್ಲಿ ಅವರ ಆರೋಗ್ಯದ ಬಗ್ಗೆ ಕಳವಳ ವ್ಯಕ್ತಪಡಿಸಿದ್ದಾರೆ.

ನಟನ ಈ ಸ್ಥಿತಿಗೆ ಕಾರಣವೇನು ಎಂಬ ಬಗ್ಗೆ ಯಾವುದೇ ಅಧಿಕೃತ



ಮಾಹಿತಿ ಲಭ್ಯವಾಗಿಲ್ಲ. ಕೆಲ ನೆಟ್ಟಿಗರು 'ಕಿಂಗ್' ಚಿತ್ರದ ಚಿತ್ರೀಕರಣದ ವೇಳೆ ಉಂಟಾದ ದೈಹಿಕ ಆಯಾಸ ಅಥವಾ ಗಾಯದ ಕಾರಣ ಇರಬಹುದು ಎಂದು ಊಹಿಸಿದ್ದರೆ, ಇನ್ನೂ ಕೆಲವರು ಸಾಮಾನ್ಯ ಸುಸ್ತಿನಿಂದಲೂ ಹೀಗಿರಬಹುದು ಎಂದು ಅಭಿಪ್ರಾಯಪಟ್ಟಿದ್ದಾರೆ. ವಿಡಿಯೋದಲ್ಲಿನ ದೃಶ್ಯಗಳನ್ನು ಆಧರಿಸಿ ನಟನ ಆರೋಗ್ಯದ ಬಗ್ಗೆ ಯಾವುದೇ ನಿರ್ಣಯಕ್ಕೆ ಬರಲು ಸಾಧ್ಯವಿಲ್ಲ.

# ಕಸ್ತೂರಿರಂಗನ್ ವರದಿ: ಸಮಿತಿ ರಚನೆಗೆ ಒಮ್ಮತ

**ಕಸ್ತೂರಿರಂಗನ್ ವರದಿಯ ನ್ಯೂನತೆ ಪರಿಶೀಲನೆಗೆ ನಿವೃತ್ತ ನ್ಯಾಯಾಧೀಶರ ಅಧ್ಯಕ್ಷತೆಯಲ್ಲಿ ಉನ್ನತ ಮಟ್ಟದ ಸಮಿತಿ ರಚಿಸಲು ವಿಧಾನಮಂಡಲದ ಉಭಯ ಸದನಗಳು ಸರ್ವಾನುಮತದ ನಿರ್ಣಯ ಕೈಗೊಂಡವು. ಗ್ರಾಮವಾರು ಹಾಗೂ ಸರ್ವೇ ನಂಬರ್‌ವಾರು ಭೌತಿಕ ಸಮೀಕ್ಷೆ ನಡೆಸಿ ಅಗತ್ಯ ಮಾರ್ಪಾಡು ಸೂಚಿಸಲು ಒಂದು ವರ್ಷದ ಕಾಲಾವಕಾಶ ಕೋರುವುದು ಹಾಗೂ ಕೇಂದ್ರಕ್ಕೆ ಸರ್ವಪಕ್ಷ ನಿಯೋಗ ಕೊಂಡೊಯ್ಯಲು ತೀರ್ಮಾನಿಸಲಾಯಿತು.**

● ವಿಕ್ರಮ ವಾಹಿನಿ । ಬೆಂಗಳೂರು

ಕಸ್ತೂರಿರಂಗನ್ ವರದಿಯ ನ್ಯೂನತೆಗಳನ್ನು ಪರಿಶೀಲಿಸಿ ಅಗತ್ಯ ಮಾರ್ಪಾಡುಗಳನ್ನು ಸೂಚಿಸಲು ನಿವೃತ್ತ ನ್ಯಾಯಾಧೀಶರ ಅಧ್ಯಕ್ಷತೆಯಲ್ಲಿ ಉನ್ನತ ಮಟ್ಟದ ಸಮಿತಿ ರಚಿಸುವುದು, ಗ್ರಾಮವಾರು ಹಾಗೂ ಸರ್ವೇ ನಂಬರ್‌ವಾರು ಭೌತಿಕ ಸಮೀಕ್ಷೆ ನಡೆಸುವುದು ಮತ್ತು ಕೇಂದ್ರ ಸರ್ಕಾರಕ್ಕೆ ಸರ್ವಪಕ್ಷ ನಿಯೋಗ ಕೊಂಡೊಯ್ಯುವ ಕುರಿತು ವಿಧಾನಮಂಡಲದ ಉಭಯ ಸದನಗಳು ಮಂಗಳವಾರ ಸರ್ವಾನುಮತದ ನಿರ್ಣಯ ಅಂಗೀಕರಿಸಿದವು.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ವಿಧಾನಸಭೆ ಹಾಗೂ ವಿಧಾನ ಪರಿಷತ್ತಿನಲ್ಲಿ ಕಸ್ತೂರಿರಂಗನ್ ವರದಿ ಆಧಾರಿತ ಐದನೇ ಕರಡು ಅಧಿಸೂಚನೆ ಕುರಿತು ನಡೆದ ಚರ್ಚೆಗೆ ಉತ್ತರಿಸಿ ನಿರ್ಣಯಗಳನ್ನು ಮಂಡಿಸಿದರು. ಸಮಿತಿಯಲ್ಲಿ ಕಂದಾಯ ಮತ್ತು ಅರಣ್ಯ ಇಲಾಖೆ ಅಧಿಕಾರಿಗಳು, ರೈತರು, ಕೈಗಾರಿಕೆ–ಉದ್ಯಮ ಕ್ಷೇತ್ರದ ಪ್ರತಿನಿಧಿಗಳು, ಪರಿಸರ ತಜ್ಞರು ಹಾಗೂ ಶೈಕ್ಷಣಿಕ ಸಂಸ್ಥೆಗಳ ಪರಿಣಿತರನ್ನು ಒಳಗೊಳ್ಳಲು ಉದ್ದೇಶಿಸಲಾಗಿದೆ.


ಕೇಂದ್ರ ಸರ್ಕಾರದ ಜುಲೈ 27ರ ಐದನೇ ಕರಡು ಅಧಿಸೂಚನೆಯಡಿ ಕರ್ನಾಟಕದ 10 ಜಿಲ್ಲೆಗಳ 1,449 ಗ್ರಾಮಗಳು ಮತ್ತು 20,668 ಚದರ ಕಿ.ಮೀ. ಪ್ರದೇಶವನ್ನು ಪರಿಸರ ಸೂಕ್ಷ್ಮ ಪ್ರದೇಶವಾಗಿ ಗುರುತಿಸಲಾಗಿದೆ. ರಾಜ್ಯ ಸರ್ಕಾರವು ಉಪಗ್ರಹ ಆಧಾರಿತ ಗುರುತಿಸುವಿಕೆಯಿಂದಾಗಿ ಕೃಷಿ, ತೋಟಗಾರಿಕೆ ಮತ್ತು ಅರಣ್ಯ ಪ್ರದೇಶಗಳ ನಡುವೆ ಗೊಂದಲ ಉಂಟಾಗಿದೆ ಎಂದು ಆಕ್ಷೇಪಿಸಿದೆ.

ಗ್ರಾಮ–ಸರ್ವೇ ನಂಬರ್ ಸಮೀಕ್ಷೆ: ಪ್ರತಿ ಗ್ರಾಮದ ಮನೆ, ಶಾಲೆ, ತೋಟಗಾರಿಕೆ ಪ್ರದೇಶ, ಕುಡಿಯುವ ನೀರು, ವಿದ್ಯುತ್ ಕಂಬ ಸೇರಿದಂತೆ ಪ್ರಮುಖ ಅಂಶಗಳನ್ನು ಗುರುತಿಸಿ ನಕ್ಷೆ ಸಿದ್ಧಪಡಿಸಲು ಭೌತಿಕ ಸಮೀಕ್ಷೆ ನಡೆಸಲಾಗುವುದು. ಈ ಪ್ರಕ್ರಿಯೆ ಪೂರ್ಣಗೊಳಿಸಿ ಮಾರ್ಪಾಡುಗಳನ್ನು ಸೂಚಿಸಲು ಒಂದು ವರ್ಷದ ಕಾಲಾವಕಾಶ ನೀಡುವಂತೆ ಕೇಂದ್ರವನ್ನು ಕೋರಲು ನಿರ್ಧರಿಸಲಾಗಿದೆ.

ಸರ್ವಪಕ್ಷ ನಿಯೋಗ: ಕೇಂದ್ರಕ್ಕೆ ಸರ್ವಪಕ್ಷ ನಿಯೋಗ ಕೊಂಡೊಯ್ದು ಪ್ರಧಾನಿ ಹಾಗೂ ಸಂಬಂಧಪಟ್ಟ ಕೇಂದ್ರ ಸಚಿವರನ್ನು ಭೇಟಿ ಮಾಡಿ ರಾಜ್ಯದ ನಿಲುವನ್ನು ಮಂಡಿಸಲು ತೀರ್ಮಾನಿಸಲಾಗಿದೆ. ಕಸ್ತೂರಿರಂಗನ್ ವರದಿಯನ್ನು ಪ್ರಸ್ತುತ ರೂಪದಲ್ಲೇ ಅಂಗೀಕರಿಸಲು ಸಾಧ್ಯವಿಲ್ಲ ಎಂಬ ನಿಲುವನ್ನು ರಾಜ್ಯ ಸರ್ಕಾರ ಪುನರುಚ್ಚರಿಸಿದೆ.

ಪಶ್ಚಿಮ ಘಟ್ಟದ ಪರಿಸರ, ಜೀವವೈವಿಧ್ಯ, ನದಿಗಳ ಮೂಲ ಹಾಗೂ ವನ್ಯಜೀವಿಗಳನ್ನು ಸಂರಕ್ಷಿಸುವುದರ ಜತೆಗೆ ಹಲವು ತಲೆಮಾರುಗಳಿಂದ ಅಲ್ಲಿಯೇ ಬದುಕುತ್ತಿರುವ ರೈತರು, ತೋಟಗಾರರು, ಆದಿವಾಸಿಗಳು ಮತ್ತು ಸ್ಥಳೀಯ ಕುಟುಂಬಗಳ ಹಿತವನ್ನೂ ಕಾಪಾಡಬೇಕು ಎಂದು ಶಿವಕುಮಾರ್ ಹೇಳಿದರು. ಪರಿಸರ ಸಂರಕ್ಷಣೆ ಹಾಗೂ ಜನರ ಜೀವನೋಪಾಯ ಎರಡನ್ನೂ ಸಮತೋಲನಗೊಳಿಸುವುದು ಸರ್ಕಾರದ ಉದ್ದೇಶವಾಗಿದೆ.

ಅರಣ್ಯ ಹಕ್ಕು ಕಾಯ್ದೆ, ಬಗರ್‌ಹುಕುಂ, ಡೀಮ್ಡ್ ಫಾರೆಸ್ಟ್, ಭೂಮಂಜೂರಾತಿ ಹಾಗೂ ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳನ್ನು ಪರಿಶೀಲಿಸದೆ ಸ್ಥಳೀಯರ ವಿರುದ್ಧ ಕ್ರಮ ಕೈಗೊಳ್ಳಬಾರದು ಎಂದು ಅವರು ತಿಳಿಸಿದರು. ಹೊಸ ಅತಿಕ್ರಮಣ ತಡೆಯುವುದರ ಜತೆಗೆ ಮಾನವ–ವನ್ಯಜೀವಿ ಸಂಘರ್ಷ ನಿಯಂತ್ರಣಕ್ಕೆ ಆಧುನಿಕ ತಂತ್ರಜ್ಞಾನ, ಕ್ಯಾಮೆರಾಗಳು ಹಾಗೂ ಆನೆಗಳ ಚಲನವಲನದ ಮೇಲ್ವಿಚಾರಣಾ ವ್ಯವಸ್ಥೆ ಬಳಸಲಾಗುತ್ತಿದೆ ಎಂದರು.



## ನಂದಿನಿ ಹಾಲಿನ ದರ ಏರಿಕೆಗೆ ಒಕ್ಕೂಟಗಳ ಮನವಿ

● ವಿಕ್ರಮ ವಾಹಿನಿ । ಬೆಂಗಳೂರು

ನಂದಿನಿ ಹಾಲಿನ ಖರೀದಿ ಮತ್ತು ಮಾರಾಟ ದರವನ್ನು ಪ್ರತಿ ಲೀಟರ್‌ಗೆ ರೂ 8ರಿಂದ ರೂ 10ರಷ್ಟು ಹೆಚ್ಚಿಸುವಂತೆ ಕರ್ನಾಟಕ ರಾಜ್ಯದ ಸಹಕಾರ ಹಾಲು ಉತ್ಪಾದಕರ ಒಕ್ಕೂಟಗಳ ನಿಯೋಗ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಮನವಿ ಸಲ್ಲಿಸಿದೆ.

ವಿಧಾನಸೌಧದಲ್ಲಿ ಮಂಗಳವಾರ ನಿಯೋಗದೊಂದಿಗೆ ಸಭೆ ನಡೆಸಿದ ಮುಖ್ಯಮಂತ್ರಿ, ಕಳೆದ 10 ವರ್ಷಗಳಲ್ಲಿ ಪಶು ಆಹಾರ ದರ ಏರಿಕೆ, ಪ್ರತಿ ಲೀಟರ್ ಹಾಲು ಉತ್ಪಾದನೆಗೆ ತಗಲುವ ವೆಚ್ಚ, ಜಿಲ್ಲಾವಾರು ಹಾಲು ಉತ್ಪಾದನೆ ಮತ್ತು ಖರೀದಿ ಪ್ರಮಾಣ, ಖಾಸಗಿ ಸಂಸ್ಥೆಗಳಿಗೆ ಹೋಗುತ್ತಿರುವ ಹಾಲಿನ ಪ್ರಮಾಣ ಹಾಗೂ ನೆರೆಯ ರಾಜ್ಯಗಳ ಖರೀದಿ–ಮಾರಾಟ ದರಗಳ ಸಮಗ್ರ ಮಾಹಿತಿ ಸಲ್ಲಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.



ಬಮುಲ್ ಅಧ್ಯಕ್ಷ ಡಿ.ಕೆ. ಸುರೇಶ್ ಮಾತನಾಡಿ, ಪಶು ಆಹಾರ, ಮೇವು, ಔಷಧೋಪಚಾರ ಸೇರಿದಂತೆ ಹೈನುಗಾರಿಕೆಯ ನಿರ್ವಹಣಾ ವೆಚ್ಚ ಹೆಚ್ಚಾಗಿದ್ದು, ಬರದಿಂದ ಮೇವಿನ ಕೊರತೆಯೂ ಉಂಟಾಗಿದೆ. ಕರ್ನಾಟಕದಲ್ಲಿ ಟೋನ್ಡ್ ಹಾಲನ್ನು ಉತ್ಪಾದಕರಿಂದ ಲೀಟರ್‌ಗೆ ರೂ 35ಕ್ಕೆ ಖರೀದಿಸಲಾಗುತ್ತಿದ್ದು, ಆಂಧ್ರಪ್ರದೇಶದಲ್ಲಿ ರೂ 41.50, ಕೇರಳದಲ್ಲಿ ರೂ 41.80, ಮಹಾರಾಷ್ಟ್ರದಲ್ಲಿ ರೂ 41 ಹಾಗೂ ತಮಿಳುನಾಡಿನಲ್ಲಿ ರೂ 42.24ರಷ್ಟಿದೆ. ನೆರೆಯ ರಾಜ್ಯಗಳಿಗೆ ಹೋಲಿಸಿದರೆ ಕರ್ನಾಟಕದಲ್ಲಿ ಹಾಲಿನ ಮಾರಾಟ ದರವೂ ಕಡಿಮೆಯಿದ್ದು, ಕಳೆದ ಒಂದೂವರೆ ವರ್ಷದಿಂದ ದರ ಹೆಚ್ಚಿಸಿಲ್ಲ ಎಂದು ಅವರು ಹೇಳಿದರು. ಖಾಸಗಿ ಡೇರಿಗಳಿಂದ ಹಾಲು ಶೇಖರಣೆಗೆ ಪೈಪೋಟಿ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಉತ್ಪಾದಕರ ಹಿತ ಕಾಪಾಡಲು ದರ ಪರಿಷ್ಕರಣೆ ಅಗತ್ಯ ಎಂದು ಒಕ್ಕೂಟಗಳ ನಿಯೋಗ ಒತ್ತಾಯಿಸಿದೆ.

## ರಾಜ್ಯದಲ್ಲಿ 4 ವಿಧಾನಪರಿಷತ್ ಸ್ಥಾನಗಳಿಗೆ ಅ.23 ರಂದು ಚುನಾವಣೆ

● ವಿಕ್ರಮ ವಾಹಿನಿ । ಬೆಂಗಳೂರು

ಕರ್ನಾಟಕದ ನಾಲ್ಕು ವಿಧಾನ ಪರಿಷತ್ ಕ್ಷೇತ್ರಗಳು ಸೇರಿದಂತೆ ನಾಲ್ಕು ರಾಜ್ಯಗಳ 28 ವಿಧಾನ ಪರಿಷತ್ ಕ್ಷೇತ್ರಗಳಿಗೆ ಚುನಾವಣಾ ಆಯೋಗ ಚುನಾವಣೆ ಘೋಷಿಸಿದೆ. ಅಕ್ಟೋಬರ್ 23ರಂದು ಮತದಾನ ನಡೆಯಲಿದ್ದು, ಅಕ್ಟೋಬರ್ 27ರಂದು ಮತ ಎಣಿಕೆ ನಡೆದು ಫಲಿತಾಂಶ ಪ್ರಕಟವಾಗಲಿದೆ.

ಕರ್ನಾಟಕದ ಆಗ್ನೇಯ ಪದವೀಧರರ, ಪಶ್ಚಿಮ ಪದವೀಧರರ, ಈಶಾನ್ಯ ಶಿಕ್ಷಕರ ಹಾಗೂ ಬೆಂಗಳೂರು ಶಿಕ್ಷಕರ ಕ್ಷೇತ್ರಗಳ ಸದಸ್ಯರ ಅವಧಿ ಮುಕ್ತಾಯಗೊಳ್ಳುತ್ತಿರುವ ಹಿನ್ನೆಲೆಯಲ್ಲಿ ಚುನಾವಣೆ ನಡೆಯಲಿದೆ. ಈ ನಾಲ್ಕು ಕ್ಷೇತ್ರಗಳ ಹಾಲಿ ಸದಸ್ಯರಾದ ಚಿದಾನಂದ ಎಂ. ಗೌಡ, ಎಸ್.ವಿ. ಸಂಕನೂರ್, ಶಶೀಲ್ ಜಿ. ನಮೋಶಿ ಹಾಗೂ ಪುಟ್ಟಣ್ಣ ಅವರ ಅವಧಿ ನವೆಂಬರ್‌ನಲ್ಲಿ ಪೂರ್ಣಗೊಳ್ಳಲಿದೆ.

ಚುನಾವಣಾ ವೇಳಾಪಟ್ಟಿಯಂತೆ ಸೆಪ್ಟೆಂಬರ್ 29ರಂದು ಅಧಿಸೂಚನೆ ಪ್ರಕಟವಾಗಲಿದ್ದು, ಅಕ್ಟೋಬರ್ 6 ನಾಮಪತ್ರ ಸಲ್ಲಿಕೆಗೆ ಕೊನೆಯ ದಿನ. ಅಕ್ಟೋಬರ್ 7ರಂದು ನಾಮಪತ್ರಗಳ ಪರಿಶೀಲನೆ ಹಾಗೂ ಅಕ್ಟೋಬರ್ 9ರಂದು ನಾಮಪತ್ರ ಹಿಂಪಡೆಯಲು ಕೊನೆಯ ದಿನವಾಗಿದೆ. ಮತದಾನ ಅಕ್ಟೋಬರ್ 23ರಂದು ನಡೆಯಲಿದೆ.

ಕರ್ನಾಟಕದ ನಾಲ್ಕು ಕ್ಷೇತ್ರಗಳ ಜತೆಗೆ ಉತ್ತರ ಪ್ರದೇಶದ 11, ಬಿಹಾರದ 8 ಹಾಗೂ ಮಹಾರಾಷ್ಟ್ರದ 5 ವಿಧಾನ ಪರಿಷತ್ ಕ್ಷೇತ್ರಗಳಿಗೆ ಚುನಾವಣೆ ನಡೆಯಲಿದೆ. ಈ ಕ್ಷೇತ್ರಗಳು ಪದವೀಧರರು ಮತ್ತು ಶಿಕ್ಷಕರ ಮತಕ್ಷೇತ್ರಗಳಿಗೆ ಸೇರಿವೆ.

ಕರ್ನಾಟಕದಲ್ಲಿ ಕಾಂಗ್ರೆಸ್ ಈಗಾಗಲೇ ಅಭ್ಯರ್ಥಿಗಳನ್ನು ಘೋಷಿಸಿದ್ದು, ಪಶ್ಚಿಮ ಪದವೀಧರರ ಕ್ಷೇತ್ರಕ್ಕೆ ಮೋಹನ್ ಲಿಂಬಿಕಾಯಿ, ಆಗ್ನೇಯ ಪದವೀಧರರ ಕ್ಷೇತ್ರಕ್ಕೆ ಶಶಿ ಹುಲಿಕುಂಟೆಮಠ, ಈಶಾನ್ಯ ಶಿಕ್ಷಕರ ಕ್ಷೇತ್ರಕ್ಕೆ ಶರಣಪ್ಪ ಮಟ್ಟೂರ್ ಹಾಗೂ ಬೆಂಗಳೂರು ಶಿಕ್ಷಕರ ಕ್ಷೇತ್ರಕ್ಕೆ ಪುಟ್ಟಣ್ಣ ಅವರನ್ನು ಕಣಕ್ಕಿಳಿಸಿದೆ. ಬಿಜೆಪಿ ಪಶ್ಚಿಮ ಪದವೀಧರರ ಕ್ಷೇತ್ರಕ್ಕೆ ಎಸ್.ವಿ. ಸಂಕನೂರ್, ಈಶಾನ್ಯ ಶಿಕ್ಷಕರ ಕ್ಷೇತ್ರಕ್ಕೆ ಶಶೀಲ್ ಜಿ. ನಮೋಶಿ ಹಾಗೂ ಆಗ್ನೇಯ ಪದವೀಧರರ ಕ್ಷೇತ್ರಕ್ಕೆ ಕೆ.ಎಂ. ಸುರೇಶ್‌ರನ್ನು ಅಭ್ಯರ್ಥಿಗಳನ್ನಾಗಿ ಘೋಷಿಸಿದೆ.

# ಕೆಪಿಎಸ್‌ಸಿ ಮುಚ್ಚುವ ಬಗ್ಗೆ ಚಿಂತನೆ: ಡಿ.ಕೆ. ಶಿವಕುಮಾರ್

● ವಿಕ್ರಮ ವಾಹಿನಿ । ಬೆಂಗಳೂರು

**ಕೆಪಿಎಸ್‌ಸಿಯಲ್ಲಿ ಅಕ್ರಮಗಳು ಹೆಚ್ಚಾಗಿದ್ದು, ಆಯ್ಕೆ ಪ್ರಕ್ರಿಯೆಯ ಮೇಲೆ ಜನರು ಇಟ್ಟಿರುವ ನಂಬಿಕೆಗೆ ಧಕ್ಕೆಯಾಗದಂತೆ ಕಾನೂನು ಚೌಕಟ್ಟಿನಲ್ಲಿ ಕಠಿಣ ಕ್ರಮ ಕೈಗೊಳ್ಳುವ ಅಗತ್ಯವಿದೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದ್ದಾರೆ. ಕೆಪಿಎಸ್‌ಸಿ ಹಗರಣಕ್ಕೆ ಸಂಬಂಧಿಸಿದಂತೆ ಹೈಕೋರ್ಟ್ ಎಸ್‌ಐಟಿ ತನಿಖೆಗೆ ನಿರ್ದೇಶಿಸಿರುವುದನ್ನು ಸ್ವಾಗತಿಸಿದ ಅವರು, ರಾಜ್ಯ ಪೊಲೀಸ್ ಇಲಾಖೆ ಕೂಡ ಸಮರ್ಥವಾಗಿ ತನಿಖೆ ನಡೆಸುತ್ತಿದ್ದು, ತನಿಖಾಧಿಕಾರಿಗಳ ನೇಮಕದ ಸ್ವಾತಂತ್ರ್ಯವನ್ನು ರಾಜ್ಯ ಸರ್ಕಾರಕ್ಕೆ ನೀಡಬೇಕಿತ್ತು ಎಂದು ಅಭಿಪ್ರಾಯಪಟ್ಟರು. ಮಕ್ಕಳ ಭವಿಷ್ಯ ಹಾಗೂ ನೇಮಕಾತಿಯಲ್ಲಿ ಪಾರದರ್ಶಕತೆ ಸರ್ಕಾರದ ಪ್ರಮುಖ ಆದ್ಯತೆಯಾಗಿದ್ದು, ಪ್ರಕರಣಕ್ಕೆ ಸಂಬಂಧಿಸಿದ ದಾಖಲೆಗಳನ್ನು ಪೊಲೀಸರು ಸಂಗ್ರಹಿಸುತ್ತಿದ್ದಾರೆ; ಸೂಕ್ತ ಸಮಯದಲ್ಲಿ ಎಲ್ಲ ವಿಚಾರಗಳು ಹೊರಬರಲಿವೆ ಎಂದರು.**

"ಕೆಪಿಎಸ್‌ಸಿಯಲ್ಲಿ ಹಗರಣಗಳು ಹೆಚ್ಚಿವೆ. ಇದನ್ನು ಕಾನೂನು ಚೌಕಟ್ಟಿನಲ್ಲಿ ಮುಚ್ಚುವ ಬಗ್ಗೆ ತಜ್ಞರ ಜೊತೆ ಚರ್ಚೆ ಮಾಡುತ್ತಿದ್ದೇನೆ" ಎಂದು ಸಿಎಂ ಡಿ ಕೆ ಶಿವಕುಮಾರ್ ಅವರು ಹೇಳಿದರು.

ಮಂಗಳವಾರ ನಡೆದ ಕಿಯೋನಿಕ್ಸ್‌ನ 50ನೇ ಸಂಸ್ಥಾಪನಾ ದಿನಾಚರಣೆ ನಂತರ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದರು.

"ಕೆಪಿಎಸ್ ಸಿಯಲ್ಲಿ ಖದೀಮರು ಸೇರಿಕೊಂಡಿದ್ದಾರೆ. ನಾವು ನಂಬಿಕೆ ಇಟ್ಟು ಆಯ್ಕೆ ಮಾಡಿದ ಅಧಿಕಾರಗಳು ಹೀಗೆಲ್ಲಾ ಮಾಡುತ್ತಿದ್ದಾರೆ. ಅಲ್ಲಿರುವ ಸದಸ್ಯರು ಅಂಗಡಿಯನ್ನೇ ತೆರೆದಿದ್ದಾರೆ. ನಮ್ಮ ಪೊಲೀಸ್ ಅಧಿಕಾರಿಗಳು ದಾಖಲೆಗಳನ್ನು ಸಂಗ್ರಹಿಸಿದ್ದಾರೆ. ಒಂದು ದಿನ ಎಲ್ಲವೂ ಹೊರಗೆ ಬರುತ್ತದೆ" ಎಂದರು.

**ಕೆಪಿಎಸ್‌ಸಿ ಹಗರಣ;** ತನಿಖಾಧಿಕಾರಿಗಳ ನೇಮಕದ ಸ್ವಾತಂತ್ರ್ಯ ನಮಗೆ ಕೊಡಬೇಕಿತ್ತು, "ಹೈಕೋರ್ಟ್ ಎಸ್ ಐಟಿ ರಚನೆಗೆ ನಿರ್ದೇಶನ ನೀಡಿರುವುದನ್ನು ಸ್ವಾಗತಿಸುತ್ತೇನೆ. ಇಡಿ ಕೂಡ ತನಿಖೆ ಮಾಡುತ್ತಿದೆ. ಆದರೆ, ನಮ್ಮ ಪೊಲೀಸ್ ಇಲಾಖೆಯೂ ತನಿಖೆಯನ್ನು ಬಹಳ ಚೆನ್ನಾಗಿ ನಡೆಸುತ್ತಿದೆ. ನ್ಯಾಯಾಲಯ ಅಗತ್ಯವಿದ್ದರೆ ನಮ್ಮ ಪೊಲೀಸ್ ಇಲಾಖೆಯ ತನಿಖೆಯ ವೈಖರಿಯ ಉಸ್ತುವಾರಿ ನೋಡಬಹುದಿತ್ತು. ನ್ಯಾಯಾಲಯ ಎಸ್ ಐಟಿ ತನಿಖೆಗೆ ನಿರ್ದೇಶಿಸಿರುವುದು ಸರಿ. ಆದರೆ, ತನಿಖಾಧಿಕಾರಿಗಳ ನೇಮಕದ ಸ್ವಾತಂತ್ರ್ಯವನ್ನು ರಾಜ್ಯಸರ್ಕಾರಕ್ಕೆ ಕೊಡಬೇಕಿತ್ತು. ಈ ಬಗ್ಗೆ ದೆಹಲಿ, ಬೇರೆ ಬೇರೆ ರಾಜ್ಯಗಳಿಂದ ನಮಗೆ ಕರೆ ಬಂದಿತ್ತು. ಈ ಬಗ್ಗೆ ಕಾನೂನು ತಜ್ಞರ ಅಭಿಪ್ರಾಯ ಪಡೆಯುತ್ತೇನೆ"



ಎಂದು ಹೇಳಿದರು.

"ನಮಗೆ ಮಕ್ಕಳ ಭವಿಷ್ಯ ಮುಖ್ಯ. ಇದೇ ಕಾರಣಕ್ಕೆ ಸಿದ್ದರಾಮಯ್ಯನವರು ತಮ್ಮ ಅವಧಿಯಲ್ಲಿ ಕೆಪಿಎಸ್ ಸಿಯಲ್ಲಿದ್ದ ಸದಸ್ಯರ ಸಂಖ್ಯೆಯನ್ನು ಕಡಿತಗೊಳಿಸಿದ್ದರು. ನಾವು ನಂಬಿಕೆ ಇಟ್ಟು, ಪಾರದರ್ಶಕವಾಗಿ ಆಯ್ಕೆ ಮಾಡಿ ಅಧಿಕಾರಿಗಳನ್ನು ಕಳುಹಿಸಿದರೆ ಅವರೂ ಹೀಗೆ ಮಾಡುತ್ತಾರೆ" ಎಂದರು.

"ನಾನು ಇಂಧನ ಸಚಿವನಾಗಿದ್ದಾಗ 22 ಸಾವಿರ ಮಂದಿ ಲೈನ್ ಮ್ಯಾನ್, ಎಂಜಿನಿಯರ್ ಗಳ ಹುದ್ದೆ ತುಂಬಿದ್ದೇನೆ. ಬಹಳ ಜಾಗೃತನಾಗಿ ಈ ಕೆಲಸ ಮಾಡಿದ್ದೇನೆ. ಅದಕ್ಕೂ ಮೊದಲು ಖಾಲಿ ಪೇಪರ್ ನಲ್ಲಿ ಬರೆಸುವ ಭ್ರಷ್ಟ ಸಂಪ್ರದಾಯ ಇತ್ತು. ಆದರೆ ನಾನು ಅದಕ್ಕೆಲ್ಲಾ ಅವಕಾಶ ಕೊಡಲಿಲ್ಲ" ಎಂದು ಹೇಳಿದರು.

ಎಚ್ ಕೆ ಪಾಟೀಲರು ಗದಗವನ್ನು ಬರದ ಜಿಲ್ಲೆ ಎಂದು ಘೋಷಣೆ ಮಾಡದೇ ಇದ್ದರೆ ಶಾಸಕ ಸ್ಥಾನಕ್ಕೆ ರಾಜೀನಾಮೆ ಕೊಡುತ್ತೇನೆ ಎಂಬ ಹೇಳಿಕೆ ಬಗ್ಗೆ ಕೇಳಿದಾಗ, "ಗದಗ ಜಿಲ್ಲೆಯ ಪ್ರವಾಸ ಮಾಡಿದ್ದೇನೆ. ನನ್ನ ಜೊತೆ ಪಾಟೀಲರು ಇದ್ದರು. ಅವರು ಹೇಳಿದ್ದು ಸತ್ಯ. ಮಲೆನಾಡಿನಲ್ಲೇ ಬರ ಬಂದಿದೆ ಎಂದರೆ, ಗದಗದಲ್ಲಿ ಬರ ಇರುವುದಿಲ್ಲವೇ, ಜಿಲ್ಲೆಯ ಸಮಸ್ಯೆಯ ಅರಿವು ನನಗಿದೆ. ಈಗಾಗಲೇ 124 ತಾಲೂಕುಗಳು ಬರ ಘೋಷಣೆಯಾಗಿದೆ. 200 ತಾಲೂಕು ಘೋಷಣೆಯಾಗುವ ಸಾಧ್ಯ ಇದೆ. ಈ ಬಗ್ಗೆ ಅಗತ್ಯ ವರದಿಗಳು ಬರುತ್ತಿವೆ" ಎಂದರು.

"ವಿರೋಧ ಪಕ್ಷಗಳು 10ದಿನ ಅಧಿವೇಶನದ ಸಮಯ ವ್ಯರ್ಥ ಮಾಡಿದರು. ಅವರಿಗೆ ಸಮಯದ ಬೆಲೆ ತಿಳಿದಿಲ್ಲ. ರಾಜಕಾರಣ ಮಾಡುವುದು ಮಾತ್ರ ಅವರಿಗೆ ಗೊತ್ತು. ನಾನು ಕ್ಯಾಬಿನೆಟ್ ಸಭೆ ಕರೆದು ತೀರ್ಮಾನ ಮಾಡಬಹುದಿತ್ತು. ಆದರೆ ಹಾಗೆ ಮಾಡಲಿಲ್ಲ. ನಾಡಿನ ಜನರ ಸಮಸ್ಯೆ ಏನು ಅಂತ ತಿಳಿಯಬೇಕಿತ್ತು. ಸರ್ಕಾರ ಜನರ ದನಿಯಾಗಬೇಕು. ಜನರ ಮಾತಿಗೆ, ಅವರ ಬಾವನೆ ಬೆಲೆ ಕೊಡಬೇಕು ಅಂತ ವಿಶೇಷ ಅಧಿವೇಶನ ಆಯೋಜಿಸಿ ಚರ್ಚೆಗೆ ಕರೆದಿದ್ದೇನೆ" ಎಂದರು.

"ನಾನು ರೈತರು, ಜನರ ಜೊತೆ ಮಾತನಾಡಿದ್ದೇನೆ. ಪ್ರವಾಸ ಮಾಡಿದ್ದೇನೆ. ಪರಿಸ್ಥಿತಿಯನ್ನು ಅರ್ಥ ಮಾಡಿಕೊಂಡಿದ್ದೇನೆ. ಆಗ ಸಮಯ ವ್ಯರ್ಥ ಮಾಡಿ ಈಗ ಹೆಚ್ಚಿಗೆ ಸಮಯ ಬೇಕು ಅಂದರೆ ಹೇಗೆ, ವಿರೋಧ ಪಕ್ಷಗಳಿಗೆ ರಾಜಕೀಯ ಮುಖ್ಯ. ನಮಗೆ ಅಭಿವೃದ್ಧಿ ಮುಖ್ಯ, ರೈತರ ಸಮಸ್ಯೆ ಮುಖ್ಯ. ಜನರ ಹಸಿವು ನೀಗಿಸುವುದು ಮುಖ್ಯ" ಎಂದು ಹೇಳಿದರು.

2ನೇ ಪುಟಕ್ಕೆ...

www.VIKRAMAVAHINI.com
|| ಕನ್ನಡ ದಿನಪತ್ರಿಕೆ ||
PRGI NO: KARKAN/2018/78481

ವಿಕ್ರಮ ವಾಹಿನಿ
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ

# ಗ್ರಾಮೀಣ ಮಕ್ಕಳಿಗೆ ತಂತ್ರಜ್ಞಾನ ತಲುಪಿಸಿ, ಭವಿಷ್ಯದ ಪೀಳಿಗೆ ರೂಪಿಸಿ: ಡಿಕೆಶಿ

## ಕಿಯೋನಿಕ್ಸ್ 50ನೇ ಸಂಸ್ಥಾಪನಾ ದಿನಾಚರಣೆ; ಉದ್ಯಮ ಆಧಾರಿತ ಪಠ್ಯಕ್ರಮಕ್ಕೆ ಆದ್ಯತೆ ನೀಡಲು ಸೂಚನೆ

● ವಿಕ್ರಮ ವಾಹಿನಿ । ಬೆಂಗಳೂರು

ಕೃತಕ ಬುದ್ಧಿಮತ್ತೆ (ಎಐ) ಆಧಾರಿತ 'ಕಿಯೋ ಕಂಪ್ಯೂಟರ್' ಮೂಲಕ ಗ್ರಾಮೀಣ ಭಾಗದ ಮಕ್ಕಳಿಗೆ ತಂತ್ರಜ್ಞಾನ ತಲುಪಿಸಿ, ಭವಿಷ್ಯದ ಪೀಳಿಗೆಯನ್ನು ಸಿದ್ಧಪಡಿಸುವ ಕಿಯೋನಿಕ್ಸ್‌ನ ಪ್ರಯತ್ನ ಸ್ವಾಗತಾರ್ಹ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದರು.

ಬೆಂಗಳೂರಿನಲ್ಲಿ ಮಂಗಳವಾರ ನಡೆದ ಕಿಯೋನಿಕ್ಸ್‌ನ 50ನೇ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಎಐ ಯುಗಕ್ಕೆ ಕರ್ನಾಟಕವನ್ನು ಸಿದ್ಧಪಡಿಸುವ ನಿಟ್ಟಿನಲ್ಲಿ ಕಿಯೋನಿಕ್ಸ್ ಹೊಸ ಸಾಧ್ಯತೆಗಳನ್ನು ಗುರುತಿಸಿ ಕಾರ್ಯನಿರ್ವಹಿಸುತ್ತಿದೆ. ಗ್ರಾಮೀಣ ಶಾಲೆಗಳು ಹಾಗೂ ಸಣ್ಣ ಉದ್ಯಮಿಗಳಿಗೂ ಆಧುನಿಕ ತಂತ್ರಜ್ಞಾನ ತಲುಪಿಸುತ್ತಿರುವುದು ಶ್ಲಾಘನೀಯ ಎಂದರು.

ಕಿಯೋನಿಕ್ಸ್ ಆರಂಭವಾದ ಸಂದರ್ಭದಲ್ಲಿ ಬೆಂಗಳೂರಿನ ಜನಸಂಖ್ಯೆ ಸುಮಾರು 20 ಲಕ್ಷವಿತ್ತು. ಇಂದು ನಗರ 1.40 ಕೋಟಿಗೂ ಹೆಚ್ಚು ಜನಸಂಖ್ಯೆ ಹೊಂದಿದ್ದು, ಕರ್ನಾಟಕದ ತಂತ್ರಜ್ಞಾನ ಕ್ಷೇತ್ರವೂ ದೊಡ್ಡ ಪ್ರಮಾಣದಲ್ಲಿ ಬೆಳೆದಿದೆ. 50 ವರ್ಷಗಳ ಕಿಯೋನಿಕ್ಸ್ ಪಯಣವು ಅನ್ವೇಷಣೆ, ತಂತ್ರಜ್ಞಾನ ಮತ್ತು ಪ್ರಗತಿಯ ಪಯಣವಾಗಿದೆ ಎಂದು ಹೇಳಿದರು.

**ಬಿಯಾಂಡ್ ಬೆಂಗಳೂರು:** ಬೆಂಗಳೂರಿನ ಜತೆಗೆ ಹುಬ್ಬಳ್ಳಿ, ಶಿವಮೊಗ್ಗ, ಕಲಬುರಗಿ ಹಾಗೂ ಮಂಗಳೂರಿನಲ್ಲಿ ಮಾಹಿತಿ ತಂತ್ರಜ್ಞಾನ ಕ್ಷೇತ್ರಕ್ಕೆ ಉತ್ತೇಜನ ನೀಡಲು ಸರ್ಕಾರ ಮುಂದಾಗಿದೆ. 'ಬಿಯಾಂಡ್ ಬೆಂಗಳೂರು' ಪರಿಕಲ್ಪನೆಯಡಿ ಇತರೆ ಜಿಲ್ಲೆಗಳಲ್ಲೂ ಉದ್ಯಮಗಳ ಬೆಳವಣಿಗೆಗೆ ಅಗತ್ಯ ಸಹಕಾರ ನೀಡಲಾಗುವುದು ಎಂದರು.



ಬೆಂಗಳೂರಿನ ಖಾಸಗಿ ಹೊಟೇಲ್ ನಲ್ಲಿ ಮಂಗಳವಾರ ನಡೆದ ಕಿಯೋನಿಕ್ಸ್‌ನ 50ನೇ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮಕ್ಕೆ ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರು ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಮಾಜಿ ಮುಖ್ಯಮಂತ್ರಿ ವೀರಪ್ಪ ಮೊಯ್ಲಿ, ಸಚಿವರಾದ ಪ್ರಿಯಾಂಕ್ ಖರ್ಗೆ, ಮುಖ್ಯಮಂತ್ರಿಗಳ ರಾಜಕೀಯ ಸಲಹೆಗಾರ ಎ.ಎಸ್. ಪೊನ್ನಣ್ಣ ಹಾಗೂ ಕಿಯೋನಿಕ್ಸ್ ಅಧ್ಯಕ್ಷ ಶರತ್ ಬಚ್ಚೇಗೌಡ ಅವರು ಉಪಸ್ಥಿತರಿದ್ದರು.

ಆಸ್ತಿ ದಾಖಲೆ, ಖಾತಾ ವಿತರಣೆ ಸೇರಿದಂತೆ ಆಡಳಿತದ ವಿವಿಧ ಸೇವೆಗಳಲ್ಲೂ ತಂತ್ರಜ್ಞಾನ ಬಳಕೆಗೆ ಆದ್ಯತೆ ನೀಡಲಾಗುತ್ತಿದೆ. ಬೆಂಗಳೂರಿನ ಸುಮಾರು 40 ಲಕ್ಷ ಆಸ್ತಿಗಳಿಗೆ ಡಿಜಿಟಲ್ ಆಸ್ತಿ ದಾಖಲೆ ಒದಗಿಸುವ ಯೋಜನೆ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

**ಕೌಶಲ್ಯಾಧಾರಿತ ಶಿಕ್ಷಣಕ್ಕೆ ಒತ್ತು:** ರಾಜ್ಯದಲ್ಲಿ ಸುಮಾರು 30 ಸಾವಿರ ಎಂಜಿನಿಯರಿಂಗ್ ಸೀಟುಗಳು ಖಾಲಿ ಉಳಿಯುತ್ತಿರುವ ಹಿನ್ನೆಲೆಯಲ್ಲಿ ಶಿಕ್ಷಣ ವ್ಯವಸ್ಥೆಯನ್ನು ಉದ್ಯಮದ ಅಗತ್ಯಗಳಿಗೆ ತಕ್ಕಂತೆ ರೂಪಿಸುವ ಅಗತ್ಯವಿದೆ. ಮಕ್ಕಳಲ್ಲಿ ಕೌಶಲ್ಯ ವೃದ್ಧಿಗೆ ಆದ್ಯತೆ ನೀಡುವಂತೆ ಪಠ್ಯಕ್ರಮವನ್ನು ಉದ್ಯಮ ಆಧಾರಿತವಾಗಿ ಪರಿವರ್ತಿಸಲು ಸೂಚಿಸಲಾಗಿದೆ ಎಂದರು.

ಯುವಕರು ಕೇವಲ ಉದ್ಯೋಗ ಹುಡುಕುವವರಾಗದೆ ಉದ್ಯೋಗ ಸೃಷ್ಟಿಸುವವರಾಗಬೇಕು. ತಂತ್ರಜ್ಞಾನ ಕ್ಷೇತ್ರದ ಬೆಳವಣಿಗೆಗೆ ಸರ್ಕಾರ ಅಗತ್ಯ ಬೆಂಬಲ ನೀಡಲಿದೆ ಎಂದು ಹೇಳಿದರು.

**50 ವರ್ಷಗಳ ತಂತ್ರಜ್ಞಾನ ಪಯಣ:** 'ೀವರಾಜ ಅರಸು ಅವರ ಅವಧಿಯಲ್ಲಿ ಆರಂಭಗೊಂಡ ಕಿಯೋನಿಕ್ಸ್, ಕರ್ನಾಟಕದಲ್ಲಿ ತಂತ್ರಜ್ಞಾನ ಕ್ಷೇತ್ರಕ್ಕೆ ಭದ್ರ ಬುನಾದಿ ಹಾಕಿದೆ. ಬೆಂಗಳೂರಿನ ಎಲೆಕ್ಟ್ರಾನಿಕ್ಸ್ ಸಿಟಿ ಹಾಗೂ ಮಾಹಿತಿ ತಂತ್ರಜ್ಞಾನ ಕ್ಷೇತ್ರದ ಬೆಳವಣಿಗೆಯಲ್ಲಿ ರಾಜ್ಯದ ದೂರದೃಷ್ಟಿಯ ಪಾತ್ರ ಮಹತ್ವದ್ದಾಗಿದೆ ಎಂದರು.

ಇಂದು ಬೆಂಗಳೂರಿನಲ್ಲಿ ಸುಮಾರು 26 ಲಕ್ಷ ಐಟಿ ವೃತ್ತಿಪರರು ಕಾರ್ಯನಿರ್ವಹಿಸುತ್ತಿದ್ದು, ಜಾಗತಿಕ ಮಟ್ಟದಲ್ಲಿ ನಗರದ ತಂತ್ರಜ್ಞಾನ ಸಾಮರ್ಥ್ಯ ಗುರುತಿಸಿಕೊಂಡಿದೆ. ಮುಂದಿನ ದಿನಗಳಲ್ಲಿ ಎಐ, ಸೆಮಿಕಂಡಕ್ಟರ್ ಸೇರಿದಂತೆ ಹೊಸ ತಂತ್ರಜ್ಞಾನ ಕ್ಷೇತ್ರಗಳಲ್ಲೂ ಕರ್ನಾಟಕ ಮುಂಚೂಣಿಯಲ್ಲಿರಬೇಕು ಎಂದು ಮುಖ್ಯಮಂತ್ರಿ ಹೇಳಿದರು.

ಈ ಸಂದರ್ಭದಲ್ಲಿ ಕಿಯೋನಿಕ್ಸ್‌ನ ಮಾಜಿ ವ್ಯವಸ್ಥಾಪಕ ನಿರ್ದೇಶಕ ಬಾಳಿಗ ಅವರ ಪುತ್ಥಳಿ ಅನಾವರಣಗೊಳಿಸಲಾಯಿತು. ಕಾರ್ಯಕ್ರಮದಲ್ಲಿ ಸಚಿವರು, ಅಧಿಕಾರಿಗಳು ಹಾಗೂ ತಂತ್ರಜ್ಞಾನ ಕ್ಷೇತ್ರದ ಪ್ರತಿನಿಧಿಗಳು ಉಪಸ್ಥಿತರಿದ್ದರು.

### ಸವಿ ವಾಹಿನಿ


ಹೊಸ ಬೆಳಗ್ಗೆ ಖಾಲಿ ಕ್ಯಾನ್ವಾಸ್‌ನಂತಿದೆ, ಅದರ ಮೇಲೆ ನೀವು ಅಸಂಖ್ಯಾತ ಕಲ್ಪನೆಯ ಬಣ್ಣಗಳನ್ನು ಚೆಲ್ಲಬಹುದು.

### ದಿನ ಪಂಚಾಂಗ

ಸೆಪ್ಟಂಬರ್, 23-2026, ಬುಧವಾರ ವರ್ಷ ಋತು,
ಭಾದ್ರಪದ ಮಾಸ, ಶುದ್ಧ ಪಕ್ಷ
ದ್ವಾದಶಿ ತಿಥಿ ರಾ.8:59
ಶ್ರವಣ ನಕ್ಷತ್ರ ಬೆ.8:32
ರಾಹುಕಾಲ ಮ 12:13-1:43
ವಾಮನ ಜಯಂತಿ, ಶ್ರವಣ ದ್ವಾದಶಿ, ಕ್ಷೀರ ವ್ರತಾರಂಭ, ಶರದ್ ವಿಷುವತ್, ವೇದಾಂತಾಚಾರ್ಯ ತಿರುನಕ್ಷತ್ರ, ಬಾದಾಮಿ ವೆಂಕಟದಾಸ ಪುಣ್ಯದಿನ, ಸದಾನಂದಸ್ವಾಮಿ ಆರಾಧನೆ

### ಆಧ್ಯಾತ್ಮ

## 'ಯಂತ್ರಗಳಿಂದ ತುಪ್ಪದ ಸಮಗ್ರ ಶಕ್ತಿಯನ್ನು ಅರಿಯಲು ಸಾಧ್ಯವಿಲ್ಲ'



● ವಿಕ್ರಮ ವಾಹಿನಿ । ಗೋಕರ್ಣ

ಯಂತ್ರಗಳಿಂದ ತುಪ್ಪವನ್ನು ವಿಶ್ಲೇಷಿಸಿದರೆ ಅದರ ಸಮಗ್ರ ಶಕ್ತಿ ಗೋಚರವಾಗುವುದಿಲ್ಲ. ತುಪ್ಪ ಕೇವಲ ಭೌತಿಕ ಗುಣಗಳಿರುವ ದ್ರವ್ಯವಲ್ಲ. ಅದರಲ್ಲಿ ಕಣ್ಣು-ಮನಸ್ಸಿಗೆ ಮೀರಿದ ದೈವಿಕ ಶಕ್ತಿಯಿದ್ದು, ತುಪ್ಪದ ದಿವ್ಯ ಗುಣಗಳನ್ನು ಅನುಭವದಿಂದ ಕಂಡುಕೊಳ್ಳಬಹುದು ಎಂದು ಶ್ರೀರಾಮಚಂದ್ರಾಪುರ ಮಠದ ಜಗದ್ಗುರು ಶಂಕರಾಚಾರ್ಯ ಶ್ರೀಶ್ರೀ ರಾಘವೇಶ್ವರ ಭಾರತೀ ಮಹಾಸ್ವಾಮಿಗಳು ಅಭಿಪ್ರಾಯಪಟ್ಟರು.

ಗೋಕರ್ಣದ ಅಶೋಕೆಯ ಮೂಲಮಠದ ಪರಿಸರದಲ್ಲಿ ನಡೆಯುತ್ತಿರುವ 'ಅನ್ನಬ್ರಹ್ಮ ಚಾತುರ್ಮಾಸ್ಯ'ದ ಧರ್ಮಸಭೆಯಲ್ಲಿ 22.09.2026 ರಂದು 'ಅನ್ನಂ ಬ್ರಹ್ಮ' ಮಾಲಿಕೆಯಲ್ಲಿ ತುಪ್ಪದ ಮಹತ್ವದ ಕುರಿತಾಗಿ ಪ್ರವಚನ ಅನುಗ್ರಹಿಸಿದ ಶ್ರೀಗಳು, ಸ್ಮೃತಿ ಮತ್ತು ಬುದ್ಧಿಯನ್ನು ಉದ್ದೀಪನಗೊಳಿಸುವ ಚೈತನ್ಯ ನೈಜ ದೇಶಿ ಗೋವಿನ ತುಪ್ಪಕ್ಕಿದ್ದು, ತುಪ್ಪವು ಜೀವಿಯ ಸಾರವಾದ ಓಜಸ್ಸನ್ನು ಹೆಚ್ಚಿಸುತ್ತದೆ. ಸ್ವರವನ್ನು ಮಧುರವಾಗಿಸುವ ಜೊತೆಗೆ ದೇಹಕ್ಕೆ ಬಣ್ಣವನ್ನು ಕೊಡುವ ಸಾಮರ್ಥ್ಯ ತುಪ್ಪಕ್ಕಿದೆ. ತುಪ್ಪ ಸಂತತಿಗೆ ಪೂರಕ, ವಯಸ್ಥಾಪಕ, ಕಣ್ಣಿನ ದೃಷ್ಟಿ ಹೆಚ್ಚಳಕ್ಕೆ ಸಹಕಾರಿ ಮಾತ್ರವಲ್ಲ ಮೋಕ್ಷ ಸಾಧಕನಿಗೆ ತುಪ್ಪ ಅತ್ಯುಪಯುಕ್ತವಾದ ಆಹಾರವೂ ಹೌದು. ತುಪ್ಪದ ಗುಣಗಳನ್ನು ಹೇಳುತ್ತಾ ಹೋದರೆ ಅದು ತುಪ್ಪದ ಸಹಸ್ರನಾಮವೇ ಆಗುತ್ತದೆ ಎಂದು ತುಪ್ಪದ ಗುಣಗಳನ್ನು ವಿವರಿಸಿದರು.

ನಗರಗಳಲ್ಲಿ ಇಂದು ನಿರ್ವಿಶೀಕರಣ ಅಥವಾ ದೇಹ ಶುದ್ಧೀಕರಣ (detoxification)ಕ್ಕೆ ಹೆಚ್ಚಿನ ಮಹತ್ವವನ್ನು ನೀಡಲಾಗುತ್ತಿದ್ದು, ತುಪ್ಪವು ಇದಕ್ಕೆ ಅತ್ಯುತ್ತಮವಾದ ಪದಾರ್ಥವಾಗಿದ್ದು, ವಾತ,ಪಿತ್ತ,ಉನ್ಮಾದ,ಅಪಸ್ಮಾರ ಸೇರಿದಂತೆ ನೂರಾರು ರೋಗಗಳಲ್ಲಿ ತುಪ್ಪವು ಪರಮೌಷಧವಾಗಿ ಕೆಲಸ ಮಾಡುತ್ತದೆ. ಸಾಮಾನ್ಯವಾಗಿ ಬಲ ಇರುವವರು ಒರಟಾಗಿರುತ್ತಾರೆ. ಕೋಮಲವಾಗಿರುವವರು ಬಲಹೀನರಾಗಿರುತ್ತಾರೆ. ಆದರೆ ತುಪ್ಪವನ್ನು ಸೇವಿಸಿದರೆ ದೇಹಕ್ಕೆ ಬಲದ ಜೊತೆಗೆ ಮೃದುತ್ವವೂ ಬರುತ್ತದೆ. ಇದು ತುಪ್ಪದ ವೈಶಿಷ್ಟ್ಯವಾಗಿದ್ದು, ತುಪ್ಪ ಹೊಸದಾದರೂ, ಹಳೆಯದಾದರೂ ಎರಡೂ ಕೂಡ ದೇಹಕ್ಕೆ ಹಿತ ಎಂದು ಆಯುರ್ವೇದ ಗ್ರಂಥ ಗಳನ್ನು ಆಧಾರಿಸಿ ಅಭಿಪ್ರಾಯ ವ್ಯಕ್ತಪಡಿಸಿದರು. 2ನೇ ಪುಟಕ್ಕೆ...



ಗೋ ಘೃತದ ಕುರಿತಾಗಿ ನಡೆಯುತ್ತಿದ್ದ ಪ್ರವಚನವನ್ನು ಆಲಿಸುತ್ತಿರುವ ಗೋವು.

# 'ಬೆಂಗಳೂರು ಮಹಾನಗರಕ್ಕೆ ಮೈಸೂರು ಬೆಂಬಲಿತ ಆಧಾರ ಸ್ತಂಭ: ತಂತ್ರಜ್ಞಾನ ಅಭಿವೃದ್ಧಿಗೆ ಆದ್ಯತೆ ಅಗತ್ಯ'

● ವಿಕ್ರಮ ವಾಹಿನಿ । ಬೆಂಗಳೂರು



**ಬೆಂಗಳೂರು ಅಭಿವೃದ್ಧಿಗೆ ಪೂರಕವಾಗಿ ಮೈಸೂರನ್ನು ತಂತ್ರಜ್ಞಾನ, ಕೃತಕ ಬುದ್ಧಿಮತ್ತೆ ಹಾಗೂ ಪ್ರವಾಸೋದ್ಯಮದ ಪ್ರಮುಖ ಕೇಂದ್ರವಾಗಿ ಬೆಳೆಸುವ ಅಗತ್ಯವಿದ್ದು, ಜಾಗತಿಕ ಸಹಕಾರದ ಮೂಲಕ ರಾಜ್ಯದ ಸಮಗ್ರ ಅಭಿವೃದ್ಧಿಗೆ ಆದ್ಯತೆ ನೀಡಬೇಕು ಎಂದು ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಹೇಳಿದರು.**

ಮಾಹಿತಿ ತಂತ್ರಜ್ಞಾನ ಸೇರಿದಂತೆ ಎಲ್ಲಾ ವಲಯಗಳಲ್ಲೂ ಮುಂಚೂಣಿಯಲ್ಲಿರುವ ಬೆಂಗಳೂರು ಮಹಾನಗರಕ್ಕೆ ಮೈಸೂರು ನಗರ ಬೆಂಬಲಿತ ಆಧಾರ ಸ್ತಂಭವಾಗಲಿದ್ದು, ಬೆಂಗಳೂರು ಹೊರತುಪಡಿಸಿ ಉಳಿದ ಪ್ರದೇಶಗಳ ಅಭ್ಯುದಯಕ್ಕೆ ಆದ್ಯತೆ ನೀಡಬೇಕಾಗಿದೆ ಎಂದು ಮೈಸೂರು ಲೋಕಸಭಾ ಕ್ಷೇತ್ರದ ಸದಸ್ಯ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಹೇಳಿದ್ದಾರೆ.

ನಗರದಲ್ಲಿಂದು ಹತ್ತು ದೇಶಗಳಿಗೂ ಅಧಿಕ ಪ್ರತಿನಿಧಿಗಳು ಪಾಲ್ಗೊಂಡಿದ್ದ "ಇಂಡಿಯಾ ಅಡ್ವಾಂಟೇಜ್ ಸಮ್ಮಿಟ್ – 2026 ದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಮೈಸೂರಿನ ಸಂಸ್ಕೃತಿ, ಪರಂಪರೆ ಉಳಿಸಲು ಆರ್ಥಿಕ ಶಕ್ತಿ ಅಗತ್ಯವಾಗಿದೆ. ಮೈಸೂರು ಪ್ರವಾಸೋದ್ಯಮದಿಂದ ಮಾತ್ರ ಶಾಶ್ವತ ಆದಾಯ ಗಳಿಕೆಗೆ ಸೀಮಿತವಾಗಬಾರದು. ಮೈಸೂರು ವಿಭಾಗ ಬೆಳವಣಿಗೆಯಾಗಬೇಕು ಎಂಬುದು ತಮ್ಮ ಹೆಬ್ಬಯಕೆಯಾಗಿದೆ. ಮೈಸೂರಿನಲ್ಲಿ ಉತ್ತಮ ವಾತಾವರಣವಿದ್ದು, ಕೃತಕ ಬುದ್ಧಿಮತ್ತೆ, ಜಿಟಿಟಲ್ ತಂತ್ರಜ್ಞಾನ, ಸೈಬರ್ ಭದ್ರತೆ, ಕ್ಲೌಡ್ ಕಂಪ್ಯೂಟಿಂಗ್ ಹೀಗೆ ನಾನಾ ಕ್ಷೇತ್ರಗಳಲ್ಲಿ ಉತ್ತಮ ಸಾಧನೆ ಮಾಡಲು ಮೈಸೂರಿಗೆ ಅವಕಾಶವಿದೆ. ಭಾರತದ ಬೆಳವಣಿಗೆಯಲ್ಲಿ ತಂತ್ರಜ್ಞಾನ ಅತ್ಯಂತ ಮಹತ್ವದ್ದಾಗಿದೆ. ಉತ್ತಮ ಕಾರ್ಯಕ್ರಮಗಳನ್ನು ರೂಪಿಸುವುದು ಜನಪ್ರತಿನಿಧಿಗಳ ಗುರಿಯಾಗಿದ್ದು, ಬರುವ 2047 ರ ವೇಳೆಗೆ ಸಮಗ್ರ, ಸಂಪೂರ್ಣ ಗುರಿ ಸಾಧನೆ ಪ್ರಧಾನಿ ನರೇಂದ್ರ ಮೋದಿ ಅವರ ಮಹತ್ವಾಕಾಂಕ್ಷೆ ಧ್ಯೇಯವಾಗಿದೆ. ಕೈಗಾರಿಕಾ ವಲಯ ಇದಕ್ಕೆ ಕೈಜೋಡಿಸಬೇಕು ಎಂದರು.

ಟಿಐಎ ಸಮ್ಮಿಟ್ ಮತ್ತು ಫ್ಯೂಚರ್ ಐಸಿಟಿ ಫೋರಂ ಅಧ್ಯಕ್ಷ ಜೋಸ್ ಜೇಕಬ್ ಕೆ ಶೃಂಗಸಭೆಯನ್ನು ಉದ್ಘಾಟಿಸಿ, ವಿದ್ಯಾನ್ ಎಐ ಕೃತಕ ಬುದ್ಧಿಮತ್ತೆ ವೇದಿಕೆ ಲೋಕಾರ್ಪಣೆ ಮಾಡಿ ಮಾತನಾಡಿ, "ತಂತ್ರಜ್ಞಾನದ ಭವಿಷ್ಯ ಕೇವಲ ಸ್ಮಾರ್ಟ್ ಆಗಿರುವುದಷ್ಟೇ ಸಾಲದು; ಅದು ಮಾನವಕೇಂದ್ರಿತವಾಗಿರಬೇಕು, ಕೃತಕ ಬುದ್ಧಿಮತ್ತೆ ಆಧಾರಿತವಾಗಿರಬೇಕು ಮತ್ತು ಫಲಿತಾಂಶಕೇಂದ್ರಿತವಾಗಿರಬೇಕು" ಎಂದು ಹೇಳಿದರು.

ಹೋಚ್‌ಶುಲೆ ಹೋಫ್, ಯುನಿವರ್ಸಿಟಿ ಆಫ್ ಅಪ್ಲೈಡ್ ಸೈನ್ಸಸ್‌ನ ಅಧ್ಯಕ್ಷ ಪ್ರೊ. ಡಾ. ಡಾ. ಹಿ.ಸಿ. ಜುರ್ಗೆನ್ ಲೆಹ್‌ಮನ್ ಮಾತನಾಡಿ, ಡಿಜಿಟಲೀಕರಣದ ವೇಗ ವೃದ್ಧಿಸುತ್ತಿರುವ, ಜಾಗತಿಕ ಸಹಭಾಗಿತ್ವಗಳಲ್ಲಿ ಬದಲಾವಣೆ ಹಾಗೂ ಮೂಲಸೌಕರ್ಯ, ಸಂಪನ್ಮೂಲಗಳ ಮೇಲಿನ ಒತ್ತಡ ಹೆಚ್ಚುತ್ತಿರುವ ಸಂದರ್ಭದಲ್ಲಿ ತಾಂತ್ರಿಕ ಸಾಮರ್ಥ್ಯ ಹಾಗೂ ಅಂತಾರಾಷ್ಟ್ರೀಯ ಸಹಕಾರವನ್ನು ವಿಸ್ತರಿಸಲು ಆರ್ಥಿಕ, ಪರಿಸರ ಹಾಗೂ ಸಾಮಾಜಿಕ ಫಲಿತಾಂಶಗಳಾಗಿ ಪರಿವರ್ತಿಸುವುದು ಅಗತ್ಯವಾಗಿದೆ ಎಂದರು.

ಬವರೇಯನ್ ಸಂಸದೆ ಉಲ್ರಿಕೆ ಮುಲ್ಲರ್ ಮಾತನಾಡಿ, ಕರ್ನಾಟಕ ಉತ್ತಮ ಬೆಳವಣಿಗೆ ಸಾಧಿಸುತ್ತಿದ್ದು, ವಿವಿಧ ಕ್ಷೇತ್ರಗಳಲ್ಲಿನ ಸಹಕಾರಕ್ಕೆ ವಿಪುಲ ಅವಕಾಶಗಳಿವೆ. ಹವಾಮಾನ ಬದಲಾವಣೆ, ಪ್ರಾಕೃತಿಕ ವಿಕೋಪಗಳಿಗೆ ಸೂಕ್ತ ಪರಿಹಾರ ರೂಪಿಸಲು ಪರಸ್ಪರ ಕೈಜೋಡಿಸದರೆ ಎರಡೂ ದೇಶಗಳಿಗೆ ಅನುಕೂಲವಾಗಲಿದೆ ಎಂದರು.

ಜಿಎಬಿ ಶೃಂಗಸಭೆಯ ಸಂಚಾಲಕ ಅನಿಲ್ ಕುಮಾರ್ ತಲ್ಲಂ ಮಾತನಾಡಿ, ಡಿಸೆಂಬರ್ 25 ರಿಂದ ಮೂರು ದಿನಗಳ ಕಾಲ ಜಿಜಬಿ ಶೃಂಗಶಭೆ ಬೆಂಗಳೂರು ಅರಮನೆ ಮೈದಾನದಲ್ಲಿ ನಡೆಯುತ್ತಿದ್ದು, ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಸಮ್ಮೇಳನ ಉದ್ಘಾಟಿಲಿದ್ದಾರೆ. ಕೇಂದ್ರ ಸರ್ಕಾರದ ಆರು ಮಂದಿ ಸಚಿವರು, ಐದು ರಾಜ್ಯಗಳ ಮುಖ್ಯಮಂತ್ರಿಗಳು ಪಾಲ್ಗೊಳ್ಳಲಿದ್ದಾರೆ ಎಂದರು.

ಬೆಂಗಳೂರಿನಲ್ಲಿ ಜರ್ಮನಿ ರಾಯಬಾರಿ ಡಾ. ಕ್ರಿಸ್ಟೋಫ್ ದೋರ್ಸ್ ಚೆಫೆಲ್ಡ್, ಬವೇರಿಯಾದ ಜಿಲ್ಲಾ ಗೌರ್ನರ್ ಡಾ. ಒಲಿವರ್ ಬಾರ್, ಬೆಂಗಳೂರಿನಲ್ಲಿ ಡೆನ್ಮಾರ್ಕ್ ರಾಯಭಾರಿ ಪೀಟರ್ ವಿಂಥೆರ್ ಸ್ಟುಮಿಡ್ಟ್, ಬೆಂಗಳೂರಿನಲ್ಲಿ ಇಟಲಿ ರಾಯಬಾರಿ ಜಿಂಡೋಮೆನಿಕೋ ಮಿಲಾನೋ, ಸಿಜ್ವರ್ ಲ್ಯಾಂಡ್ ರಾಯಭಾರಿ ಡಾ. ಅಂಗೇಲ ಹೊನೆಗ್ಗೆರ್, ದಕ್ಷಿಣ ಭಾರತದಲ್ಲಿ ಇಸ್ರೇಲ್ ರಾಯಬಾರಿ ಒರ್ಲಿ ವೇಟ್ಜ್ ಮ್ಯಾನ್ ಮತ್ತಿತರೆ ರಾಯಬಾರಿ ಕಚೇರಿ ಹಿರಿಯ ಸಿಬ್ಬಂದಿ ಪಾಲ್ಗೊಂಡಿದ್ದರು.

## ಬೆಂಗಳೂರಿನಲ್ಲಿ ಜಿಟಿಜಿಟಿ ಮಳೆ

● ವಿಕ್ರಮ ವಾಹಿನಿ । ಬೆಂಗಳೂರು

ರಾಜಧಾನಿ ಬೆಂಗಳೂರಿನ ವಿವಿಧೆಡೆ ಸೋಮವಾರ ಸಂಜೆ ಏಕಾಏಕಿ ಹಠಾತ್ ಧಾರಾಕಾರ ಮಳೆಯಾಗಿದ್ದು, ಪ್ರಮುಖ ರಸ್ತೆಗಳಲ್ಲಿ ಭಾರಿ ಮಳೆ ನೀರು ನಿಂತು ಎಲ್ಲಾ ವಾಹನ ಸವಾರರು ತೀವ್ರವಾಗಿ ಪರದಾಡುವಂತಹ ಪರಿಸ್ಥಿತಿ ನಿರ್ಮಾಣವಾಯಿತು. ಮುಂಜಾನೆಯಿಂದಲೇ ಬಿಸಿಲಿನ ತಾಪಕ್ಕೆ ಹಾಗೂ ಸೆಕೆಗೆ ತೀವ್ರವಾಗಿ ತತ್ತರಿಸಿದ್ದ ಸಿಲಿಕಾನ್ ಸಿಟಿಯ ಜನತೆಗೆ ಸಂಜೆಯಾಗುತ್ತಿದ್ದಂತೆ ದಿಢೀರನೆ ಸುರಿದ ತುಂತುರು ಮಳೆಯ ಸಿಂಚನವು ತಂಪೆರೆದಿದೆ.

ಇದರ ಜೊತೆಗೆ ಮಲ್ಲೇಶ್ವರಂ, ರಾಜಾಜಿನಗರ, ಪೀಣ್ಯ, ಮಾದಾವರ, ಮಹದೇವಪುರ, ಹಾಗೂ ಕೆ.ಆರ್. ವೃತ್ತದ ಸಮೀಪವೂ ವರುಣನ ಆರ್ಭಟ ಜೋರಾಗಿತ್ತು. ಮಳೆಯಿಂದಾಗಿ ವಾಹನ ದಟ್ಟಣೆ ಹೆಚ್ಚಾಗಿ, ಸವಾರರು ಪರದಾಡುವಂತಾಗಿತ್ತು.

ಇದರ ಹೊರತಾಗಿ ನಗರದ ಹೃದಯ ಭಾಗ ಎನಿಸಿಕೊಂಡಿರುವ ಕಲಾಸಿಪಾಳ್ಯ, ಕಾರ್ಪೊರೇಷನ್ ವೃತ್ತ, ವಿಧಾನಸೌಧ, ಲಾಲ್‌ಬಾಗ್, ಜಯನಗರ ಮತ್ತು ಶಾಂತಿನಗರದ ಸುತ್ತಮುತ್ತ ಸಹ ಉತ್ತಮ ಮಳೆಯಾಗಿದೆ. ದಿಢೀರನೆ ದಟ್ಟ ಕಾರ್ಮೋಡ ಕವಿದು ಮಳೆ ಸುರಿಯಲಾರಂಭಿಸಿದ್ದರಿಂದ ಮಳೆಯಿಂದ ರಕ್ಷಣೆ ಪಡೆಯಲು ದ್ವಿಚಕ್ರ ವಾಹನ ಸವಾರರು ಅನಿವಾರ್ಯವಾಗಿ ಮೇಲ್ಸೇತುವೆ ಕೆಳಗೆ, ಮರದ ಕೆಳಗೆ ಹಾಗೂ ಬಸ್ ನಿಲ್ದಾಣಗಳ ಮೊರೆ ಹೋದ ದೃಶ್ಯಗಳು ಕಂಡುಬಂದವು.

ಹವಾಮಾನ ಇಲಾಖೆ ನೀಡಿದ್ದ ಮುನ್ಸೂಚನೆಯಂತೆ, ಬಂಗಾಳ ಉಪಮಹಾಸಾಗರದಲ್ಲಿ ವಾಯುಭಾರ ಕುಸಿತ ಉಂಟಾಗಿರುವ ಹಿನ್ನೆಲೆಯಲ್ಲಿ ರಾಜ್ಯದ ಹಲವೆಡೆ ಮಳೆಯಾಗುತ್ತಿದೆ. ಇದೇ ಕಾರಣಕ್ಕಾಗಿ ರಾಜಧಾನಿ ಬೆಂಗಳೂರು ನಗರ ಸೇರಿದಂತೆ ರಾಜ್ಯದ ಒಟ್ಟು ಹತ್ತು ಜಿಲ್ಲೆಗಳಿಗೆ ಮುನ್ನೆಚ್ಚರಿಕಾ ಕ್ರಮವಾಗಿ ಇಂದು 'ಯೆಲ್ಲೋ ಅಲರ್ಟ್' ಘೋಷಿಸಲಾಗಿತ್ತು. ಅದರಂತೆಯೇ ನಗರದಲ್ಲಿ ಸಂಜೆ ವೇಳೆಗೆ ಮೋಡ ಕವಿದ ವಾತಾವರಣ ಸೃಷ್ಟಿಯಾಗಿ ಗುಡುಗು ಸಹಿತ ಭಾರಿ ಮಳೆ ಸುರಿಯಿತು.

# ಕೆಪಿಎಸ್‌ಸಿ ಮುಚ್ಚುವ ಬಗ್ಗೆ ಚಿಂತನೆ: ಡಿ.ಕೆ. ಶಿವಕುಮಾರ್

1ನೇ ಪುಟದಿಂದ

ಸಾಲ ಜಾಸ್ತಿಯಾಗಿರುವುದರಿಂದ ಹೊಸ ಯೋಜನೆ ಘೋಷಣೆ ಮಾಡಲಿಕ್ಕೆ ಆಗುತ್ತಿಲ್ಲ. ಆರ್ಥಿಕ ಇಲಾಖೆ ಈ ಬಗ್ಗೆ ಸರ್ಕಾರಕ್ಕೆ ಪತ್ರ ಬರೆದಿದೆ ಎಂಬ ಪ್ರಶ್ನೆಗೆ, "ಸರ್ಕಾರದ ಹಿತಕ್ಕಾಗಿ ಸಲಹೆ ನೀಡಿದೆ. ಹಣಕಾಸು ಸಚಿವನಾಗಿ ನನಗೆ ಯಾವ ಯೋಜನೆಯನ್ನು ನಿಲ್ಲಿಸಬೇಕು, ಯಾವ ಯೋಜನೆ ಸೇರಿಸಬೇಕು ಎನ್ನುವುದು ತಿಳಿದಿದೆ. ಎಲ್ಲಾ ಬೆಲೆಗಳು ಗಗನಕ್ಕೆ ಏರಿಕೆಯಾಗಿವೆ, ಜನರ ಆದಾಯ ಕುಸಿದು ಹೋಗಿದೆ. ಹಾಗಾಗಿ 5 ಗ್ಯಾರಂಟಿಗಳನ್ನು ಕೊಟ್ಟಿದ್ದೇವೆ. ರೈತರು, ಜನರ ಬದುಕಿಗೆ ನೆರವಾಗುತ್ತಿದ್ದೇವೆ. ಈ ಮಧ್ಯೆ ಕರ್ನಾಟಕ ಅಭಿವೃದ್ಧಿಯಲ್ಲಿ ಮುಂದಿದೆ" ಎಂದು ಹೇಳಿದರು. ನಾನು ಮುಖ್ಯಮಂತ್ರಿಯಾಗಿದ್ದಾಗ ಪ್ರಧಾನಿಗಳಿಗೆ ಸಾಲ ಮನ್ನಾ ಮಾಡಿ ಎಂದು ಕೇಳಿಲ್ಲ ಅಂತ ಕುಮಾರಸ್ವಾಮಿ ಅವರ ಹೇಳಿಕೆ ಬಗ್ಗೆ ಕೇಳಿದಾಗ, "ಸಾಲ ಮನ್ನಾ ಮಾಡಿದ್ದು ನಮ್ಮ, ರಾಹುಲ್ ಗಾಂಧಿ ಅವರ ಬದ್ಧತೆ. ಕುಮಾರಸ್ವಾಮಿ ಅವರ ಬದ್ಧತೆಯಲ್ಲ. ಅದು ನಮ್ಮ ಚಿಂತನೆ, ಕುಮಾರಸ್ವಾಮಿ ಅವರದ್ದಲ್ಲ. ನಾವು ಬೆಂಬಲ ಕೊಟ್ಟಿದ್ದಕ್ಕೆ ಕುಮಾರಸ್ವಾಮಿ ಅವರು ಮುಖ್ಯಮಂತ್ರಿಯಾಗಿದ್ದು. ಬಿಜೆಪಿ ಅವರನ್ನು ದೂರ ಇಡಲು ನಾವು ಬೆಂಬಲ ಕೊಟ್ಟಿದ್ದು. ಆ ಸರ್ಕಾರಕ್ಕೆ ಅಡಿಪಾಯ ಹಾಕಿದ್ದು ನಾವು" ಎಂದರು.

ಸೌಜನ್ಯ ಪ್ರಕರಣ ಮರುತನಿಖೆ ಬಗ್ಗೆ ಕೇಳಿದಾಗ, "ಸೌಜನ್ಯ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಹಿತಿ ಪಡೆಯುತ್ತೇನೆ. ತನಿಖೆಗೆ ಯಾರೂ ಹಸ್ತಕ್ಷೇಪ ಮಾಡುವುದಿಲ್ಲ. ಕಾನೂನು ಪ್ರಕಾರ ಎಲ್ಲವೂ ನಡೆಯುತ್ತದೆ" ಎಂದರು.

# ವೈದ್ಯಕೀಯ ಶಿಕ್ಷಣ ಇಲಾಖೆ ಹೆಚ್ಚುವರಿ ಮುಖ್ಯ ಕಾರ್ಯದರ್ಶಿಗಳ ವಿರುದ್ಧದ ಇಲಾಖಾ ವಿಚಾರಣೆಗೆ ತಡೆ

● ವಿಕ್ರಮ ವಾಹಿನಿ । ಬೆಂಗಳೂರು

ಶಿವಮೊಗ್ಗ ವೈದ್ಯಕೀಯ ಶಿಕ್ಷಣ ಸಂಸ್ಥೆಯ ಪ್ರಾಧ್ಯಾಪಕರಾದ ಡಾ. ಅಶ್ವಿನ್ ಹೆಬ್ಬಾರ್ ಪ್ರಕರಣಕ್ಕೆ ಸಂಬಂಧಿಸಿದಂತೆ ವೈದ್ಯಕೀಯ ಶಿಕ್ಷಣ ಇಲಾಖೆ ಹೆಚ್ಚುವರಿ ಮುಖ್ಯ ಕಾರ್ಯದರ್ಶಿಗಳಾದ ಮೊಹಮ್ಮದ್ ಮೊಹ್ಸಿನ್ ವಿರುದ್ಧದ ಇಲಾಖಾವಾರು ವಿಚಾರಣೆಗೆ ಸುಪ್ರೀಂ ಕೋರ್ಟ್ ತಡೆಯಾಜ್ಞೆ ನೀಡಿದೆ.


ಇಲಾಖಾವಾರು ವಿಚಾರಣೆಗೆ ಆಗಸ್ಟ್ 4 ರಂದು ಆದೇಶ ನೀಡಿದ್ದ ಕರ್ನಾಟಕ ಹೈಕೋರ್ಟ್ ಆದೇಶ ಪ್ರಶ್ನಿಸಿ ಸಲ್ಲಿಸಲಾಗಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿಗಳಾದ ದೀಪಾಂಕರ್ ದತ್ತಾ ನೇತೃತ್ವದ ನ್ಯಾಯಪೀಠ, ಈ ತಡೆಯಾಜ್ಞೆ ನೀಡಿದೆ.

ಸಿಮ್ಸ್‌ನ ಪ್ರಾಧ್ಯಾಪಕರಾದ ಡಾ. ಅಶ್ವಿನ್ ಹೆಬ್ಬಾರ್ ವಿರುದ್ಧ ಲೈಂಗಿಕ ಕಿರುಕುಳ ನೀಡಿದ ಆರೋಪದ ಮೇಲೆ ಅವರನ್ನು ಅಮಾನತು ಮಾಡಿ ನಂತರ ಹಿಂಪಡೆದು ಹಾವೇರಿ ವೈದ್ಯಕೀಯ ಶಿಕ್ಷಣ ಸಂಸ್ಥೆಗೆ ವರ್ಗಾವಣೆ ಮಾಡಲಾಗಿತ್ತು. ಡಾ. ಹೆಬ್ಬಾರ್ ಈ ಸಂಬಂಧ ಹೈಕೋರ್ಟ್ ನಲ್ಲಿ ದೂರು ಸಲ್ಲಿಸಿದರು. ಇದರ ವಿಚಾರಣೆ ನಡೆಸಿದ್ದ ಹೈಕೋರ್ಟ್ ನ್ಯಾಯಪೀಠ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಹಾಗೂ ಸಿಮ್ಸ್ ನಿರ್ದೇಶಕರಾದ ಡಾ. ವಿರೂಪಾಕ್ಷಪ್ಪ ಅವರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಆದೇಶಿಸಿತ್ತು.

ಇಲಾಖಾವಾರು ತನಿಖೆಗೆ ಆದೇಶ ನೀಡಿದ್ದ ಹೈಕೋರ್ಟ್ ತೀರ್ಪು ಪ್ರಶ್ನಿಸಿ ರಾಜ್ಯ ಸರ್ಕಾರ ಮತ್ತು ಹೆಚ್ಚುವರಿ ಮುಖ್ಯ ಕಾರ್ಯದರ್ಶಿಗಳು ಸುಪ್ರೀಂ ಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿದ್ದರು.

ಇದರ ವಿಚಾರಣೆ ನಡೆಸಿದ ಸುಪ್ರೀಂ ಕೋರ್ಟ್ ನ್ಯಾಯಪೀಠವು ಹೈಕೋರ್ಟ್ ಆದೇಶಕ್ಕೆ ತಡೆಯಾಜ್ಞೆ ನೀಡಿದೆ ಮತ್ತು ಡಾ. ಅಶ್ವಿನ್ ಹೆಬ್ಬಾರ್ ಅಮಾನತು ಆದೇಶವನ್ನು ಮುಂದಿನ ವಿಚಾರಣೆವರೆಗೆ ಮುಂದುವರಿಸಿದೆ. ಸುಪ್ರೀಂ ಕೋರ್ಟ್‌ನ ಈ ಮಧ್ಯಂತರ ಆದೇಶದಿಂದ ಪ್ರಕರಣಕ್ಕೆ ಸಂಬಂಧಿಸಿದಂತೆ ಹೈಕೋರ್ಟ್ ನಿರ್ದೇಶನದ ಮೇರೆಗೆ ಕೈಗೊಳ್ಳಬೇಕಿದ್ದ ಇಲಾಖಾ ವಿಚಾರಣೆ ಸದ್ಯಕ್ಕೆ ಸ್ಥಗಿತಗೊಂಡಿದೆ.

ಇದೇ ವೇಳೆ, ಡಾ. ಅಶ್ವಿನ್ ಹೆಬ್ಬಾರ್ ಅವರ ಅಮಾನತು ಮುಂದುವರಿಸುವಂತೆ ಸುಪ್ರೀಂ ಕೋರ್ಟ್ ಸೂಚಿಸಿರುವ ಹಿನ್ನೆಲೆಯಲ್ಲಿ, ಪ್ರಕರಣಕ್ಕೆ ಸಂಬಂಧಿಸಿದ ಮುಂದಿನ ಆಡಳಿತಾತ್ಮಕ ಕ್ರಮಗಳು ನ್ಯಾಯಾಲಯದ ಮುಂದಿನ ಆದೇಶಕ್ಕೆ ಒಳಪಟ್ಟಿರಲಿವೆ. ಪ್ರಕರಣದ ಮುಂದಿನ ವಿಚಾರಣೆಯ ದಿನಾಂಕ ಹಾಗೂ ನ್ಯಾಯಾಲಯದ ಅಂತಿಮ ತೀರ್ಪಿನತ್ತ ಇದೀಗ ಗಮನ ನೆಟ್ಟಿದೆ.



ನವಿ ಮುಂಬೈನ ವಾಶಿಯಲ್ಲಿರುವ ಪುತ್ತಿಗೆ ಶಾಖಾ ಮಠದಲ್ಲಿ ವೆಂಕಟಕೃಷ್ಣ ದೇವರ ಪ್ರತಿಷ್ಠಾ ಮಹೋತ್ಸವವು ಅತ್ಯಂತ ವೈಭವದಿಂದ ನಡೆಯಿತು. ಇದರ ಅಂಗವಾಗಿ ಸಾಮೂಹಿಕ ಪ್ರಾರ್ಥನೆ, ಪುಣ್ಯಾಹ, ವಾಸ್ತು ಪೂಜೆ, ಪ್ರತಿಷ್ಠಾ ಹೋಮ, ಮೊದಲಾದ ಪ್ರತಿಷ್ಠಾ ವಿಧಿ ವಿಧಾನಗಳು ಜರುಗಿದವು. ನಂತರ ಪುತ್ತಿಗೆ ಮಠದ ಶ್ರೀ ಸುಗುಣೇಂದ್ರತೀರ್ಥ ಶ್ರೀಪಾದರಿಂದ ಪ್ರಾಣ ಪ್ರತಿಷ್ಠೆಯು ನಡೆಯಿತು. ನಂತರ ದೇವರಿಗೆ ಅಭಿಷೇಕ ಗಳನ್ನು ಮಾಡಿ ಸುಮುಹೂರ್ತದಲ್ಲಿ ದೇವರ ಪ್ರತಿಷ್ಠಾ ಮಹೋತ್ಸವವನ್ನು ಪುತ್ತಿಗೆ ಶ್ರೀಪಾದರು ಮಾಡಿದರು. ನಂತರ ವಿಷ್ಣು ಸಹಸ್ರನಾಮ ಪಾರಾಯಣದೊಂದಿಗೆ ದೇವರಿಗೆ ವಿಶೇಷ ಅಲಂಕಾರವನ್ನು ಮಾಡಿ ಮಹಾ ಪೂಜೆಯನ್ನು ಮಾಡಿದರು. ಅಪಾರ ಸಂಖ್ಯೆಯ ಭಕ್ತರು ಈ ವೆಂಕಟಕೃಷ್ಣ ದೇವರ ಪ್ರತಿಷ್ಠಾ ಮಹೋತ್ಸವದಲ್ಲಿ ಪಾಲ್ಗೊಂಡು ಧನ್ಯತಾಭಾವ ಹೊಂದಿದರು.

PRGI NO: KARKAN/2018/78481




## 28 ವಿಧಾನ ಪರಿಷತ್ ಸ್ಥಾನಗಳಿಗೆ ಚುನಾವಣೆ ಘೋಷಣೆ

● ವಿಕ್ರಮ ವಾಹಿನಿ । ನವದೆಹಲಿ

ಉತ್ತರ ಪ್ರದೇಶ, ಬಿಹಾರ, ಮಹಾರಾಷ್ಟ್ರ ಹಾಗೂ ಕರ್ನಾಟಕದ ವಿಧಾನ ಪರಿಷತ್ತಿನ 28 ಪದವೀಧರ ಮತ್ತು ಶಿಕ್ಷಕರ ಕ್ಷೇತ್ರಗಳಿಗೆ ದ್ವೈವಾರ್ಷಿಕ ಚುನಾವಣೆ ನಡೆಸಲು ಕೇಂದ್ರ ಚುನಾವಣಾ ಆಯೋಗ ವೇಳಾಪಟ್ಟಿ ಪ್ರಕಟಿಸಿದೆ. ನಾಲ್ಕೂ ರಾಜ್ಯಗಳಲ್ಲಿ ಅಕ್ಟೋಬರ್ 23ರಂದು ಬೆಳಗ್ಗೆ 8ರಿಂದ ಸಂಜೆ 4ರವರೆಗೆ ಮತದಾನ ನಡೆಯಲಿದ್ದು, ಅಕ್ಟೋಬರ್ 27ರಂದು ಮತ ಎಣಿಕೆ ನಡೆಯಲಿದೆ.

ಉತ್ತರ ಪ್ರದೇಶದಲ್ಲಿ 11, ಬಿಹಾರದಲ್ಲಿ 8, ಮಹಾರಾಷ್ಟ್ರದಲ್ಲಿ 5 ಹಾಗೂ ಕರ್ನಾಟಕದಲ್ಲಿ 4 ಸ್ಥಾನಗಳಿಗೆ ಚುನಾವಣೆ ನಡೆಯಲಿದೆ. ಕರ್ನಾಟಕದಲ್ಲಿ ಎರಡು ಪದವೀಧರ ಹಾಗೂ ಎರಡು ಶಿಕ್ಷಕರ ಕ್ಷೇತ್ರಗಳು ಸೇರಿವೆ.

ಚುನಾವಣಾ ಅಧಿಸೂಚನೆ ಸೆ.29ರಂದು ಹೊರಬೀಳಲಿದ್ದು, ಅ.6 ನಾಮಪತ್ರ ಸಲ್ಲಿಕೆಗೆ ಕೊನೆಯ ದಿನ. ಅ.7ರಂದು ನಾಮಪತ್ರಗಳ ಪರಿಶೀಲನೆ ನಡೆಯಲಿದ್ದು, ಅ.9 ನಾಮಪತ್ರ ಹಿಂಪಡೆಯಲು ಕೊನೆಯ ದಿನವಾಗಿದೆ.

ನಾಲ್ಕು ಕ್ಷೇತ್ರಗಳ ಚುನಾವಣೆ ಘೋಷಣೆಯಾಗಿರುವ ಹಿನ್ನೆಲೆಯಲ್ಲಿ ಕರ್ನಾಟಕದಲ್ಲಿ ರಾಜಕೀಯ ಚಟುವಟಿಕೆಗಳು ಚುರುಕುಗೊಳ್ಳಲಿವೆ. ಬಿಜೆಪಿ ಈಗಾಗಲೇ ಈಶಾನ್ಯ ಶಿಕ್ಷಕರ ಕ್ಷೇತ್ರಕ್ಕೆ ಶಶೀಲ್ ಜಿ. ನಮೋಶಿ, ಪಶ್ಚಿಮ ಪದವೀಧರ ಕ್ಷೇತ್ರಕ್ಕೆ ಎಸ್.ವಿ. ಸಂಕನೂರು ಹಾಗೂ ಆಗ್ನೇಯ ಪದವೀಧರ ಕ್ಷೇತ್ರಕ್ಕೆ ಕೆ.ಎಂ. ಸುರೇಶ್ ಅವರನ್ನು ಅಭ್ಯರ್ಥಿಗಳಾಗಿ ಘೋಷಿಸಿದೆ. ಕಾಂಗ್ರೆಸ್ ಕೂಡ ಅಭ್ಯರ್ಥಿಗಳ ಘೋಷಣೆ ಮಾಡಿರುವುದಾಗಿ ತಿಳಿದುಬಂದಿದ್ದು, ನಾಮಪತ್ರ ಸಲ್ಲಿಕೆ ಹಾಗೂ ಪರಿಶೀಲನೆ ಬಳಿಕ ಅಂತಿಮ ಅಭ್ಯರ್ಥಿಗಳ ಚಿತ್ರಣ ಸ್ಪಷ್ಟವಾಗಲಿದೆ.

ಚುನಾವಣೆ ವೇಳಾಪಟ್ಟಿ ಪ್ರಕಟವಾದ ಹಿನ್ನೆಲೆಯಲ್ಲಿ ಸಂಬಂಧಿತ ಪದವೀಧರ ಮತ್ತು ಶಿಕ್ಷಕರ ಕ್ಷೇತ್ರಗಳಲ್ಲಿ ಮಾದರಿ ನೀತಿ ಸಂಹಿತೆ ಜಾರಿಗೆ ಬಂದಿದೆ.

## ಹೊಸ ಸಾಲಕ್ಕೂ ಅರ್ಹತೆ ಇಲ್ಲ: ಆರ್ಥಿಕ ಇಲಾಖೆ ಸರ್ಕಾರಕ್ಕೆ ಕಪಾಳಮೋಕ್ಷ ಮಾಡಿದೆ



● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯದ ಆರ್ಥಿಕ ಸ್ಥಿತಿ ಸಂಕಷ್ಟದಲ್ಲಿದ್ದು, ಹೊಸ ಯೋಜನೆಗಳಿಗೆ ಹಣಕಾಸು ಒದಗಿಸುವುದು ಕಷ್ಟವಾಗಬಹುದು ಎಂದು ಆರ್ಥಿಕ ಇಲಾಖೆಯೇ ಸರ್ಕಾರಕ್ಕೆ ಎಚ್ಚರಿಕೆ ನೀಡಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆರೋಪಿಸಿದರು. ವಿಧಾನಸಭೆಯಲ್ಲಿ ಬರಗಾಲದ ಚರ್ಚೆಯಲ್ಲಿ ಮಾತನಾಡಿದ ಅವರು, ಹೊಸ ಸಾಲ ಪಡೆಯುವ ಸಾಮರ್ಥ್ಯವೂ ಮಿತಿಗೆ ತಲುಪಿದೆ ಎಂದು ಆರ್ಥಿಕ ಇಲಾಖೆಯ ಪತ್ರದಲ್ಲಿ ಉಲ್ಲೇಖಿಸಲಾಗಿದೆ ಎಂದರು.

ರಾಜ್ಯದ ವಿತ್ತೀಯ ಕೊರತೆ ಶೇ.2.95ಕ್ಕೆ ತಲುಪಿದ್ದು, ಎಫ್‌ಆರ್‌ಪಿಎಂ ಕಾಯ್ದೆಯ ಶೇ.3ರ ಮಿತಿಯ ಸಮೀಪದಲ್ಲಿದೆ. ರಾಜಸ್ವ ಕೊರತೆ 22,952 ಕೋಟಿ ಹಾಗೂ ಜಿಎಸ್‌ಡಿಪಿಗೆ ಹೋಲಿಸಿದರೆ ರಾಜ್ಯದ ಬಾಕಿ ಬಾಧ್ಯತೆಗಳು ಶೇ.24.94ಕ್ಕೆ ತಲುಪಿವೆ ಎಂದು ಆರ್ಥಿಕ ಇಲಾಖೆ ತಿಳಿಸಿದೆ ಎಂದು ಅಶೋಕ ಹೇಳಿದರು. 2026–27ರ ಬಜೆಟ್‌ನಲ್ಲಿ ಘೋಷಿಸಿರುವ ಯೋಜನೆಗಳಿಗೆ ಹೆಚ್ಚುವರಿ ಸಾಲ ಪಡೆಯಲು ಅವಕಾಶ ಕಡಿಮೆಯಾಗಿದ್ದು, ಹೊಸ ಯೋಜನೆಗಳಿಗೆ ಹಣಕಾಸು ಒದಗಿಸುವುದು ಕಷ್ಟವಾಗಬಹುದು ಎಂದು ಪತ್ರದಲ್ಲಿ ಹೇಳಲಾಗಿದೆ ಎಂದರು. ರಾಜ್ಯದಲ್ಲಿ ಬರ ಪರಿಸ್ಥಿತಿ ಎದುರಾಗಿದ್ದರೂ ಕುಡಿಯುವ ನೀರು, ಗೋಶಾಲೆ, ಮೇವು ಹಾಗೂ ಬೋರ್‌ವೆಲ್‌ಗಳ ದುರಸ್ತಿಗೆ ಅಗತ್ಯ ಅನುದಾನ ಒದಗಿಸಿಲ್ಲ ಎಂದು ಅಶೋಕ ಆರೋಪಿಸಿದರು. ಬರದ ಮುನ್ಸೂಚನೆ ಏಪ್ರಿಲ್‌ನಲ್ಲೇ ಲಭ್ಯವಿದ್ದರೂ ಸರ್ಕಾರ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳದೆ, ಬರ ಘೋಷಣೆಯಲ್ಲೂ ವಿಳಂಬ ಮಾಡಿದೆ ಎಂದು ದೂರಿದರು.

ಬರ ನಿರ್ವಹಣೆಗೆ ತಕ್ಷಣ ಕ್ರಮ ಕೈಗೊಂಡು ಪ್ರತಿ ಎಕರೆಗೆ 50 ಸಾವಿರ ಪರಿಹಾರ, ರೈತರ ಸಾಲಮನ್ನಾ, ಮೇವು ಸಂಗ್ರಹ, ಗ್ರಾಮಕ್ಕೊಂದು ಗೋಶಾಲೆ ಹಾಗೂ ಕೆರೆಗಳ ಹೂಳೆತ್ತುವ ಕಾಮಗಾರಿಗೆ ಹಣ ಬಿಡುಗಡೆ ಮಾಡಬೇಕು ಎಂದು ಆಗ್ರಹಿಸಿದರು. ಬೋರ್‌ವೆಲ್ ದುರಸ್ತಿ ಹಾಗೂ ವಿದ್ಯುತ್ ಟ್ರಾನ್ಸ್‌ಫಾರ್ಮರ್ ಬದಲಾವಣೆಗೆ ಆದ್ಯತೆ ನೀಡಬೇಕು ಎಂದರು.

ಬರದ ವಿಚಾರದಲ್ಲಿ ಕಾಂಗ್ರೆಸ್ ಶಾಸಕರಲ್ಲಿಯೇ ಅಸಮಾಧಾನ ವ್ಯಕ್ತವಾಗುತ್ತಿದೆ ಎಂದು ಹೇಳಿದ ಅಶೋಕ, ರೈತರ ಸಮಸ್ಯೆಗಳನ್ನು ನೇರವಾಗಿ ಪರಿಶೀಲಿಸಲು ಸರ್ಕಾರ ಹೊಲಗಳಿಗೆ ತೆರಳಬೇಕು. ಹೆಲಿಕಾಪ್ಟರ್ ಮೂಲಕ ಬರ ವೀಕ್ಷಿಸುವುದರಿಂದ ರೈತರ ನೈಜ ಸಮಸ್ಯೆ ಅರ್ಥವಾಗುವುದಿಲ್ಲ ಎಂದು ಟೀಕಿಸಿದರು.

# ಕಸ್ತೂರಿ ರಂಗನ್ ವರದಿ, ಬರದ ವಿಚಾರದಲ್ಲಿ ರಾಜಕೀಯ ಬೇಡ: ಪರಮೇಶ್ವರ್

● ವಿಕ್ರಮ ವಾಹಿನಿ । ಬೆಂಗಳೂರು

ಕಸ್ತೂರಿ ರಂಗನ್ ವರದಿ ಹಾಗೂ ರಾಜ್ಯದಲ್ಲಿನ ಗಂಭೀರ ಬರ ಪರಿಸ್ಥಿತಿ ರಾಜ್ಯದ ಹಿತಾಸಕ್ತಿಗೆ ಸಂಬಂಧಿಸಿದ ಮಹತ್ವದ ವಿಚಾರಗಳಾಗಿದ್ದು, ಇವುಗಳ ಕುರಿತು ವಿಧಾನಮಂಡಲದಲ್ಲಿ ಆಡಳಿತ ಮತ್ತು ವಿರೋಧ ಪಕ್ಷಗಳು ಪಕ್ಷಭೇದ ಮರೆತು ಸಮಗ್ರ ಚರ್ಚೆ ನಡೆಸಿ ಒಗ್ಗಟ್ಟಿನ ನಿಲುವು ರೂಪಿಸಬೇಕು ಎಂದು ಉಪಮುಖ್ಯಮಂತ್ರಿ ಹಾಗೂ ಕಂದಾಯ ಸಚಿವ ಡಾ. ಜಿ. ಪರಮೇಶ್ವರ ಮನವಿ ಮಾಡಿದರು.

ವಿಧಾನಪರಿಷತ್‌ನಲ್ಲಿ ಮಾತನಾಡಿದ ಅವರು, ಕಸ್ತೂರಿ ರಂಗನ್ ವರದಿಯ 7ನೇ ಕರಡು ಪ್ರತಿಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರವು ತನ್ನ ಅಭಿಪ್ರಾಯವನ್ನು ಕೇಂದ್ರಕ್ಕೆ ಸಲ್ಲಿಸಬೇಕಿದೆ. ಸರ್ಕಾರದ ನಿಲುವನ್ನು ಮಾತ್ರ ಕಳುಹಿಸುವ ಬದಲು, ಸದನದಲ್ಲಿ ಮುಕ್ತ ಚರ್ಚೆ ನಡೆಸಿ ರಾಜ್ಯದ ಹಿತದೃಷ್ಟಿಯಿಂದ ಒಮ್ಮತದ ನಿರ್ಣಯ ಕೈಗೊಂಡು ಕೇಂದ್ರಕ್ಕೆ ತಿಳಿಸುವುದು ಸೂಕ್ತ ಎಂದರು.

**ಶೇ.36ರಷ್ಟು ಮಳೆ ಕೊರತೆ:** ರಾಜ್ಯದಲ್ಲಿ ಈ ಬಾರಿ ಗಂಭೀರ ಬರ ಪರಿಸ್ಥಿತಿ ಎದುರಾಗಿದ್ದು, ಬಹುತೇಕ ಭಾಗಗಳಲ್ಲಿ ಮಳೆ ಕೊರತೆಯಿಂದ ಕೃಷಿ ಚಟುವಟಿಕೆ ಹಾಗೂ ರೈತರ ಬದುಕಿನ ಮೇಲೆ ಪರಿಣಾಮ ಬೀರಿದೆ.



**ಕಸ್ತೂರಿರಂಗನ್ ವರದಿ ಹಾಗೂ ಬರ ಪರಿಸ್ಥಿತಿ ಕುರಿತು ಪಕ್ಷಭೇದ ಮರೆತು ವಿಧಾನಮಂಡಲದಲ್ಲಿ ಚರ್ಚಿಸಿ, ರಾಜ್ಯದ ಹಿತದೃಷ್ಟಿಯಿಂದ ಒಮ್ಮತದ ನಿಲುವು ರೂಪಿಸಿ ಕೇಂದ್ರಕ್ಕೆ ಸಲ್ಲಿಸೋಣ ಎಂದು ಡಾ. ಜಿ. ಪರಮೇಶ್ವರ ಮನವಿ ಮಾಡಿದರು.**

ವಾಡಿಕೆಯ 852 ಮಿ.ಮೀ. ಮಳೆಯ ಬದಲಿಗೆ 642 ಮಿ.ಮೀ. ಮಳೆಯಾಗಿದ್ದು, ರಾಜ್ಯದ ಸರಾಸರಿ ಮಳೆ ಕೊರತೆ ಶೇ.36ರಷ್ಟಿದೆ. ದಕ್ಷಿಣ ಒಳನಾಡಿನಲ್ಲಿ ಶೇ.46, ಉತ್ತರ ಒಳನಾಡಿನಲ್ಲಿ ಶೇ.44, ಮಲೆನಾಡಿನಲ್ಲಿ ಶೇ.38 ಹಾಗೂ ಕರಾವಳಿಯಲ್ಲಿ ಶೇ.28ರಷ್ಟು ಕೊರತೆ ದಾಖಲಾಗಿದೆ ಎಂದು ತಿಳಿಸಿದರು.

ಮಳೆ ಆರಂಭವಾದ ಬಳಿಕ ರೈತರು ಬಿತ್ತನೆ ಕೈಗೊಂಡಿದ್ದರೂ ಕೆಲವೇ ದಿನಗಳಲ್ಲಿ ಮಳೆ ಕೈಕೊಟ್ಟ ಪರಿಣಾಮ ಬೆಳೆಗಳು ಒಣಗಿವೆ. ನಂತರ ಮಳೆಯಾದಾಗ ಎರಡನೇ ಬಾರಿ ಬಿತ್ತನೆ ಮಾಡಿದ ಬೆಳೆಗಳಿಗೂ ಹಾನಿಯಾಗಿದ್ದು, ಹಲವು ಪ್ರದೇಶಗಳಲ್ಲಿ ಬೆಳೆ ನಷ್ಟ ತೀವ್ರವಾಗಿದೆ ಎಂದರು.

**177 ತಾಲೂಕುಗಳು ಬರಪೀಡಿತ:** ಕೇಂದ್ರ ಸರ್ಕಾರದ ಬರ ಘೋಷಣೆ ಮಾರ್ಗಸೂಚಿಯನ್ವಯ ಮೊದಲ ಹಂತದಲ್ಲಿ 101 ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಲಾಗಿತ್ತು. ಬಳಿಕ 23 ತಾಲೂಕುಗಳನ್ನು ಸೇರ್ಪಡೆ ಮಾಡಲಾಗಿದ್ದು, ಇದೀಗ ಮತ್ತೆ 53 ತಾಲೂಕುಗಳನ್ನು ಪಟ್ಟಿಗೆ ಸೇರಿಸಲಾಗುತ್ತಿದೆ. ಇದರೊಂದಿಗೆ ಬರಪೀಡಿತ ತಾಲೂಕುಗಳ ಸಂಖ್ಯೆ 177ಕ್ಕೆ ಏರಿಕೆಯಾಗಲಿದೆ ಎಂದು ಪರಮೇಶ್ವರ ಹೇಳಿದರು.

ನೆಲಮಟ್ಟದ ಪರಿಸ್ಥಿತಿ, ಮಳೆ ಕೊರತೆ ಹಾಗೂ ಬೆಳೆ ಹಾನಿ ಸೇರಿದಂತೆ ನಿಗದಿತ ಮಾನದಂಡಗಳ ಆಧಾರದಲ್ಲಿ ನಿರಂತರ ಮೌಲ್ಯಮಾಪನ ನಡೆಯಲಿದ್ದು, ಮುಂದಿನ ಹಂತದಲ್ಲಿ ಮತ್ತಷ್ಟು ತಾಲೂಕುಗಳು ಪಟ್ಟಿಗೆ ಸೇರ್ಪಡೆಯಾಗುವ ಸಾಧ್ಯತೆಯಿದೆ. ಸಂಖ್ಯೆ ಸುಮಾರು 200ಕ್ಕೆ ತಲುಪುವ ಸಾಧ್ಯತೆಯೂ ಇದೆ ಎಂದರು.

ಕೇಂದ್ರ ಸರ್ಕಾರವೇ ಬರ ಘೋಷಣೆ ಹಾಗೂ ಪರಿಹಾರಕ್ಕೆ ಮಾನದಂಡಗಳನ್ನು ರೂಪಿಸಿರುವುದರಿಂದ, ರಾಜ್ಯ ಸರ್ಕಾರವು ಅವುಗಳ ಚೌಕಟ್ಟಿನಲ್ಲಿಯೇ ಕ್ರಮ ಕೈಗೊಳ್ಳಬೇಕಾಗಿದೆ. ಮಾನದಂಡ ಮೀರಿ ಎಲ್ಲ ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಿದರೆ ಕೇಂದ್ರ ಪರಿಹಾರ ಪಡೆಯುವ ಪ್ರಕ್ರಿಯೆಗೆ ತೊಡಕು ಉಂಟಾಗಬಹುದು. ನಿಯಮಾನುಸಾರ ರಾಜ್ಯಕ್ಕೆ ದೊರೆಯಬೇಕಾದ ಬರ ಪರಿಹಾರವನ್ನು ಕೇಂದ್ರ ನೀಡಬೇಕು. ರಾಜ್ಯ ಸರ್ಕಾರವೂ ತನ್ನ ಜವಾಬ್ದಾರಿಯಿಂದ ಹಿಂದೆ ಸರಿಯದೆ ರೈತರಿಗೆ ನೆರವು ತಲುಪಿಸಲಿದೆ ಎಂದು ಹೇಳಿದರು. ಕಸ್ತೂರಿ ರಂಗನ್ ವರದಿ ಮತ್ತು ಬರ ಎರಡೂ ರಾಜ್ಯದ ಹಿತಾಸಕ್ತಿಗೆ ಸಂಬಂಧಿಸಿದ ವಿಚಾರಗಳಾಗಿರುವುದರಿಂದ, ಪಕ್ಷಭೇದ ಮರೆತು ಒಗ್ಗಟ್ಟಿನ ನಿಲುವು ರೂಪಿಸಿ ಕೇಂದ್ರದ ಮುಂದೆ ಮಂಡಿಸೋಣ ಎಂದು ಪರಮೇಶ್ವರ ಸದನಕ್ಕೆ ಮನವಿ ಮಾಡಿದರು.



**ನವದೆಹಲಿಯ ವಸಂತ್ ಕುಂಜ್‌ನಲ್ಲಿರುವ ವೇದವ್ಯಾಸ ಗುರುಕುಲದಲ್ಲಿ ಚಾತುರ್ಮಾಸ್ಯ ವ್ರತಾನುಷ್ಠಾನದಲ್ಲಿರುವ ಉಡುಪಿ ಶ್ರೀ ಪೇಜಾವರ ಮಠದ ಪರಮಪೂಜ್ಯ ಜಗದ್ಗುರು ಶ್ರೀ ಶ್ರೀ ಶ್ರೀ ವಿಶ್ವಪ್ರಸನ್ನತೀರ್ಥ ಶ್ರೀಪಾದರನ್ನು ಕೇಂದ್ರ ಸಚಿವ ಶ್ರೀ ಎಚ್.ಡಿ.ಕುಮಾರಸ್ವಾಮಿ ಅವರು ಭೇಟಿಯಾಗಿ, ಶ್ರೀಗಳ ಆಶೀರ್ವಾದ ಪಡೆದರು. ಈ ಸಂದರ್ಭದಲ್ಲಿ ಶ್ರೀಗಳೊಂದಿಗೆ ಕೆಲಕಾಲ ಧಾರ್ಮಿಕ ಹಾಗೂ ಸಮಕಾಲೀನ ವಿಚಾರಗಳ ಕುರಿತು ಸಂವಾದ ನಡೆಸಿದರು.**

## ಕೆಐಎಯಲ್ಲಿ 28 ಕೋಟಿ ರೂ. ಮೌಲ್ಯದ ಗಾಂಜಾ ಜಪ್ತಿ

● ವಿಕ್ರಮ ವಾಹಿನಿ । ಬೆಂಗಳೂರು

ದೇವನಹಳ್ಳಿ ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ (ಕೆಐಎ) ಕಸ್ಟಮ್ಸ್ ಅಧಿಕಾರಿಗಳು ನಡೆಸಿದ ಕಾರ್ಯಾಚರಣೆಯಲ್ಲಿ 28 ಕೋಟಿ ರೂ. ಮೌಲ್ಯದ 80.11 ಕೆಜಿ ಹೈಡ್ರೋಪೋನಿಕ್ ಗಾಂಜಾ ಹಾಗೂ 1.75 ಕೋಟಿ ರೂ. ಮೌಲ್ಯದ 1.2 ಕೆಜಿ ಚಿನ್ನವನ್ನು ಜಪ್ತಿ ಮಾಡಲಾಗಿದೆ. ಪ್ರತ್ಯೇಕ ಪ್ರಕರಣಗಳಲ್ಲಿ ಆರು ಪ್ರಯಾಣಿಕರನ್ನು ಬಂಧಿಸಲಾಗಿದೆ.

ವಿಯೆಟ್ನಾಂ ಮತ್ತು ಬ್ಯಾಂಕಾಕ್‌ನಿಂದ ಬಂದ ಪ್ರಯಾಣಿಕರ ಲಗೇಜ್‌ನಲ್ಲಿ ಅಡಗಿಸಿಟ್ಟಿದ್ದ ಗಾಂಜಾವನ್ನು ಪತ್ತೆಹಚ್ಚಲಾಗಿದ್ದು, ನಾಲ್ಕು ಪ್ರಕರಣಗಳಲ್ಲಿ ಐವರನ್ನು ಬಂಧಿಸಲಾಗಿದೆ. ಆರೋಪಿಗಳ ವಿರುದ್ಧ ಎನ್‌ಡಿಪಿಎಸ್ ಕಾಯ್ದೆಯಡಿ ಪ್ರಕರಣ ದಾಖಲಿಸಿ ತನಿಖೆ ಮುಂದುವರಿಸಲಾಗಿದೆ.

ಇನ್ನೊಂದು ಕಾರ್ಯಾಚರಣೆಯಲ್ಲಿ ಅಬುಧಾಬಿ ಹಾಗೂ ಕೌಲಾಲಂಪುರದಿಂದ ಬಂದ ಪ್ರಯಾಣಿಕರಿಂದ ದಾಖಲೆಗಳಿಲ್ಲದೆ ಸಾಗಿಸಲಾಗುತ್ತಿದ್ದ 1.2 ಕೆಜಿ ಚಿನ್ನಾಭರಣವನ್ನು ವಶಪಡಿಸಿಕೊಳ್ಳಲಾಗಿದೆ. ಇದರ ಮೌಲ್ಯ 1.75 ಕೋಟಿ ರೂ. ಎಂದು ಅಂದಾಜಿಸಲಾಗಿದೆ. ಚಿನ್ನದ ಅಕ್ರಮ ಸಾಗಣೆಯ ಬಗ್ಗೆಯೂ ಅಧಿಕಾರಿಗಳು ತನಿಖೆ ನಡೆಸುತ್ತಿದ್ದಾರೆ.

## ಒಂದು ಸಾಲಿನ ನಿರ್ಣಯದಿಂದ ಪ್ರಯೋಜನವಿಲ್ಲ; ವೈಜ್ಞಾನಿಕ ಪರಿಹಾರ ಅಗತ್ಯ

● ವಿಕ್ರಮ ವಾಹಿನಿ । ಬೆಂಗಳೂರು

ಕಸ್ತೂರಿರಂಗನ್ ವರದಿಗೆ ವಿರೋಧವಾಗಿ ಕೇವಲ ಒಂದು ಸಾಲಿನ ನಿರ್ಣಯ ಕೈಗೊಂಡು ಕೇಂದ್ರಕ್ಕೆ ಕಳುಹಿಸುವುದರಿಂದ ಯಾವುದೇ ಪ್ರಯೋಜನವಿಲ್ಲ. ಪಶ್ಚಿಮ ಘಟ್ಟದ ಪರಿಸರ ಹಾಗೂ ಜನಜೀವನ ಎರಡನ್ನೂ ಉಳಿಸುವ ವೈಜ್ಞಾನಿಕ ಪರಿಹಾರ ಕಂಡುಕೊಳ್ಳಬೇಕು ಎಂದು ಶಾಸಕ ವಿ. ಸುನೀಲ್ ಕುಮಾರ್ ಆಗ್ರಹಿಸಿದರು.

ವಿಧಾನಸಭೆಯಲ್ಲಿ ಮಾತನಾಡಿದ ಅವರು, ಪಶ್ಚಿಮ ಘಟ್ಟದ ಜನರ ಬದುಕು ಮತ್ತು ಸಂಸ್ಕೃತಿ ಪರಿಸರದೊಂದಿಗೆ ಅವಿನಾಭಾವ ಸಂಬಂಧ ಹೊಂದಿದೆ. ವರದಿಗೆ ಸಂಬಂಧಿಸಿದಂತೆ 2014ರಲ್ಲಿ ಯಾವ ಅಂಶಗಳಿಗೆ ಒಪ್ಪಿಗೆ ನೀಡಲಾಗಿತ್ತು, ಈಗ ಏಕೆ ವಿರೋಧಿಸಲಾಗುತ್ತಿದೆ ಎಂಬುದನ್ನು ಸರ್ಕಾರ ಸ್ಪಷ್ಟಪಡಿಸಬೇಕು. ಕೇವಲ ನಿಯೋಗ ಕರೆದೊಯ್ದು ಮನವಿ ಸಲ್ಲಿಸುವುದರಿಂದ ಸಮಸ್ಯೆ ಪರಿಹಾರವಾಗುವುದಿಲ್ಲ ಎಂದರು.



ಪರಿಸರ ಸೂಕ್ಷ್ಮ ಪ್ರದೇಶಕ್ಕೆ ಒಳಪಡುವ ಗ್ರಾಮಗಳ ಸರ್ವೆ ನಂಬರ್‌ವಾರು ನಕ್ಷೆ ಸಿದ್ಧಪಡಿಸಿ, ಅಲ್ಲಿರುವ ಕುಟುಂಬಗಳು ಹಾಗೂ ಜನರ ಸಮಗ್ರ ಸಮೀಕ್ಷೆ ನಡೆಸಬೇಕು. ಯಾವ ಪ್ರದೇಶವನ್ನು ಸೂಕ್ಷ್ಮ ವಲಯದಿಂದ ಹೊರಗಿಡಬೇಕು ಎಂಬುದನ್ನು ನಕ್ಷೆಯಲ್ಲಿ ಸ್ಪಷ್ಟಪಡಿಸಿ, ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಸಮಿತಿ ರಚಿಸಿ ವೈಜ್ಞಾನಿಕ ವರದಿ ಸಿದ್ಧಪಡಿಸಬೇಕು ಎಂದು ಸಲಹೆ ನೀಡಿದರು.


ಪಶ್ಚಿಮ ಘಟ್ಟ ಕೇವಲ ಪ್ರವಾಸಿ ಅಥವಾ ಸೆಲ್ಫಿ ತಾಣವಲ್ಲ; ಸಾವಿರಾರು ವರ್ಷಗಳ ಜನಸಂಸ್ಕೃತಿ ಹಾಗೂ ಜೀವನ ಪದ್ಧತಿಯ ನೆಲೆ. ಅಲ್ಲಿನ ಜನರು ಮಾನವ–ಪ್ರಾಣಿ ಸಂಘರ್ಷ ಸೇರಿದಂತೆ ಹಲವು ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ಬೆಂಗಳೂರಿನಲ್ಲಿ ಕುಳಿತು ಪರಿಸರ ಸಂರಕ್ಷಣೆ ಕುರಿತು ಮಾತನಾಡುವುದು ಸುಲಭ, ಆದರೆ ಘಟ್ಟದ ಜನರ ನೈಜ ಸಮಸ್ಯೆಗಳನ್ನು ಅರ್ಥಮಾಡಿಕೊಳ್ಳುವುದು ಅಗತ್ಯ ಎಂದರು.

ಅರಣ್ಯ ಇಲಾಖೆಯ ಕಾಯಿದೆಗಳು ಹಾಗೂ ಸುತ್ತೋಲೆಗಳಿಂದ ಜನರಿಗೆ ತೊಂದರೆಯಾಗುತ್ತಿದ್ದು, ಕುಡಿಯುವ ನೀರಿನ ಪೈಪ್ ಅಳವಡಿಕೆಗೂ ಅನುಮತಿ ಪಡೆಯಲು ವರ್ಷಗಟ್ಟಲೆ ಕಾಯಬೇಕಾದ ಪರಿಸ್ಥಿತಿ ಇದೆ. ಜನರನ್ನು ಒಕ್ಕಲೆಬ್ಬಿಸುವ ಯಾವುದೇ ಕ್ರಮಕ್ಕೆ ಅವಕಾಶ ನೀಡದೆ, ಪರಿಸರ ಸಂರಕ್ಷಣೆ ಮತ್ತು ಜನರ ನ್ಯಾಯಸಮ್ಮತ ಬದುಕಿನ ನಡುವೆ ಸಮತೋಲನ ಸಾಧಿಸುವ ಪರಿಹಾರವನ್ನು ಸರ್ಕಾರ ಕಂಡುಕೊಳ್ಳಬೇಕು ಎಂದು ಸುನೀಲ್ ಕುಮಾರ್ ಒತ್ತಾಯಿಸಿದರು.

## 35 ಲಕ್ಷಕ್ಕೂ ಅಧಿಕ ಆಸ್ತಿಗಳ ಪೈಕಿ 23–24 ಲಕ್ಷ ದಾಖಲೆಗಳ ಗಣಕೀಕರಣ

● ವಿಕ್ರಮ ವಾಹಿನಿ । ಬೆಂಗಳೂರು

ಗ್ರೇಟರ್ ಬೆಂಗಳೂರು ಪ್ರಾಧಿಕಾರ ವ್ಯಾಪ್ತಿಯಲ್ಲಿ ಆಸ್ತಿ ದಾಖಲೆ ವ್ಯವಸ್ಥೆಯನ್ನು ಮತ್ತಷ್ಟು ಸರಳ, ವೇಗದ, ಪಾರದರ್ಶಕ ಹಾಗೂ ಜನಸ್ನೇಹಿಗೊಳಿಸುವ ಉದ್ದೇಶದಿಂದ ರೂಪಿಸಿರುವ ‘ಇ-ಆಸ್ತಿ 2.0’ ವ್ಯವಸ್ಥೆಯನ್ನು ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಅವರು ಮಂಗಳವಾರ ಲೋಕಾರ್ಪಣೆಗೊಳಿಸಿದರು.



ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ನಿರ್ದೇಶನದಂತೆ ಅಭಿವೃದ್ಧಿಪಡಿಸಿರುವ ನೂತನ ವ್ಯವಸ್ಥೆಯಲ್ಲಿ ಬಳಕೆದಾರರ ಅನುಭವಕ್ಕೆ ಆದ್ಯತೆ ನೀಡಿ, ದಾಖಲೆ ಸಲ್ಲಿಕೆ, ತಿದ್ದುಪಡಿ ಹಾಗೂ ಅರ್ಜಿಯ ಸ್ಥಿತಿ ಪರಿಶೀಲನೆ ಸೇರಿದಂತೆ ಹಲವು ಪ್ರಕ್ರಿಯೆಗಳನ್ನು ಸರಳಗೊಳಿಸಲಾಗಿದೆ.

ಬೆಂಗಳೂರಿನಲ್ಲಿ 35 ಲಕ್ಷಕ್ಕೂ ಅಧಿಕ ಆಸ್ತಿಗಳಿದ್ದು, ಈ ಪೈಕಿ 23–24 ಲಕ್ಷಕ್ಕೂ ಅಧಿಕ ಆಸ್ತಿ ದಾಖಲೆಗಳನ್ನು ಗಣಕೀಕರಣಗೊಳಿಸಿ ಡ್ರಾಫ್ಟ್ ಖಾತಾಗಳನ್ನು ವಿತರಿಸಲಾಗಿದೆ. ಸುಮಾರು 11 ಲಕ್ಷ ಆಸ್ತಿ ಮಾಲೀಕರು ಅಂತಿಮ ಇ-ಖಾತಾ ಪಡೆದುಕೊಂಡಿದ್ದಾರೆ. ಉಳಿದವರು ಅಗತ್ಯ ಮಾಹಿತಿಯನ್ನು ಸಲ್ಲಿಸಿ ಅಂತಿಮ ಇ-ಖಾತಾ ಪಡೆಯಬಹುದು ಎಂದು ಸಚಿವರು ತಿಳಿಸಿದರು.

ಇ-ಖಾತಾ ವ್ಯವಸ್ಥೆಗೆ ತಂತ್ರಜ್ಞಾನ ಆಧಾರಿತ ಹಾಗೂ ನಾಗರಿಕ ಕೇಂದ್ರಿತ ಸೇವೆಗಾಗಿ ರಾಷ್ಟ್ರೀಯ ಇ-ಆಡಳಿತ 2025 ಚಿನ್ನದ ಪ್ರಶಸ್ತಿ ಲಭಿಸಿದೆ.

ಹೊಸ ವ್ಯವಸ್ಥೆಯಲ್ಲಿ ಖಾತಾದಲ್ಲಿನ ಹೆಸರು, ಮಾಲೀಕರ ವಿವರ, ಆಸ್ತಿಯ ವಿಸ್ತೀರ್ಣ ಸೇರಿದಂತೆ ದಾಖಲೆಗಳಲ್ಲಿನ ತಪ್ಪುಗಳನ್ನು ಸರಿಪಡಿಸಲು ಸುಲಭ ಅವಕಾಶ ಕಲ್ಪಿಸಲಾಗಿದೆ.

ಇ-ಆಸ್ತಿ 2.0 ಅನ್ನು ಕಾವೇರಿ, ಬೆಂಗಳೂರು ಜಲಮಂಡಳಿ ಹಾಗೂ ಬೆಸ್ಕಾಂ ವ್ಯವಸ್ಥೆಗಳೊಂದಿಗೆ ಸಂಯೋಜಿಸಲಾಗಿದ್ದು, ನಾಗರಿಕರು ವಿವಿಧ ಕಚೇರಿಗಳಿಗೆ ಅಲೆದಾಡುವ ಅಗತ್ಯ ಕಡಿಮೆಯಾಗಲಿದೆ.

ಆಸ್ತಿ ದಾಖಲೆಗಳ ಸ್ಥಿತಿಯನ್ನು ಆನ್‌ಲೈನ್‌ನಲ್ಲೇ ಪರಿಶೀಲಿಸಬಹುದು. ದಾಖಲೆ ಪರಿಶೀಲನೆಗೆ ಕೃತಕ ಬುದ್ಧಿಮತ್ತೆ ಬಳಕೆಯನ್ನೂ ಮಾಡಲಾಗುತ್ತಿದೆ.

ಮುಂದಿನ ಸೋಮವಾರದಿಂದ ಖಾತಾ ವಿಭಜನೆಗೆ ಆನ್‌ಲೈನ್ ಮಾಡ್ಯೂಲ್ ಲಭ್ಯವಾಗಲಿದ್ದು, ನಿಯಮಾನುಸಾರ 20,000 ಚದರ ಅಡಿವರೆಗೆ ವಿಸ್ತೀರ್ಣದ ಆಸ್ತಿಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿ, ಅಗತ್ಯ ದಾಖಲೆಗಳನ್ನು ಅಪ್‌ಲೋಡ್ ಮಾಡಿ ಇ-ಖಾತಾ ಪಡೆಯಲು ಅವಕಾಶ ಕಲ್ಪಿಸಲಾಗುತ್ತದೆ.

ಈ ಸಂದರ್ಭದಲ್ಲಿ ಮುಖ್ಯ ಆಯುಕ್ತ ಮಹೇಶ್ವರ್ ರಾವ್, ವಿಶೇಷ ಆಯುಕ್ತ ಮುನೀಶ್ ಮೌದ್ಗಿಲ್, ನಗರ ಪಾಲಿಕೆ ಆಯುಕ್ತ ಜಗದೀಶ್ ಜಿ., ಡಿ.ಎಸ್. ರಮೇಶ್, ಪೊಮ್ಮಲ ಸುನೀಲ್ ಕುಮಾರ್ ಸೇರಿದಂತೆ ಹಲವು ಅಧಿಕಾರಿಗಳು ಉಪಸ್ಥಿತರಿದ್ದರು.

## ಆನ್‌ಲೈನ್ ಫಾರ್ಮಸಿಗಳ ಔಷಧ ಗುಣಮಟ್ಟಕ್ಕೆ ಎಫ್‌ಡಿಎ ಕಣ್ಣು

● ವಿಕ್ರಮ ವಾಹಿನಿ । ಬೆಂಗಳೂರು

ಶೇ.25ರಿಂದ 30ರಷ್ಟು ರಿಯಾಯಿತಿ ಹಾಗೂ ಕೆಲವೇ ನಿಮಿಷಗಳಲ್ಲಿ ಮನೆ ಬಾಗಿಲಿಗೆ ಔಷಧ ಪೂರೈಕೆ ಮಾಡುವ ಆನ್‌ಲೈನ್ ಫಾರ್ಮಸಿ ಸಂಸ್ಥೆಗಳ ಔಷಧ ಗುಣಮಟ್ಟದ ಮೇಲೆ ಆಹಾರ ಮತ್ತು ಔಷಧ ನಿಯಂತ್ರಣ ಇಲಾಖೆ (ಎಫ್‌ಡಿಎ) ನಿಗಾ ವಹಿಸಿದೆ.

ಆನ್‌ಲೈನ್ ಮೂಲಕ ಔಷಧ ಖರೀದಿಸುವವರ ಸಂಖ್ಯೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ, ವಿವಿಧ ಆನ್‌ಲೈನ್ ಫಾರ್ಮಸಿಗಳಿಂದ ಔಷಧಗಳ ಮಾದರಿಗಳನ್ನು ರ್‍ಯಾಂಡಮ್ ಆಗಿ ಸಂಗ್ರಹಿಸಿ ಪ್ರಯೋಗಾಲಯ ಪರೀಕ್ಷೆಗೆ ಒಳಪಡಿಸಲು ಇಲಾಖೆ ಮುಂದಾಗಿದೆ. ರಿಯಾಯಿತಿ ನೀಡುವ ವೇಳೆ ಔಷಧಗಳ ಗುಣಮಟ್ಟದಲ್ಲಿ ಯಾವುದೇ ರಾಜಿ ಮಾಡಿಕೊಳ್ಳಲಾಗುತ್ತಿದೆಯೇ ಎಂಬುದನ್ನು ಪರಿಶೀಲಿಸುವುದು ಇದರ ಉದ್ದೇಶವಾಗಿದೆ.

ಔಷಧಗಳ ಗುಣಮಟ್ಟದ ಜತೆಗೆ ಪ್ಯಾಕಿಂಗ್, ಲೇಬಲಿಂಗ್, ಬ್ಯಾಚ್ ಸಂಖ್ಯೆ, ತಯಾರಿಕೆ ಮತ್ತು ಅವಧಿ ಮುಕ್ತಾಯ ದಿನಾಂಕ ಹಾಗೂ ಸಂಗ್ರಹಣಾ ವಿಧಾನವನ್ನು ಅಧಿಕಾರಿಗಳು ಪರಿಶೀಲಿಸಲಿದ್ದಾರೆ. ವಿಶೇಷವಾಗಿ ಆನ್‌ಲೈನ್ ಸಂಸ್ಥೆಗಳು ಔಷಧಗಳನ್ನು ನಿಗದಿತ ತಾಪಮಾನ ಸೇರಿದಂತೆ ಅಗತ್ಯ ಪರಿಸ್ಥಿತಿಯಲ್ಲಿ ಸಂಗ್ರಹಿಸುತ್ತಿವೆಯೇ ಎಂಬುದರ ಮೇಲೂ ನಿಗಾ ಇರಲಿದೆ.

ಇದರೊಂದಿಗೆ ಔಷಧ ಖರೀದಿ–ಮಾರಾಟದ ದಾಖಲೆಗಳು, ಪರವಾನಗಿ, ದಾಸ್ತಾನು ಮತ್ತು ಮಾರಾಟ ಪ್ರಕ್ರಿಯೆ ನಿಯಮಾನುಸಾರ ನಡೆಯುತ್ತಿದೆಯೇ ಎಂಬುದನ್ನೂ ಪರಿಶೀಲಿಸಲಾಗುತ್ತದೆ. ಗುಣಮಟ್ಟದಲ್ಲಿ ಲೋಪ, ತಪ್ಪಾದ ಲೇಬಲಿಂಗ್, ಅಸಮರ್ಪಕ ಸಂಗ್ರಹಣೆ ಅಥವಾ ಪರವಾನಗಿ ನಿಯಮಗಳ ಉಲ್ಲಂಘನೆ ಕಂಡುಬಂದರೆ ಸಂಬಂಧಪಟ್ಟವರ ವಿರುದ್ಧ ಔಷಧ ನಿಯಂತ್ರಣ ಕಾನೂನುಗಳಡಿ ಕ್ರಮ ಕೈಗೊಳ್ಳಲು ಇಲಾಖೆ ಮುಂದಾಗಲಿದೆ.

ಆದರೆ, ರಿಯಾಯಿತಿ ದರದಲ್ಲಿ ಔಷಧ ಮಾರಾಟವಾಗುತ್ತಿರುವುದೇ ಗುಣಮಟ್ಟ ಕಳಪೆಯಾಗಿರುವುದಕ್ಕೆ ಸಾಕ್ಷಿಯಲ್ಲ. ಕಡಿಮೆ ದರದಲ್ಲಿ ದೊರೆಯುವ ಔಷಧಗಳೂ ನಿಗದಿತ ಗುಣಮಟ್ಟ ಹಾಗೂ ಸುರಕ್ಷತಾ ಮಾನದಂಡಗಳನ್ನು ಪೂರೈಸುತ್ತಿವೆಯೇ ಎಂಬುದನ್ನು ಖಚಿತಪಡಿಸಿಕೊಳ್ಳುವುದು ಪರಿಶೀಲನೆಯ ಪ್ರಮುಖ ಉದ್ದೇಶವಾಗಿದೆ.

ತ್ವರಿತ ವಿತರಣೆಯ ಹೆಸರಿನಲ್ಲಿ ಔಷಧಗಳ ಸುರಕ್ಷತೆ ಮತ್ತು ಗುಣಮಟ್ಟದಲ್ಲಿ ಯಾವುದೇ ರಾಜಿಗೆ ಅವಕಾಶ ನೀಡದಂತೆ ಇಲಾಖೆ ಕ್ರಮ ಕೈಗೊಳ್ಳಲಿದೆ.

## ವಿಶೇಷ ಅಧಿವೇಶನ ರಾಜಕೀಯ ಬೇಳೆ ಬೇಯಿಸಿಕೊಳ್ಳುವ ತಂತ್ರ: ವಿಜಯೇಂದ್ರ

● ವಿಕ್ರಮ ವಾಹಿನಿ । ಬೆಂಗಳೂರು

ಬರಗಾಲ ಮತ್ತು ಕಸ್ತೂರಿರಂಗನ್ ವರದಿ ವಿಚಾರದಲ್ಲಿ ಪರಿಹಾರ ಕಂಡುಕೊಳ್ಳುವ ನೆಪದಲ್ಲಿ ವಿಶೇಷ ಅಧಿವೇಶನ ಕರೆದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ರಾಜಕೀಯ ಬೇಳೆ ಬೇಯಿಸಿಕೊಳ್ಳುವ ತಂತ್ರ ನಡೆಸುತ್ತಿದ್ದಾರೆ ಎಂಬ ಭಾವನೆ ಜನರಲ್ಲಿ ಮೂಡಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆರೋಪಿಸಿದರು.

ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ವಿಶೇಷ ಅಧಿವೇಶನದಲ್ಲಿ ಯಾವುದೇ ರಾಜಕಾರಣ ಮಾಡುವುದಿಲ್ಲ ಎಂದು ಮುಖ್ಯಮಂತ್ರಿ ಹೇಳುತ್ತಿದ್ದಾರೆ. ಆದರೆ, ಬಿಜೆಪಿ ನಡೆಸಿದ ಪಾದಯಾತ್ರೆಯಿಂದ ಸರ್ಕಾರ ವಿಚಲಿತಗೊಂಡು ಅಧಿವೇಶನ ಕರೆದಿದೆ ಎಂದು ಆಡಳಿತ ಪಕ್ಷದ ಶಾಸಕರೇ ಹೇಳುತ್ತಿದ್ದಾರೆ.

ಕಸ್ತೂರಿರಂಗನ್ ವರದಿ ವಿಚಾರದಲ್ಲಿ ಕಾಡಂಚಿನ ಜನರಿಗೆ ನ್ಯಾಯ ಒದಗಿಸಲು ಭೌತಿಕ ಸಮೀಕ್ಷೆ ನಡೆಸಬೇಕು. ರಾಜ್ಯದ 190ಕ್ಕೂ ಹೆಚ್ಚು ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಬೇಕು. ರೈತರ ಕೃಷಿ ಸಾಲ ಮನ್ನಾ ಮಾಡಬೇಕು ಎಂದು ಒತ್ತಾಯಿಸಿದರು.

ರಾಜ್ಯದಲ್ಲಿ ನೀರು ಮತ್ತು ವಿದ್ಯುತ್ ಸಮಸ್ಯೆ ತೀವ್ರವಾಗಿದ್ದು, ರೈತರಿಗೆ ಸಮರ್ಪಕವಾಗಿ ಮೂರು ಹಂತದ ವಿದ್ಯುತ್ ಪೂರೈಸಲು ಸರ್ಕಾರಕ್ಕೆ ಸಾಧ್ಯವಾಗುತ್ತಿಲ್ಲ. ಬರದ ಮುನ್ಸೂಚನೆ ಇದ್ದಾಗಲೇ ವಿದ್ಯುತ್ ಖರೀದಿಸಬೇಕಿತ್ತು. ಈಗ ಪ್ರತಿ ಯೂನಿಟ್‌ಗೆ ರೂ 14–15 ಪಾವತಿಸುವ ಬದಲು ಮುಂಚಿತವಾಗಿ ರೂ 10–11ಕ್ಕೆ ವಿದ್ಯುತ್ ಖರೀದಿಸಬಹುದಿತ್ತು. ರೈತರ ಬಗ್ಗೆ ನಿಜವಾದ ಕಾಳಜಿ ಇದ್ದರೆ ಸರ್ಕಾರ ತಕ್ಷಣ ವಿದ್ಯುತ್ ಖರೀದಿಸಿ ಪೂರೈಸಲಿ ಎಂದರು.

ಮಂಗಳೂರಿನಲ್ಲಿ ಕರಾವಳಿ ಅಭಿವೃದ್ಧಿಗೆ ರೂ 32 ಸಾವಿರ ಕೋಟಿ ಘೋಷಿಸಿರುವ ಮುಖ್ಯಮಂತ್ರಿ, ಅದಕ್ಕೆ ಹಣ ಎಲ್ಲಿಂದ ತರುತ್ತಾರೆ ಎಂಬುದನ್ನೂ ಸ್ಪಷ್ಟಪಡಿಸಬೇಕು. ಕೇವಲ ಘೋಷಣೆ ಹಾಗೂ ಜಾಹೀರಾತುಗಳಿಂದ ಅಭಿವೃದ್ಧಿ ಸಾಧ್ಯವಿಲ್ಲ ಎಂದು ವಿಜಯೇಂದ್ರ ಟೀಕಿಸಿದರು.

ಕೆಎಸ್‌ಆರ್‌ಟಿಸಿಗೆ ಸುಮಾರು ರೂ 6,000–6,500 ಕೋಟಿ ಬಾಕಿ ಇರುವುದರಿಂದ ನೌಕರರ ವೇತನ ಪಾವತಿಗೂ ಸಮಸ್ಯೆಯಾಗಿದೆ ಎಂದು ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರು ಸರ್ಕಾರಕ್ಕೆ ಪತ್ರ ಬರೆದಿದ್ದಾರೆ. ಇಂತಹ ಪರಿಸ್ಥಿತಿಯಲ್ಲಿ ಸಾವಿರಾರು ಕೋಟಿ ರೂಪಾಯಿ ಘೋಷಣೆಗಳಿಗೆ ಹಣದ ಮೂಲವೇನು ಎಂದು ಪ್ರಶ್ನಿಸಿದರು. ಶಿಕ್ಷಣ ಇಲಾಖೆಯಲ್ಲಿನ ಶೂ–ಸಾಕ್ಸ್ ಖರೀದಿ ವಿಚಾರ ಸೇರಿದಂತೆ ಹಲವು ಅಕ್ರಮ ಮತ್ತು ಭ್ರಷ್ಟಾಚಾರದ ಆರೋಪಗಳಿವೆ. ಈ ಎಲ್ಲ ವಿಚಾರಗಳನ್ನು ವಿಶೇಷ ಅಧಿವೇಶನದಲ್ಲಿ ಬಿಜೆಪಿ ಪ್ರಸ್ತಾಪಿಸಲಿದೆ ಎಂದು ವಿಜಯೇಂದ್ರ ತಿಳಿಸಿದರು.

# ಕಾಂಗ್ರೆಸ್ ಸರ್ಕಾರದ ಭೀಕರ ದಿವಾಳಿತನ ಜಗಜ್ಜಾಹೀರು: ಎನ್. ರವಿಕುಮಾರ್

● ವಿಕ್ರಮ ವಾಹಿನಿ । ಬೆಂಗಳೂರು

ಖಾಲಿ ಬೊಕ್ಕಸ, ವಿಪರೀತ ಸಾಲದ ಹೊರೆ ಮತ್ತು ಕೇವಲ ಪ್ರಚಾರಪ್ರಿಯತೆಯಿಂದ ರಾಜ್ಯವನ್ನು ಸಂಪೂರ್ಣ ಆರ್ಥಿಕ ಕಸಾಯಿಖಾನೆಗೆ ತಳ್ಳಿರುವ ಕಾಂಗ್ರೆಸ್ ಸರ್ಕಾರದ ನಿಜ ಬಣ್ಣ ಈಗ ಸ್ವತಃ ಹಣಕಾಸು ಇಲಾಖೆಯ ಆಂತರಿಕ ಟಿಪ್ಪಣಿಯಿಂದಲೇ ಬಯಲಾಗಿದೆ. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಜವಾಬ್ದಾರಿ ರಹಿತ ಆಡಳಿತ ವೈಫಲ್ಯ ಮತ್ತು ರಾಜಕೀಯ ಗಿಮಿಕ್‌ಗಳಿಗೆ ಹಣಕಾಸು ಇಲಾಖೆಯು "ವಾಸ್ತವಕ್ಕೆ ಬನ್ನಿ, ಹೊಸ ಯೋಜನೆಗಳನ್ನು ಕೈಬಿಡಿ" ಎಂದು ಕಪಾಳಮೋಕ್ಷ ಮಾಡಿದೆ ಎಂದು ವಿಧಾನಪರಿಷತ್ತಿನ ವಿರೋಧ ಪಕ್ಷದ ಮುಖ್ಯ ಸಚೇತಕ ಎನ್. ರವಿಕುಮಾರ್ ಹೇಳಿದ್ದಾರೆ.



ಸಿದ್ದರಾಮಯ್ಯ ಮತ್ತು ಡಿ.ಕೆ. ಶಿವಕುಮಾರ್ ಜೋಡಿಯು ಕರ್ನಾಟಕವನ್ನು ಅಭಿವೃದ್ಧಿಯ ಹಾದಿಯಿಂದ ಎಳೆದು ಆರ್ಥಿಕ ವೆಂಟಿಲೇಟರ್ ಮೇಲೆ ಮಲಗಿಸಿದೆ. ಹಣಕಾಸು ಇಲಾಖೆಯು ನೀಡಿರುವ ಆಂತರಿಕ ಎಚ್ಚರಿಕೆಯು ಕಾಂಗ್ರೆಸ್ ಸರ್ಕಾರದ ಲೂಟಿ ಮತ್ತು ದಿವಾಳಿತನಕ್ಕೆ ಸಾಕ್ಷಿಯಾಗಿದೆ. ಸಾಲ ಪಡೆಯುವ ಕ್ಷಮತೆಯೂ ಭಸ್ಮವಾಗಿದೆ. “2026–27ನೇ ಸಾಲಿನ ಆಯವ್ಯಯದ ಅಗತ್ಯತೆಗಳನ್ನು ಪೂರೈಸಲು ಕರ್ನಾಟಕವು ಈಗಾಗಲೇ ತನ್ನ ಸಂಪೂರ್ಣ ಸಾಲ ಪಡೆಯುವ ಕಾನೂನುಬದ್ಧ ಮಿತಿಯನ್ನು ಬಳಸಿಕೊಂಡಿದೆ.”

ಲೋಕೋಪಯೋಗಿ, ಜಲಸಂಪನ್ಮೂಲ, ಸಣ್ಣ ನೀರಾವರಿ ಮತ್ತು ಗ್ರಾಮೀಣಾಭಿವೃದ್ಧಿ ಇಲಾಖೆಗಳಲ್ಲೇ ರೂ 36,136 ಕೋಟಿಗೂ ಅಧಿಕ ಮೊತ್ತದ ಪಾವತಿಯಾಗದೆ ಗುತ್ತಿಗೆದಾರರು ಬೀದಿಗೆ ಬಿದ್ದಿದ್ದಾರೆ. ಯೋಜನೆ ಮತ್ತು ಅಭಿವೃದ್ಧಿ ಇಲ್ಲದೆ, ಕೇವಲ ಮತಬ್ಯಾಂಕ್‌ಗಾಗಿ ನಡೆಸಲಾಗುತ್ತಿರುವ ಗ್ಯಾರಂಟಿ ಯೋಜನೆಗಳ ವಾರ್ಷಿಕ ಖುಲು 50,000 ಕೋಟಿ ವೆಚ್ಚದಿಂದಾಗಿ ಇಡೀ ರಾಜ್ಯದ ಅಭಿವೃದ್ಧಿ ಶೂನ್ಯವಾಗಿದೆ.

ಹಣಕಾಸು ಕಾರ್ಯದರ್ಶಿಗಳ ಟಿಪ್ಪಣಿಯ ಪ್ರಕಾರ, ಹೊಸ ಯೋಜನೆಗೆ ಹಣ ಹೊಂದಿಸಬೇಕಾದರೆ ಇತರ ಇಲಾಖೆಗಳ ಅನುದಾನಕ್ಕೆ ನೇರ ಕತ್ತರಿ ಹಾಕಲೇಬೇಕು. ತಮ್ಮ ರಾಜಕೀಯ ಪ್ರಚಾರದ ರೂ 1,000 ಕೋಟಿಯ "ಭಾರತ ಜೋಡೋ ಯೂತ್ ಕ್ಲಬ್" ನಂತಹ ತಲೆಬುಡವಿಲ್ಲದ ಯೋಜನೆಗಳಿಗೆ ಹಣ ಹೊಂದಿಸಲು ಬಡವರ, ರೈತರ ಮತ್ತು ಹಿಂದಿನ ಸರ್ಕಾರದ ಜನಪರ ಯೋಜನೆಗಳನ್ನು ಬಂದ್ ಮಾಡಲು ಈ ಸರ್ಕಾರ ಸಂಚು ರೂಪಿಸಿದೆ. ಸರ್ಕಾರಕ್ಕೆ ಆಡಳಿತ ನಡೆಸುವ ನೈತಿಕ ಹಕ್ಕ ಎಂದೋ ಕಳೆದುಕೊಂಡಿದೆ. ಗ್ಯಾರಂಟಿಗಳ ಹೆಸರಿನಲ್ಲಿ ಕರ್ನಾಟಕದ ಭವಿಷ್ಯವನ್ನು ಅಡಮಾನವಿಟ್ಟು, ಖಜಾನೆ ಕಳೆದುಕೊಂಡು ಈಗ ಹಣಕಾಸು ಇಲಾಖೆಯಿಂದಲೇ 'ಬುದ್ಧಿಮಾತು' ಹೇಳಿಸಿಕೊಂಡಿರುವುದು ಈ ಸರ್ಕಾರಕ್ಕೆ ಬಿದ್ದ ದೊಡ್ಡ ಚಾಟಿಯೇಟು ಇದಾಗಿದೆ.

ಡಿ.ಕೆ. ಶಿವಕುಮಾರ್ ಅವರೇ, ನಿಮ್ಮ ಕುರ್ಚಿ ಕಸರತ್ತು ಮತ್ತು ಗಿಮಿಕ್ ರಾಜಕಾರಣಕ್ಕೆ ರಾಜ್ಯದ ಆರೂವರೆ ಕೋಟಿ ಜನರನ್ನು ಬಲಿ ಕೊಡಬೇಡಿ. ತಕ್ಷಣವೇ ರಾಜ್ಯದ ನೈಜ ಹಣಕಾಸು ಪರಿಸ್ಥಿತಿಯ ಕುರಿತು ‘ಶ್ವೇತಪತ್ರ’ ಹೊರಡಿಸಿ, ಗುತ್ತಿಗೆದಾರರ ರೂ 36,136 ಕೋಟಿ ಬಾಕಿ ಬಿಲ್ ಬಿಡುಗಡೆ ಮಾಡಿ. ಇಲ್ಲವಾದರೆ ಬಿಜೆಪಿ ರಾಜ್ಯಾದ್ಯಂತ ಬೀದಿಗಿಳಿದು ನಿಮ್ಮ ಭ್ರಷ್ಟ ಸರ್ಕಾರದ ವಿರುದ್ಧ ಉಗ್ರ ಹೋರಾಟ ನಡೆಸಲಿದೆ ಎಂದು ಎಚ್ಚರಿಕೆ ನೀಡಿದ್ದಾರೆ.

www.VIKRAMAVAHINI.com
ಕನ್ನಡ ದಿನಪತ್ರಿಕೆ
PRGI NO: KARKAN/2018/78481
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ
ವಿಕ್ರಮ ವಾಹಿನಿ

# ರಾಜ್ಯ ಸಚಿವರಲ್ಲಿ ರೀಲ್ಸ್ ಕಾಂಪಿಟೇಷನ್, ರೈತ ಬೀದಿಯಲ್ಲಿದ್ದಾನೆ: ನಿಖಿಲ್


● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯದಲ್ಲಿ ರೈತರು ಭೀಕರ ಬರಗಾಲದಿಂದ ಕಣ್ಣೀರು ಹಾಕುತ್ತಿದ್ದರೆ, ರಾಜ್ಯ ಸರ್ಕಾರದ ಸಚಿವರು ಜನಸೇವೆ ಬಿಟ್ಟು ಸಾಮಾಜಿಕ ಜಾಲತಾಣದಲ್ಲಿ ಯಾರಿಗೆ ಹೆಚ್ಚು ವ್ಯೂಸ್ ಬರುತ್ತೆ ಎಂದು ರೀಲ್ಸ್ ಕಾಂಪಿಟೇಷನ್ ನಲ್ಲಿ ತೊಡಗಿದ್ದಾರೆ ಎಂದು ನಿಖಿಲ್ ಕುಮಾರಸ್ವಾಮಿ ಅವರು ಆಕ್ರೋಶ ವ್ಯಕ್ತಪಡಿಸಿದರು.

ಪಕ್ಷದ ಕಚೇರಿ ಜೆ.ಪಿ. ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, "ಜನರ ಭಾವನೆ ಮೇಲೆ ಅಲ್ಲ, ಬದುಕಿನ ಮೇಲೆ ರಾಜಕಾರಣ ಮಾಡುತ್ತೇನೆ ಎಂದು ಮುಖ್ಯಮಂತ್ರಿಗಳು ಹೇಳಿದ್ದಾರೆ. ಬಂಡೆಗೆ ಎಂದಾದರೂ ಭಾವನೆ ಬರುತ್ತಾ? ರೈತರ ಬದುಕು ಉಳಿಸಬೇಕಾದರೆ ತಕ್ಷಣ ಎಕರೆಗೆ 25 ಸಾವಿರ ಪರಿಹಾರ ಕೊಡಿ" ಎಂದು ಆಗ್ರಹಿಸಿದರು.

ರೈತರು ಮಳೆ-ಬೆಳೆ ಇಲ್ಲದೆ, ವಿದ್ಯುತ್ ಅಭಾವದಿಂದ ಮತ್ತು ಸಾಲದ ಸುಳಿಯಲ್ಲಿ ಸಿಲುಕಿ ತೀವ್ರ ಸಂಕಷ್ಟ ಅನುಭವಿಸುತ್ತಿದ್ದರೂ ಸರ್ಕಾರ ರೈತರನ್ನು ಸಂಪೂರ್ಣವಾಗಿ ಕೈಬಿಟ್ಟಿರುವುದು ವೈಯಕ್ತಿಕವಾಗಿ ಹೆಚ್ಚು ನೋವು ತಂದಿದೆ. ಈ ಹಿನ್ನೆಲೆಯಲ್ಲಿ ಸೆ.28 ರಿಂದ ರಾಜ್ಯದ ಬರಪೀಡಿತ ತಾಲ್ಲೂಕುಗಳ ರೈತರನ್ನು ಭೇಟಿ ಮಾಡಿ, ಅವರ ನೋವನ್ನು ಆಲಿಸಿ, ನಿಷ್ಕ್ರಿಯ ಸರ್ಕಾರವನ್ನು ಎಚ್ಚರಿಸಲು ಯಾತ್ರೆಯನ್ನು ಹಮ್ಮಿಕೊಂಡಿದ್ದೇವೆ ಎಂದರು.

ಕಳೆದ ಮೂರೂವರೆ ವರ್ಷದಲ್ಲಿ 3500ಕ್ಕೂ ಹೆಚ್ಚು ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಅದರಲ್ಲಿ ಶೇ.85 ಅಂದರೆ 3,014 ರೈತರು ಸಾಲಬಾಧೆ ಮತ್ತು ಬೆಳೆ ನಷ್ಟದಿಂದಲೇ ಸಾವನ್ನಪ್ಪಿದ್ದಾರೆ. ಈ ವರ್ಷ ರೈತರು ಹಾಕಿದ ಬೆಳೆ ಸಂಪೂರ್ಣ ಹಾಳಾಗಿದೆ. ಮಲೆನಾಡಿನಲ್ಲಿಯೂ ನಿರೀಕ್ಷೆಯಂತೆ ಮಳೆ ಆಗಿಲ್ಲ. ಮಳೆಯ ನಿರೀಕ್ಷೆಯಲ್ಲಿ ರೈತರು ಎರಡು ಬಾರಿ ಬಿತ್ತನೆ ಮಾಡಿ ತಮ್ಮ ಸಂಪೂರ್ಣ ಬಂಡವಾಳ ಕಳೆದುಕೊಂಡಿದ್ದಾರೆ ಎಂದರು.




**234 ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಬೇಕು**

ಸರ್ಕಾರ ಕೇವಲ 124 ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಿದೆ. ಆದರೆ ಅವರದೇ ಪಕ್ಷದ ಶಾಸಕರು ಮತ್ತು ಹಿರಿಯ ನಾಯಕ ಎಚ್.ಕೆ. ಪಾಟೀಲ್ ಅವರೇ ತಮ್ಮ ಗದಗ ಜಿಲ್ಲೆಯನ್ನು ಘೋಷಿಸಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಆದ್ದರಿಂದ ಎಲ್ಲಾ 234 ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಬೇಕು. ರೈತರಿಗೆ ಪಂಪ್ ಸೆಟ್ ಓಡಿಸಲು ಕರೆಂಟ್ ಕೊಡುತ್ತಿಲ್ಲ. ಕನಿಷ್ಠ 8 ಗಂಟೆ ಕರೆಂಟ್ ಕೊಡಬೇಕು ಎಂದು ಆಗ್ರಹಿಸಿದರು.

**ಸಿಎಂ ರೀಲ್ಸ್ ಪ್ರಚಾರದಲ್ಲೇ ಕಾಲ ಕಳೆಯುತ್ತಿದ್ದಾರೆ**

ಮುಖ್ಯಮಂತ್ರಿಗಳ ಬರ ಅಧ್ಯಯನ ಪ್ರವಾಸ ಕೇವಲ ಫೋಟೋ-ಆಪ್ ಮತ್ತು ಪಿಆರ್ ಗೆ ಸೀಮಿತವಾಗಿದೆ. ಸಿಎಂ ಮತ್ತು ಅವರ ಆಡಳಿತ ಯಂತ್ರ ಕೇವಲ ರಿಯಲ್ ಎಸ್ಟೇಟ್ ಹಿತಾಸಕ್ತಿ ಮತ್ತು ರೀಲ್ಸ್ ಪ್ರಚಾರದಲ್ಲೇ ಕಾಲ ಕಳೆಯುತ್ತಿದೆ. ರೀಲ್ಸ್ ಮಾಡಲು ನೀಡುವ ಗಮನದಲ್ಲಿ ಶೇ.50ರಷ್ಟು ರೈತರ ಸಮಸ್ಯೆಗೆ ನೀಡಿದ್ದರೆ ರೈತ ಬೀದಿಗೆ ಬೀಳುತ್ತಿರಲಿಲ್ಲ. ಸಿಎಂ ಅವರು ಭಾವನೆ ಮೇಲೆ ರಾಜಕಾರಣ ಮಾಡಲ್ಲ, ಬದುಕಿನ ಮೇಲೆ ಮಾಡುತ್ತೇನೆ ಎನ್ನುತ್ತಾರೆ. ನೀವೇ ಎಲ್ಲರೂ ಹೆಸರು ಇಟ್ಟಿದ್ದೀರಾ ಸಿಎಂಗೆ - ಬಂಡೆಗೆ ಎಂದಾದರೂ ಭಾವನೆ ಬರುತ್ತಾ ಎಂದು ನಿಖಿಲ್ ಪ್ರಶ್ನಿಸಿದರು.

**ಘೋಷಣೆಗಳಿಂದ ರೈತರ ಬದುಕು ಬದಲಾಗುವುದಿಲ್ಲ**

ಘೋಷಣೆಗಳಿಂದ ರೈತರ ಬದುಕು ಬದಲಾಗುವುದಿಲ್ಲ. ರೈತರಿಗೆ ತಕ್ಷಣ ಎಕರೆಗೆ 25,000 ಪರಿಹಾರ ಕೊಡಿ. ಕಲಬುರಗಿಗೆ ಹೋಗಿ ವಿಶೇಷ ಘೋಷಣೆ ಮಾಡಿದ್ರು, ಎಲ್ಲಿ ಇದೆ ಅದು? ಮಂಗಳೂರಿಗೆ 34 ಸಾವಿರ ಕೋಟಿ, ಚನ್ನಪಟ್ಟಣಕ್ಕೆ 500 ಕೋಟಿ ಎಂದು ಕೇವಲ ಘೋಷಣೆ ಮಾಡುವುದು ಬೇಡ ಎಂದು ಟೀಕಿಸಿದರು.

ನಾವು ಕೇಂದ್ರ ಸಚಿವ ಕುಮಾರಸ್ವಾಮಿ ಅವರ ಜೊತೆ ಚರ್ಚೆ ಮಾಡಿದ್ದೇವೆ. ರೈತರ ಬಳಿ ಹೋಗಿ ಅವರ ಜೊತೆ ಸಂವಾದ ಮಾಡಲು ಮತ್ತು ಸರ್ಕಾರವನ್ನು ಎಚ್ಚರಿಸಲು ಇದೇ ತಿಂಗಳ 28ರಿಂದ ರೈತ ಸ್ವಾಭಿಮಾನ ಯಾತ್ರೆಯನ್ನು ಆರಂಭ ಮಾಡುತ್ತೇವೆ. ಕುಮಾರಸ್ವಾಮಿ ಅವರ ಮಾರ್ಗದರ್ಶನದಲ್ಲಿ ಈ ಯಾತ್ರೆ ನಡೆಯಲಿದ್ದು, ಪ್ರತಿ ಜಿಲ್ಲೆಗೂ ಹೋಗಿ ರೈತರನ್ನು ಒಗ್ಗೂಡಿಸುತ್ತೇವೆ. ಪ್ರತಿ ಜಿಲ್ಲೆಯಲ್ಲೂ ರೈತ ಸಂವಾದ, ಪಾದಯಾತ್ರೆ ಮತ್ತು ಬೃಹತ್ ಸಮಾವೇಶ ಮಾಡುತ್ತೇವೆ ಎಂದು ಘೋಷಿಸಿದರು.

ಎಲ್ಲದಕ್ಕೂ ಕೇಂದ್ರದ ಕಡೆ ಬೊಟ್ಟು ಮಾಡುತ್ತಾರೆ. ಕುಮಾರಸ್ವಾಮಿ ಅವರು ಎರಡು ಬಾರಿ ಸಿಎಂ ಆಗಿದ್ದಾಗ 25 ಸಾವಿರ ಕೋಟಿ ಸಾಲ ಮನ್ನಾ ಮಾಡಿದ್ದಾರೆ. ಕಾಂಗ್ರೆಸ್ ಜೊತೆ ಸಮ್ಮಿಶ್ರ ಸರ್ಕಾರ ಇದ್ದಾಗಲೂ ಕೇಂದ್ರದ ಬಳಿ ಹೋಗಿ ಅಂಗಲಾಚಿದ್ರಾ? ಸರ್ಕಾರದ ಖಜಾನೆಯಲ್ಲಿ ದುಡ್ಡಿಲ್ಲ ಅಂದರೆ, ದಿವಾಳಿಯಾಗಿದೆ ಎಂದು ಬಹಿರಂಗವಾಗಿ ಜನರ ಮುಂದೆ ಒಪ್ಪಿಕೊಳ್ಳಿ ಎಂದು ಸವಾಲು ಹಾಕಿದರು.

ಈ ಸಂದರ್ಭದಲ್ಲಿ ಕೋರ್ ಕಮಿಟಿ ಅಧ್ಯಕ್ಷರಾದ ಜಿ.ಕೆ. ಕೃಷ್ಣಾರೆಡ್ಡಿ, ಶಾಸಕರಾದ ಎ. ಮಂಜು, ಜಿ.ಕೆ. ವೆಂಕಟಶಿವಾರೆಡ್ಡಿ, ರಾಜುಗೌಡ ಪಾಟೀಲ್, ಕರೆಮ್ಮ ನಾಯಕ್, ಶಾರದಾ ಪೂರ್ಯಾನಾಯಕ್, ವಿಧಾನಪರಿಷತ್ ಸದಸ್ಯರಾದ ಎಸ್.ಎಲ್. ಭೋಜೇಗೌಡ, ಶರವಣ್, ಟಿ.ಎನ್. ಜವರಾಯಿಗೌಡ ಅವರು ಉಪಸ್ಥಿತರಿದ್ದರು.

# ಬೆಂಗಳೂರಿನ ಗಾಯತ್ರಿ ಭವನದಲ್ಲಿ ಜಗದ್ಗುರುಗಳ ದಿವ್ಯ ದರ್ಶನ ಆಶೀರ್ವಚನ ಸಂಪನ್ನ




● ವಿಕ್ರಮ ವಾಹಿನಿ । ಬೆಂಗಳೂರು

ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾದ ಕೇಂದ್ರ ಕಚೇರಿ ಗಾಯತ್ರಿ ಭವನದಲ್ಲಿ ಸೋಮವಾರ ಸಂಜೆ ಆಯೋಜಿಸಲಾಗಿದ್ದ ವಿಶೇಷ ಗುರು ದರ್ಶನ ಕಾರ್ಯಕ್ರಮವು ಅಪಾರ ಭಕ್ತಿಭಾವದೊಂದಿಗೆ ಸಂಪನ್ನಗೊಂಡಿತು.

ಶ್ರೀ ಆದಿ ಶಂಕರಾಚಾರ್ಯ ಶಾರದಾ ಲಕ್ಷ್ಮೀ ನರಸಿಂಹ ಪೀಠದ ಪೀಠಾಧೀಶ್ವರರಾದ ಪರಮಪೂಜ್ಯ ಶ್ರೀಮದ್ ಜಗದ್ಗುರು ಶಂಕರಾಚಾರ್ಯ ಶ್ರೀ ಶ್ರೀ ಸ್ವಯಂಪ್ರಕಾಶ ಸಚ್ಚಿದಾನಂದ ಸರಸ್ವತಿ ಮಹಾಸ್ವಾಮಿಗಳು ಕಾರ್ಯಕ್ರಮಕ್ಕೆ ಆಗಮಿಸಿ ಭಕ್ತರಿಗೆ ದರ್ಶನ ನೀಡಿದರು.

ಕಾರ್ಯಕ್ರಮದ ಅಂಗವಾಗಿ ಮಹಾಸ್ವಾಮಿಗಳಿಂದ ಅನುಗ್ರಹ ಭಾಷಣ ಹಾಗೂ ಭಕ್ತರಿಗೆ ಮಂತ್ರಾಕ್ಷತೆ ಪ್ರಸಾದ ವಿತರಣೆ ನಡೆಯಿತು. ಸಮಾಜದ ಅಪಾರ ಬಾಂಧವರು ಕಾರ್ಯಕ್ರಮದಲ್ಲಿ ಪಾಲ್ಗೊಂಡು ಗುರುಗಳ ಆಶೀರ್ವಾದ ಪಡೆದರು. ಮಹಾಸಭಾದ ಅಧ್ಯಕ್ಷರಾದ ಎಸ್. ರಘುನಾಥ್ ಹಾಗೂ ಪದಾಧಿಕಾರಿಗಳು ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ಆಯೋಜಿಸಿದ್ದರು.

# ಡೇಟಾ ಬೇಡದವರಿಗೆ ಹೆಚ್ಚು ವಾಯ್ಸ್-ಎಸ್ಎಂಎಸ್ ಪ್ಲಾನ್



● ವಿಕ್ರಮ ವಾಹಿನಿ । ನವದೆಹಲಿ

ಡೇಟಾ ಬಳಸದ, ಕೇವಲ ಕರೆ ಮತ್ತು ಎಸ್ಎಂಎಸ್ ಸೇವೆ ಬಯಸುವ ಗ್ರಾಹಕರಿಗೆ ಹೆಚ್ಚಿನ ಆಯ್ಕೆಗಳನ್ನು ಒದಗಿಸುವಂತೆ ಟೆಲಿಕಾಂ ಕಂಪನಿಗಳಿಗೆ ಭಾರತೀಯ ಟೆಲಿಕಾಂ ನಿಯಂತ್ರಣ ಪ್ರಾಧಿಕಾರ (ಟ್ರಾಯ್) ಸೂಚಿಸಿದೆ.

ಗ್ರಾಹಕ ಸಂರಕ್ಷಣಾ (13ನೇ ತಿದ್ದುಪಡಿ) ನಿಯಮಾವಳಿ-2026ರ ಅಡಿ, 30 ದಿನಗಳು ಅಥವಾ ಅದಕ್ಕಿಂತ ಕಡಿಮೆ ಅವಧಿಯ ಡೇಟಾ ಸಹಿತ ಪ್ಲಾನ್‌ಗಳಿಗೆ ಪರ್ಯಾಯವಾಗಿ ಕೇವಲ ವಾಯ್ಸ್ ಮತ್ತು ಎಸ್ಎಂಎಸ್ ಸೌಲಭ್ಯ ಹೊಂದಿರುವ ವಿಶೇಷ ಟ್ಯಾರಿಫ್ ವೋಚರ್‌ಗಳನ್ನು ನೀಡಬೇಕು. ಇವು ಸಾಮಾನ್ಯ ಡೇಟಾ ಪ್ಲಾನ್‌ಗಳಿಗಿಂತ ಕಡಿಮೆ ದರದಲ್ಲಿರಬೇಕು ಎಂದು ಸೂಚಿಸಲಾಗಿದೆ.

ಇದರೊಂದಿಗೆ ಗ್ರಾಹಕರು ಪ್ರತಿ ತಿಂಗಳು ಒಂದೇ ದಿನ ರೀಚಾರ್ಜ್ ಮಾಡಿಕೊಳ್ಳುವ ಅವಕಾಶವನ್ನೂ ಕಂಪನಿಗಳು ಕಲ್ಪಿಸಬೇಕು. ಆಯಾ ತಿಂಗಳಲ್ಲಿ ನಿಗದಿತ ದಿನಾಂಕ ಇಲ್ಲದಿದ್ದರೆ, ಆ ತಿಂಗಳ ಕೊನೆಯ ದಿನವನ್ನು ರೀಚಾರ್ಜ್ ದಿನವೆಂದು ಪರಿಗಣಿಸಬೇಕು.

ಡೇಟಾ ಅಗತ್ಯವಿಲ್ಲದ ಗ್ರಾಹಕರು ತಮಗೆ ಬೇಡದ ಡೇಟಾ ಸೇವೆಗೆ ಹಣ ಪಾವತಿಸುವುದನ್ನು ತಪ್ಪಿಸಲು ಹಾಗೂ ಕಡಿಮೆ ಆದಾಯದ ಗ್ರಾಹಕರಿಗೆ ಅನುಕೂಲವಾಗುವಂತೆ ಈ ನಿಯಮ ಜಾರಿಗೆ ತರಲಾಗಿದೆ ಎಂದು ಟ್ರಾಯ್ ತಿಳಿಸಿದೆ. ಪ್ರಸ್ತುತ ಮಾರುಕಟ್ಟೆಯಲ್ಲಿ ವಾಯ್ಸ್-ಎಸ್ಎಂಎಸ್ ಮಾತ್ರ ಒಳಗೊಂಡ ಅಲ್ಪಾವಧಿಯ ಪ್ಲಾನ್‌ಗಳು ಸೀಮಿತವಾಗಿರುವ ಹಿನ್ನೆಲೆಯಲ್ಲಿ ಈ ಕ್ರಮ ಕೈಗೊಳ್ಳಲಾಗಿದೆ. ಈ ತಿದ್ದುಪಡಿಗೂ ಮುನ್ನ ಟ್ರಾಯ್ ಏಪ್ರಿಲ್ 7ರಂದು ಕರಡು ಪ್ರಸ್ತಾವವನ್ನು ಸಾರ್ವಜನಿಕ ಚರ್ಚೆಗೆ ಬಿಡುಗಡೆ ಮಾಡಿತ್ತು. ವಿವಿಧ ವಲಯಗಳಿಂದ 1,132 ಪ್ರತಿಕ್ರಿಯೆಗಳು ಬಂದಿದ್ದು, ಜೂನ್ 15ರಂದು ನಡೆದ ಮುಕ್ತ ಚರ್ಚೆಯ ಬಳಿಕ ನಿಯಮಾವಳಿಯನ್ನು ಅಂತಿಮಗೊಳಿಸಲಾಗಿದೆ. ಕರೆ ಸೇವೆಯೊಂದಿಗೆ ಡೇಟಾ ಪ್ಲಾನ್‌ಗಳನ್ನು ಕಡ್ಡಾಯವಾಗಿ ಜೋಡಿಸುವ ಕುರಿತು ಗ್ರಾಹಕರಿಂದ ದೂರುಗಳೂ ದಾಖಲಾಗಿದ್ದವು.

# 'ಯಂತ್ರಗಳಿಂದ ತುಪ್ಪದ ಸಮಗ್ರ ಶಕ್ತಿಯನ್ನು ಅರಿಯಲು ಸಾಧ್ಯವಿಲ್ಲ'

2ನೇ ಪುಟದಿಂದ

ಬೇರೆ ಬೇರೆ ಪ್ರಾಣಿಗಳ ಹಾಲಿನಿಂದಲೂ ತುಪ್ಪವನ್ನು ಮಾಡಬಹುದಾದರೂ, ದೇಶಿ ಗೋವಿನ ತುಪ್ಪಕ್ಕೆ ಯಾವುದೂ ಸಾಟಿಯಲ್ಲ. ಸುಶ್ರುತರು ಗೋವು,ಆನೆ, ಕುರಿ ಸೇರಿದಂತೆ ಅನೇಕ ತುಪ್ಪಗಳನ್ನು ವಿಶ್ಲೇಷಿಸಿದ್ದು, ಎಲ್ಲವುಗಳಲ್ಲಿಯೂ ಗೋವಿನ ತುಪ್ಪ ಸರ್ವಶ್ರೇಷ್ಠ ಎಂದು ಹೇಳಿದ್ದಾರೆ. ಜಗತ್ತಿನಲ್ಲಿ ಕಣ್ಣಿಗೆ ಒಳ್ಳೆಯದು ಎಂದು ಹೇಳಲಾದ ಸಮಸ್ತ ವಸ್ತುಗಳಲ್ಲಿ ಗೋವಿನ ತುಪ್ಪವೇ ಅತ್ಯಂತ ಶ್ರೇಷ್ಠ ಎಂಬುದು ಆಯುರ್ವೇದದ ಅಭಿಮತ ಎಂದರು.

ನಾವು ಬೇರೆಯವರ ಮನೆಯಲ್ಲಿ ಊಟವನ್ನು ಮಾಡಬಾರದು. ಏಕೆಂದರೆ ಅನ್ನವನ್ನು ಅವರು ಸಂಪಾದಿಸಿರುವ ರೀತಿ, ಅದನ್ನು ತಯಾರಿಸಿರುವ ಕ್ರಮ ನಮಗೆ ತಿಳಿದಿರುವುದಿಲ್ಲ. ಆದರೆ ಪರಾನ್ನವನ್ನು ಊಟ ಮಾಡುವ ಸಂದರ್ಭ ಬಂದಾಗ, ಊಟಕ್ಕೆ ಅಭಿಗಾರವಾಗಿ ತುಪ್ಪವನ್ನು ಹಾಕಿಕೊಂಡು ಊಟಮಾಡಿದರೆ, ಯಾವುದೇ ದೋಷ ಹಾಗೂ ಅಶುಚಿಗಳಿದ್ದರೂ ಅದನ್ನು ನಿವಾರಿಸುತ್ತದೆ. ಅದು ತುಪ್ಪದ ಶಕ್ತಿ ಎಂಬ ಶ್ರೀರಂಗ ಮಹಾಗುರುಗಳ ಮಾತುಗಳನ್ನು ಶ್ರೀಗಳು ಉಲ್ಲೇಖಿಸಿದರು.

ಕುಮಟಾ ಮಾಜಿ ಶಾಸಕಿ ಶಾರದಾ ಶೆಟ್ಟಿ ಶ್ರೀಗಳನ್ನು ಭೇಟಿಯಾಗಿ ಆಶೀರ್ವಾದ ಪಡೆದರು. ಕೃಷ್ಣಯಜುರ್ವೇದ ಘನಪಾರಾಯಣದಲ್ಲಿ ಭಾಗವಹಿಸಿದ ಶ್ರೀಗಳು, ಪಾರಾಯಣದಲ್ಲಿ ನಿರತರಾದ ವೇದ ವಿದ್ವಾಂಸರನ್ನು ಆಶೀರ್ವದಿಸಿದರು. ಯಕ್ಷಗಾನ ಕಲಾವಿದ ತೋಟಿಮನೆ ಗಣಪತಿ ಹೆಗಡೆ, ದಿನಪ್ರಧಾನರಾಗಿ ಮಂಜುನಾಥ ಹೆಗಡೆ ಮಗೇಗಾರು ದಂಪತಿಗಳು ಉಪಸ್ಥಿತರಿದ್ದರು.

# ರಾಜ್ಯಾದ್ಯಂತ ಲೋಕಾಯುಕ್ತ ದಾಳಿ

● ವಿಕ್ರಮ ವಾಹಿನಿ । ಬೆಂಗಳೂರು

ಭ್ರಷ್ಟಾಚಾರ ಆರೋಪದ ಹಿನ್ನೆಲೆಯಲ್ಲಿ ಲೋಕಾಯುಕ್ತ ಪೊಲೀಸರು ಬೆಂಗಳೂರು ಸೇರಿದಂತೆ 8 ಜಿಲ್ಲೆಗಳಲ್ಲಿ 8 ಸರ್ಕಾರಿ ಅಧಿಕಾರಿಗಳಿಗೆ ಸೇರಿದ 32ಕ್ಕೂ ಹೆಚ್ಚು ಸ್ಥಳಗಳ ಮೇಲೆ ಮಂಗಳವಾರ ಏಕಕಾಲಕ್ಕೆ ದಾಳಿ ನಡೆಸಿದರು.

ಶೋಧ ವೇಳೆ ಮನೆ, ಕಚೇರಿ ಹಾಗೂ ಸಂಬಂಧಿಕರ ನಿವಾಸಗಳಿಂದ ಕೃಷಿ ಜಮೀನು, ಮನೆ, ವಾಣಿಜ್ಯ ಮಳಿಗೆ, ಗಾರ್ಮೆಂಟ್ ಕಾರ್ಖಾನೆ, ಚಿನ್ನಾಭರಣ, ನಗದು ಮತ್ತು ವಾಹನ ಸೇರಿದಂತೆ ಕೋಟ್ಯಂತರ ರೂ. ಮೌಲ್ಯದ ಆಸ್ತಿ ಪತ್ತೆಯಾಗಿದೆ.

ಬೀದರ್ ಜಿಲ್ಲಾ ನೋಂದಣಾಧಿಕಾರಿ ಶ್ರೀದೇವಿ ಅವರ ರೂ 6.80 ಕೋಟಿ, ಮಂಡ್ಯದ ನಿವೃತ್ತ ಸಹಾಯಕ ಎಂಜಿನಿಯರ್ ಎಚ್.ಎಂ. ರಂಗನಾಥ್ ಅವರ ರೂ 3.84 ಕೋಟಿ, ಹಾಸ್ಟೆಲ್ ಸೂಪರಿಂಟೆಂಡೆಂಟ್ ಶಿವರಾಜು ಅವರ ರೂ 2.71 ಕೋಟಿ ಹಾಗೂ ಚಿಕ್ಕಬಳ್ಳಾಪುರದ ಎಫ್‌ಡಿಎ ದರ್ಶನ್ ಗೌಡ ಅವರ 16 ಮನೆಗಳು ಸೇರಿದಂತೆ ರೂ 1.86 ಕೋಟಿ ಮೌಲ್ಯದ ಆಸ್ತಿ ಪತ್ತೆಯಾಗಿದೆ. ಇತರ ಅಧಿಕಾರಿಗಳ ಆಸ್ತಿ ದಾಖಲೆ, ಬ್ಯಾಂಕ್ ಖಾತೆ ಹಾಗೂ ನಗದು-ಚಿನ್ನಾಭರಣಗಳ ಪರಿಶೀಲನೆ ಮುಂದುವರಿದಿದೆ.

# ಮೋದಿ-ಪೇಜಾವರ ಶ್ರೀ ಭೇಟಿ; ಲಾಂಛನ ಅನಾವರಣ



● ವಿಕ್ರಮ ವಾಹಿನಿ । ನವದೆಹಲಿ

ಪೇಜಾವರ ಮಠದ ಶ್ರೀ ವಿಶ್ವಪ್ರಸನ್ನತೀರ್ಥ ಶ್ರೀಪಾದರು ಹಾಗೂ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಮಂಗಳವಾರ ಸಂಜೆ ಭೇಟಿಯಾಗಿ ಮಾತುಕತೆ ನಡೆಸಿದರು. ಈ ಸಂದರ್ಭದಲ್ಲಿ ಶ್ರೀ ವಿಶ್ವೇಶತೀರ್ಥ ಶ್ರೀಪಾದರ ಜನ್ಮಶತಮಾನೋತ್ಸವದ ಅಂಗವಾಗಿ ಹಮ್ಮಿಕೊಳ್ಳಲಾಗಿರುವ ಪಂಚವಾರ್ಷಿಕ ಯೋಜನೆಗಳ ಲಾಂಛನವನ್ನು ಪ್ರಧಾನಿ ಮೋದಿ ಅನಾವರಣಗೊಳಿಸಿದರು.

ಶ್ರೀ ವಿಶ್ವಪ್ರಸನ್ನತೀರ್ಥರು ಪ್ರಧಾನಿಯವರಿಗೆ ಯಕ್ಷಗಾನದ ರಾಜಕಿರೀಟ ತೊಡಿಸಿ, ಶಾಲು ಹೊದಿಸಿ ಗೌರವಿಸಿದರು. ಸ್ವರ್ಣಲೇಪಿತ ಕಾಲೀಯ ಕೃಷ್ಣನ ಪ್ರತಿಮೆ, ಫಲ ಹಾಗೂ ಮಂತ್ರಾಕ್ಷತೆ ನೀಡಿ ಆಶೀರ್ವದಿಸಿದರು. ಪ್ರಧಾನಿಯವರ ಜನ್ಮದಿನದ ಅಂಗವಾಗಿ ವೇದವ್ಯಾಸ ಗುರುಕುಲದಲ್ಲಿ ನೆರವೇರಿಸಿದ್ದ ನವಗ್ರಹ ಹೋಮ ಹಾಗೂ ರಾಷ್ಟ್ರಸೂಕ್ತ ಹೋಮಗಳ ಪ್ರಸಾದವನ್ನೂ ಪ್ರಧಾನಿಯವರಿಗೆ ನೀಡಿದರು.

ಶ್ರೀ ವಿಶ್ವೇಶತೀರ್ಥರು ಹಾಗೂ ಶ್ರೀ ವಿಶ್ವಪ್ರಸನ್ನತೀರ್ಥರು ಸಮಾಜಕ್ಕೆ ನೀಡುತ್ತಿರುವ ಕೊಡುಗೆಗಳು ಪ್ರೇರಣಾದಾಯಕವಾಗಿವೆ ಎಂದು ಪ್ರಧಾನಿ ಮೋದಿ ಹೇಳಿದರು. ಉಡುಪಿ-ದ್ವಾರಕೆಯ ನಡುವಿನ ಆಧ್ಯಾತ್ಮಿಕ ಹಾಗೂ ಸಾಂಸ್ಕೃತಿಕ ಸಂಬಂಧವನ್ನು ಉಲ್ಲೇಖಿಸಿದ ಅವರು, ವಿಶ್ವೇಶತೀರ್ಥರ ಜನ್ಮಶತಮಾನೋತ್ಸವದ ಯೋಜನೆಗಳಲ್ಲಿ ದ್ವಾರಕೆಯನ್ನೂ ಒಳಗೊಂಡ ವಿಶೇಷ ಯೋಜನೆ ರೂಪಿಸುವಂತೆ ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಅಖಿಲ ಭಾರತ ಮಾಧ್ವ ಮಹಾಮಂಡಲದ ಅಧ್ಯಕ್ಷ ಗೌತಮ್, ಪಿ. ರಾಮ್ ಪ್ರಸಾದ್, ಕೆ. ಪ್ರಕಾಶ್ ಶೆಟ್ಟಿ, ರವಿ ಶ್ಯಾಮ್, ಪ್ರೊ. ಶ್ರೀನಿವಾಸ ವರಖೇಡಿ, ಹರೀಶ್ ರಾಯಸ್, ಎಚ್. ವಾಸುದೇವ ಭಟ್, ಬದರಿ ನಾರಾಯಣ ಲಡ್ಡಾ, ಶ್ರೀನಿವಾಸ ಪ್ರಸಾದ್, ಡಿ.ಪಿ. ಅನಂತ ಆಚಾರ್ಯ, ಡಾ. ವಿಠೋಬಾಚಾರ್ಯ ಹಾಗೂ ಕೃಷ್ಣಮೂರ್ತಿ ಭಟ್ ಉಪಸ್ಥಿತರಿದ್ದರು.

# 7 ಜಿಲ್ಲೆಗಳ 500 ಕೆರೆ ಪುನಶ್ಚೇತನಕ್ಕೆ 150 ಕೋಟಿ ರೂ.: ಖಂಡ್ರೆ

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯದ 7 ಜಿಲ್ಲೆಗಳ 500 ಕೆರೆಗಳ ಪುನಶ್ಚೇತನಕ್ಕೆ ವಿಶ್ವಬ್ಯಾಂಕ್ ನೆರವಿನ ಯೋಜನೆಯಡಿ 150 ಕೋಟಿ ರೂ. ಸಮಗ್ರ ಯೋಜನಾ ವರದಿ ಸಿದ್ಧವಾಗಿದ್ದು, ಸಮರೋಪಾದಿಯಲ್ಲಿ ಕೆರೆ ಅಭಿವೃದ್ಧಿ ಮಾಡುವಂತೆ ಸಂಬಂಧಿತ ಸಿಇಓಗಳಿಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಸೂಚನೆ ನೀಡಿದ್ದಾರೆ.



ವಿಕಾಸಸೌಧದ ತಮ್ಮ ಕಚೇರಿಯಲ್ಲಿಂದು ಎಲ್ಲ ಜಿಲ್ಲೆಗಳ ಪಂಚಾಯತಿ ಮುಖ್ಯಕಾರ್ಯನಿರ್ವಹಣಾಧಿಕಾರಿಗಳೊಂದಿಗೆ ಬರ ಪರಿಸ್ಥಿತಿ ಹಿನ್ನೆಲೆಯಲ್ಲಿ ಗ್ರಾಮಗಳ ಕುಡಿಯುವ ನೀರಿನ ಸಮಸ್ಯೆ ಕುರಿತಂತೆ ವಿಡಿಯೋ ಕಾನ್ಫರೆನ್ಸ್ ನಡೆಸಿದ ಅವರು, ವಿಶ್ವಬ್ಯಾಂಕ್ ನೆರವಿನ ಜೊತೆಗೆ ವಿಬಿಜಿ ರಾಮ್ ಜಿ ಸಹಯೋಗದಲ್ಲಿ ಈ ಕೆರೆಗಳ ಹೂಳು ತೆಗೆಯುವುದು, ಏರಿ ದುರಸ್ತಿ, ಏರಿ ಎತ್ತರಿಸುವುದು, ಸೌಂದರ್ಯೀಕರಣ, ನಾಲೆಗಳ ದುರಸ್ತಿ ಮಾಡುವಂತೆ ನಿರ್ದೇಶನ ನೀಡಿದರು.

ಈಗ ಮಳೆ ಇಲ್ಲದ ಕಾರಣ ಕೆರೆಗಳು ಬತ್ತಿ ಹೋಗಿದ್ದು, ಕೆರೆ, ಕಾಲುವೆ ಪುನಶ್ಚೇತನಕ್ಕೆ ಸೂಕ್ತ ಸಮಯವಾಗಿದೆ. ಹಿಂಗಾರು ಮಳೆಯಾದರೆ ಈ ಕೆರೆಗಳಿಗೆ ನೀರು ಬರುತ್ತದೆ. ಮುಂದಿನ ಬೇಸಿಗೆಯಲ್ಲಿ ಎದುರಾಗಬಹುದಾದ ನೀರಿನ ಸಮಸ್ಯೆಗೆ ಪರಿಹಾರ ದೊರಕುತ್ತದೆ. ಭೂಮಿಯ ತೇವಾಂಶ ಮತ್ತು ಅಂತರ್ಜಲ ಮಟ್ಟವೂ ಹೆಚ್ಚುತ್ತದೆ. ಹೀಗಾಗಿ ತತ್ ಕ್ಷಣವೇ ಕಾರ್ಯಪ್ರವೃತ್ತರಾಗಬೇಕು ಎಂದು ತಿಳಿಸಿದರು.

ವಿಶ್ವಬ್ಯಾಂಕ್ ಯೋಜನೆಯಡಿ ಬೆಂಗಳೂರು ಗ್ರಾಮಾಂತರ -68, ಬೆಂಗಳೂರು ನಗರ -67, ಬೀದರ್-44, ಚಿಕ್ಕಬಳ್ಳಾಪುರ -90, ಕಲ್ಬುರ್ಗಿ-49, ತುಮಕೂರು -96 ಮತ್ತು ಕೋಲಾರ ಜಿಲ್ಲೆಯ-86 ಕೆರೆಗಳ ಪುನಶ್ಚೇತನಕ್ಕೆ ಯೋಜನೆ ರೂಪಿಸಲಾಗಿದೆ ಎಂದೂ ಈಶ್ವರ ಖಂಡ್ರೆ ತಿಳಿಸಿದರು.

**ಕಲುಷಿತ ನೀರು ಪೂರೈಸಿದರೆ ಕ್ರಮ:** ಎಲ್ಲ ಗ್ರಾಮಗಳಿಗೂ ಶುದ್ಧ ಕುಡಿಯುವ ನೀರು ಪೂರೈಕೆ ಆಗುತ್ತಿರುವುದನ್ನು ಸಿಇಓಗಳು ಮತ್ತು ಪಿಡಿಓಗಳು ಖಚಿತಪಡಿಸಿಕೊಳ್ಳಬೇಕು. ನಿಯಮಿತವಾಗಿ ನೀರಿನ ಪರೀಕ್ಷೆ ಮಾಡಬೇಕು. ಕಲುಷಿತ ನೀರಿನ ದೂರು ಬಂದರೆ ಕೂಡಲೇ ಜಲ ಮೂಲದಿಂದ ಹಿಡಿದು ಮನೆಯ ನಲ್ಲಿಯವರೆಗೆ ಪ್ರತಿಯೊಂದು ಹಂತದಲ್ಲೂ ಪರಿಶೀಲನೆ ನಡೆಸಿ, ತ್ಯಾಜ್ಯ ನೀರು ಸೇರದಂತೆ ಕ್ರಮವಹಿಸಬೇಕು ಎಂದು ಸೂಚಿಸಿದರು.

**ವಿಬಿಜಿ ರಾಮ್ ಜಿ ಕಾಮಗಾರಿಗೆ ವೇಗ ನೀಡಿ: 15 ದಿನದೊಳಗೆ ಕೂಲಿ ಹಣ ಪಾವತಿ ಮಾಡಿ :**

ವಿಬಿಜಿ ರಾಮ್ ಜಿ ಅಡಿ ಕೆಲಸ ಮಾಡಿದ ಕಾರ್ಮಿಕರಿಗೆ ತಿಂಗಳಾದರೂ ಕೂಲಿ ಹಣ ಪಾವತಿಸದಿದ್ದರೆ ಅವರು ಕೆಲಸಕ್ಕೆ ಬರುವುದಿಲ್ಲ, ಆಗ ಯೋಜನೆಯ ಉದ್ದೇಶವೇ ವಿಫಲವಾಗುತ್ತದೆ. 15 ದಿನಗಳ ಒಳಗಾಗಿ ಕೂಲಿ ಪಾವತಿಗೆ ಕ್ರಮ ಕೈಗೊಳ್ಳಬೇಕು. ಸಿಇಓಗಳು ಪಿಡಿಓಗಳಿಗೆ ಮತ್ತು ಖಜಾನೆ ಅಧಿಕಾರಿಗಳಿಗೆ ಈ ಬಗ್ಗೆ ಸ್ಪಷ್ಟ ನಿರ್ದೇಶನ ನೀಡಬೇಕು ಎಂದು ತಿಳಿಸಿದರು.

ಇಲಾಖೆಯ ಕಾರ್ಯದರ್ಶಿ ಸಮೀರ್ ಶುಕ್ಲ ಸೇರಿದಂತೆ ಹಿರಿಯ ಅಧಿಕಾರಿಗಳು, ಸಿಇಓಗಳು ಸಭೆಯಲ್ಲಿ ಭಾಗಿಯಾಗಿದ್ದರು.

# ದಾದಾಸಾಹೇಬ್ ಫಾಲ್ಕೆ ಪ್ರಶಸ್ತಿ ಸ್ವೀಕರಿಸಿದ ಅನಂತ್ ನಾಗ್

● ವಿಕ್ರಮ ವಾಹಿನಿ । ಏಕತಾ ನಗರ (ಕೆವಾಡಿಯಾ)

ಹಿರಿಯ ನಟ ಅನಂತ್ ನಾಗ್ ಅವರಿಗೆ ಪ್ರತಿಷ್ಠಿತ ದಾದಾಸಾಹೇಬ್ ಫಾಲ್ಕೆ ಪ್ರಶಸ್ತಿಯನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು 72ನೇ ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಪ್ರದಾನ ಮಾಡಿದರು. ಏಳು ದಶಕಗಳ ಸುದೀರ್ಘ ಕಲಾ ಪಯಣದ ಗೌರವವನ್ನು ವಿನಮ್ರತೆಯಿಂದ ಸ್ವೀಕರಿಸಿದ ಅನಂತ್ ನಾಗ್, ಈ ಪ್ರಶಸ್ತಿಯನ್ನು ತಮ್ಮ ಸಹೋದ್ಯೋಗಿಗಳು, ಪ್ರೇಕ್ಷಕರು ಹಾಗೂ ಬೆಂಬಲಿಗರಿಗೆ ಸಮರ್ಪಿಸಿದರು.

ತಮ್ಮ ಆರಂಭಿಕ ದಿನಗಳನ್ನು ಸ್ಮರಿಸಿದ ಅವರು, ಆಶ್ರಮದಲ್ಲಿ ಬೆಳೆದು ಬಳಿಕ ಮುಂಬೈಗೆ ತೆರಳಿ ರಂಗಭೂಮಿಯ ಮೂಲಕ ಅಭಿನಯ ಪಯಣ ಆರಂಭಿಸಿದ್ದಾಗಿ ಹೇಳಿದರು.

ಸಿನಿಮಾ ಪ್ರವೇಶಕ್ಕೂ ಮುನ್ನ ಸುಮಾರು 50 ನಾಟಕಗಳಲ್ಲಿ ಅಭಿನಯಿಸಿದ್ದು, ರಂಗಭೂಮಿಯೇ ತಮ್ಮ ವೃತ್ತಿಜೀವನಕ್ಕೆ ಭದ್ರ ಅಡಿಪಾಯ ಹಾಕಿತು ಎಂದರು. ಶ್ಯಾಮ್ ಬೆನೆಗಲ್ ಅವರ ಪ್ರಮುಖ ಕೃತಿಗಳಲ್ಲೂ ಕೆಲಸ ಮಾಡಿದ್ದನ್ನು ಸ್ಮರಿಸಿದರು.

ಕರ್ನಾಟಕವನ್ನು ತಮ್ಮ ಕರ್ಮಭೂಮಿಯನ್ನಾಗಿ ಸ್ವೀಕರಿಸಿ ಕನ್ನಡ ಚಿತ್ರರಂಗಕ್ಕೆ ಕಲಾ ಸೇವೆ ಸಲ್ಲಿಸುವ ನಿರ್ಧಾರವನ್ನು ಪ್ರಜ್ಞಾಪೂರ್ವಕವಾಗಿ ಕೈಗೊಂಡಿದ್ದಾಗಿ ತಿಳಿಸಿದರು. ಕಳೆದ ವರ್ಷ ರಾಷ್ಟ್ರಪತಿಯವರಿಂದ ಪದ್ಮಭೂಷಣ ಪ್ರಶಸ್ತಿ ಸ್ವೀಕರಿಸಿದ್ದನ್ನು ಸ್ಮರಿಸಿದ ಅವರು, ಇದೀಗ ದಾದಾಸಾಹೇಬ್ ಫಾಲ್ಕೆ ಪ್ರಶಸ್ತಿ ದೊರೆತಿರುವುದು ಅಪಾರ ಕೃತಜ್ಞತೆ ಮೂಡಿಸಿದೆ ಎಂದರು.

ಏಳು ದಶಕಗಳ ಪಯಣದಲ್ಲಿ ತಮ್ಮೊಂದಿಗೆ ಕೆಲಸ ಮಾಡಿದ ಅಸಂಖ್ಯಾತ ಸಹೋದ್ಯೋಗಿಗಳು ಹಾಗೂ ತಮ್ಮ ಅಭಿನಯವನ್ನು ಪ್ರೀತಿಯಿಂದ ಸ್ವೀಕರಿಸಿದ ಕೋಟ್ಯಂತರ ಪ್ರೇಕ್ಷಕರಿಗೂ ಈ ಗೌರವ ಸಲ್ಲುತ್ತದೆ ಎಂದು ಹೇಳಿದರು. "ಭಾರತ ನನ್ನ ಜನ್ಮಭೂಮಿ, ಕರ್ನಾಟಕ ನನ್ನ ಕರ್ಮಭೂಮಿ ಮತ್ತು ಇದು ಧರ್ಮಭೂಮಿಯೂ ಹೌದು" ಎಂದು ಹೇಳುವ ಮೂಲಕ ಭಾಷಣ ಮುಕ್ತಾಯಗೊಳಿಸಿದರು.


# 'ವಂದೇ ಮಾತರಂ' ಅರ್ಜಿ: ಅ.15ಕ್ಕೆ ವಿಚಾರಣೆ

● ವಿಕ್ರಮ ವಾಹಿನಿ । ಬೆಂಗಳೂರು

*ರಾಷ್ಟ್ರಪತಿ, ಉಪ ರಾಷ್ಟ್ರಪತಿ, ಪ್ರಧಾನಮಂತ್ರಿ ಮತ್ತು ರಾಜ್ಯಪಾಲರು ಭಾಗವಹಿಸುವ ಕಾರ್ಯಕ್ರಮ ಹೊರತುಪಡಿಸಿ ರಾಜ್ಯ ಸರ್ಕಾರದ ಕಾರ್ಯಕ್ರಮಗಳಲ್ಲಿ ವಂದೇ ಮಾತರಂ ಗೀತೆಯ ಎರಡು ಚರಣಗಳನ್ನು ಮಾತ್ರ ಹಾಡುವುದನ್ನು ಕಡ್ಡಾಯಗೊಳಿಸಿ ಸೆಪ್ಟೆಂಬರ್ 8ರಂದು ಸರ್ಕಾರ ಹೊರಡಿಸಿರುವ ಆದೇಶ ರದ್ದು ಕೋರಿ ಸಲ್ಲಿಕೆಯಾಗಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿಯ ವಿಚಾರಣೆಯನ್ನು ಕರ್ನಾಟಕ ಹೈಕೋರ್ಟ್ ಮುಂದೂಡಿದೆ.*

*ವಕೀಲ ಗಿರೀಶ್ ಭಾರದ್ವಾಜ್ ಸಲ್ಲಿಸಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿ ವಿಚಾರಣೆಯನ್ನು, ನ್ಯಾಯಮೂರ್ತಿಗಳಾದ ಅನು ಶಿವರಾಮನ್ ಮತ್ತು ಟಿ ಪಿ ವಿವೇಕಾನಂದ ಅವರ ವಿಭಾಗೀಯ ಪೀಠ ನಡೆಸಿತು.*

*ವಂದೇ ಮಾತರಂ ಸಂಪೂರ್ಣ ಗೀತೆ ಹಾಡುವ ಸಂಬಂಧಿತ ಕಾಯಿದೆ ಹಾಗೂ ಆದೇಶವನ್ನು ಸುಪ್ರೀಂ ಕೋರ್ಟ್‌ನಲ್ಲಿ ಪ್ರಶ್ನಿಸಲಾಗಿದೆ. ಈ ಅರ್ಜಿಯ ವಿಚಾರಣೆಯನ್ನು ಎರಡು ವಾರ ಮುಂದೂಡಿ, ಸರ್ವೋಚ್ಚ ನ್ಯಾಯಾಲಯ ಆದೇಶಿಸಿದೆ. ಸುಪ್ರೀಂ ಕೋರ್ಟ್ ಆದೇಶಕ್ಕಾಗಿ ಕಾದು, ವಿಚಾರಣೆಯನ್ನು ಹೈಕೋರ್ಟ್ ಅಕ್ಟೋಬರ್ 15ಕ್ಕೆ ಮುಂದೂಡಿತು.*




*ಇದಕ್ಕೂ ಮುನ್ನ, ಅರ್ಜಿದಾರರ ಪರ ವಕೀಲ ಅನಗದ್ ಕಾಮತ್ ಅವರು "ಎರಡು ಚರಣ ಮಾತ್ರ ಹಾಡಬೇಕು ಎಂದು ರಾಜ್ಯ ಸಂಪುಟದ ನಿರ್ಧಾರ ಆಧರಿಸಿ ಸರ್ಕಾರ ಆದೇಶ ಮಾಡಿದೆ. ಆದರೆ, ಸಂಪುಟದ ನಿರ್ಧಾರಕ್ಕೆ ಯಾವುದೇ ಪ್ರಸ್ತಾವವು ಸಂಬಂಧಿತ ಇಲಾಖೆಯಿಂದ ಸಲ್ಲಿಕೆಯಾಗಿರಲಿಲ್ಲ. ಕಾನೂನು ಸಲಹೆ ಪಡೆಯದೇ 32ಕ್ಕೂ ಹೆಚ್ಚು ಸಚಿವರು ಸಂಪುಟದಲ್ಲಿ ನಿರ್ಧಾರ ಮಾಡಿದ್ದಾರೆ. ಆದರೆ, ಇದಕ್ಕೆ ಅವಕಾಶವಿಲ್ಲ. ಹೀಗಾಗಿ, ಸರ್ಕಾರದ ಆದೇಶಕ್ಕೆ ತಡೆ ನೀಡಬೇಕು" ಎಂದರು.*

*"ಆದೇಶದಲ್ಲಿ ವಂದೇ ಮಾತರಂ ಗೀತೆಯನ್ನು ಇತರ ಸಂದರ್ಭಗಳಲ್ಲಿ ಹಾಡಬಹುದು ಎಂದು ಉಲ್ಲೇಖಿಸಲಾಗಿದೆ. ಇದರರ್ಥ ಗೀತೆಯನ್ನು ಕಡ್ಡಾಯವಾಗಿ ಹಾಡಲೇಬೇಕು ಅಥವಾ ಮೌನವಾಗಿ ನಿಲ್ಲಬೇಕು ಎಂಬುದೇ ಹೊರತು, ಎಷ್ಟು ಚರಣಗಳನ್ನು ಹಾಡಬೇಕು ಎಂದಲ್ಲ. ಅಲ್ಲದೆ, ಅರ್ಜಿದಾರರು ಸೆಪ್ಟೆಂಬರ್ 14ರ ಸರ್ಕಾರಿ ರಜಾದಿನದಂದು ಮನವಿ ಸಲ್ಲಿಸಿ, ತಕ್ಷಣವೇ ಮರುದಿನ (ಸೆಪ್ಟೆಂಬರ್ 15) ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದಾರೆ. ಸರ್ಕಾರಕ್ಕೆ ಪರಿಶೀಲಿಸಲು ಸಮಯವನ್ನೇ ನೀಡದೆ ಅವಸರದಲ್ಲಿ ಅರ್ಜಿ ಸಲ್ಲಿಸಿದ್ದಾರೆ" ಎಂದು ವಾದಿಸಿದರು.*

*ಕೇಂದ್ರ ಸರ್ಕಾರ ಪ್ರತಿನಿಧಿಸಿದ್ದ ಹೆಚ್ಚುವರಿ ಸಾಲಿಸಿಟರ್ ಜನರಲ್ ಕೆ ಅರವಿಂದ್ ಕಾಮತ್ ಅವರು "ರಾಷ್ಟ್ರೀಯ ಗೌರವಕ್ಕೆ ಅಪಮಾನ ತಡೆ (ತಿದ್ದುಪಡಿ) ಕಾಯಿದೆಯ ಸೆಕ್ಷನ್ 3ಕ್ಕೆ ತಿದ್ದುಪಡಿ ತರಲಾಗಿದ್ದು, ರಾಷ್ಟ್ರಗೀತೆಯ ಜೊತೆಗೆ ವಂದೇ ಮಾತರಂ ಗೀತೆಯನ್ನು ಸೇರಿಸಲಾಗಿದೆ. ರಾಷ್ಟ್ರೀಯ ಗೀತೆಯ ಗಾಯನಕ್ಕೆ ಉದ್ದೇಶಪೂರ್ವಕವಾಗಿ ಅಡ್ಡಿಪಡಿಸುವುದು ಅಥವಾ ಗಾಯನ ನಡೆಯುವ ಸಭೆಯಲ್ಲಿ ಗೊಂದಲ ಉಂಟುಮಾಡುವುದು ಅಪರಾಧವಾಗಿದೆ. ರಾಷ್ಟ್ರೀಯ ಗೀತೆಯ ಅಧಿಕೃತ ಆವೃತ್ತಿ ಯಾವುದು ಎಂಬುದನ್ನು ನಿರ್ಧರಿಸುವ ಸಂಪೂರ್ಣ ಅಧಿಕಾರ ಕೇಂದ್ರ ಸರ್ಕಾರಕ್ಕಿದೆ. ಕೇಂದ್ರ ಸರ್ಕಾರದ ಆಜ್ಞೆಯ ಪ್ರಕಾರ 'ವಂದೇ ಮಾತರಂ' ಗೀತೆಯು ಸಂಪೂರ್ಣ ಆರು ಚರಣಗಳನ್ನು ಹಾಡಬೇಕಾಗಿದೆ" ಎಂದರು.*

*"ಸಂವಿಧಾನದ 256 ಮತ್ತು 257(1) ರ ಅಡಿಯಲ್ಲಿ ಕೇಂದ್ರ ಸರ್ಕಾರವು ನೀಡುವ ನಿರ್ದೇಶನ ಹಾಗೂ ಕಾಯಿದೆಗಳಿಗೆ ಬದ್ಧವಾಗಿ ನಡೆದುಕೊಳ್ಳುವುದು ರಾಜ್ಯ ಸರ್ಕಾರಗಳ ಜವಾಬ್ದಾರಿಯಾಗಿದೆ. ಕೇಂದ್ರದ ಗೃಹ ಸಚಿವಾಲಯ ಹೊರಡಿಸಿರುವ ಸುತ್ತೋಲೆಯು ಕೇವಲ 'ಮಾಹಿತಿ'ಗಾಗಿ ಅಲ್ಲ, ಬದಲಾಗಿ 'ಕಡ್ಡಾಯ ಪಾಲನೆ'ಗಾಗಿ ನೀಡಲಾಗಿದೆ. ಕೇಂದ್ರದ ಆದೇಶದ ಪ್ರಕಾರ, ಗೀತೆಯನ್ನು ಕಡ್ಡಾಯವಾಗಿ ಹಾಡಬೇಕಾದ 5 ಪ್ರಮುಖ ಸಂದರ್ಭಗಳನ್ನು ಗುರುತಿಸಲಾಗಿದೆ. ಸಾಮೂಹಿಕ ಗಾಯನ ಸೇರಿದಂತೆ ಇತರ ಸಂದರ್ಭಗಳಲ್ಲಿ ಹಾಡುವುದಾದರೆ, ಅದು ಕೇಂದ್ರ ನಿಗದಿಪಡಿಸಿದ ಪೂರ್ಣ 6 ಚರಣಗಳ ಅಧಿಕೃತ ಆವೃತ್ತಿಯಲ್ಲೇ ಇರಬೇಕು" ಎಂದರು. ಎಲ್ಲರ ವಾದ ಆಲಿಸಿದ ಪೀಠವು ವಿಚಾರಣೆಯನ್ನು ಅಕ್ಟೋಬರ್ 15ಕ್ಕೆ ಮುಂದೂಡಿತು.*

Vikrama Vahini Kannada Daily, #204, Forest Layout, Jnanabharathi, Bangalore-560095
PRGI NO: KARKAN/2018/78481 vikramavahini@gmail.com
93535 91145
Printed by B.N. Murali Prasad, Published by Swarna Latha B.N., and Printed at Swarna Graphics, Forest Layout, Jnanabharathi, Bangalore -560059 and Published at Bangalore, Editor: B.N. Murali Prasad., Volume:9, Issue : 170,